Volume : 9 | Issue : 142 | August : 19 : 2026 : Wednesday
ಸಂಪುಟ : ೯ | ಸಂಚಿಕೆ : 142 | ಆಗಸ್ಟ್ : 19 : 2026 : ಬುಧವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ
ಪುಟ 4 | ₹2 | ಕನ್ನಡ ದಿನಪತ್ರಿಕೆ
VIKRAMA VAHINI
PRGI NO: KARKAN/2018/78481



ಆಂಕರಿಂಗ್‌ಗೆ ಅನುಪಮಾ ಗೌಡ ಗುಡ್‌ಬೈ: ವಾಹಿನಿಯ ಭರವಸೆಗಳಿಂದ ಬೇಸರ, ಇನ್ನು ನಟನೆಯತ್ತ ಹೆಚ್ಚು ಗಮನ ಹರಿಸುವ ಸುಳಿವು ನೀಡಿದ್ದಾರೆ.

ತಿರುಮಲ ದರ್ಶನ, ವಸತಿ ಟಿಕೆಟ್ ದಿನಾಂಕ ಪ್ರಕಟ ಪುಟ 3

‘ಒಕ್ಕೂಟ ವ್ಯವಸ್ಥೆಯಲ್ಲಿ ಬೇರೆ ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಸಲ್ಲದು’ ಪುಟ 4



# ನಕಲಿ ಔಷಧಿ ದಂಧೆ

ರಾಮನಗರದ ಫಾರಂಹೌಸ್‌ನಲ್ಲಿ ನಡೆಯುತ್ತಿದ್ದ ನಕಲಿ ಔಷಧ ಮರುಪ್ಯಾಕಿಂಗ್ ಜಾಲವನ್ನು ಪೊಲೀಸರು ಹಾಗೂ ಔಷಧ ನಿಯಂತ್ರಣ ಅಧಿಕಾರಿಗಳು ಜಂಟಿ ಕಾರ್ಯಾಚರಣೆಯಲ್ಲಿ ಪತ್ತೆಹಚ್ಚಿದ್ದಾರೆ. ದಾಳಿ ವೇಳೆ ರೂ 6 ಕೋಟಿ ಮೌಲ್ಯದ ಔಷಧಗಳು, ಲೇಬಲ್‌ಗಳು, ಖಾಲಿ ಬಾಟಲಿಗಳು ಹಾಗೂ ಅವಧಿ ಮೀರಿದ ಔಷಧಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಒಬ್ಬನನ್ನು ವಶಕ್ಕೆ ಪಡೆದು ತನಿಖೆ ಮುಂದುವರಿಸಲಾಗಿದೆ.

● ವಿಕ್ರಮ ವಾಹಿನಿ । ರಾಮನಗರ

ಬೆಂಗಳೂರು ದಕ್ಷಿಣ ತಾಲ್ಲೂಕಿನ ಸಿ.ಕೆ. ತಾಂಡ್ಯಾ ಗ್ರಾಮದ ಫಾರಂಹೌಸ್‌ನಲ್ಲಿ ಅಕ್ರಮವಾಗಿ ನಕಲಿ ಔಷಧಗಳನ್ನು ಮರುಪ್ಯಾಕಿಂಗ್ ಮಾಡಿ ಮಾರಾಟ ಮಾಡುತ್ತಿದ್ದ ಜಾಲವನ್ನು ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ಇಲಾಖೆ ಹಾಗೂ ರಾಮನಗರ ಜಿಲ್ಲಾ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಪತ್ತೆಹಚ್ಚಿದ್ದಾರೆ. ದಾಳಿ ವೇಳೆ ಸುಮಾರು ರೂ 6 ಕೋಟಿ ಮೌಲ್ಯದ ಔಷಧಗಳು ಹಾಗೂ ದಂಧೆಗೆ ಬಳಸುತ್ತಿದ್ದ ವಿವಿಧ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಕಾರ್ಯಾಚರಣೆಯಲ್ಲಿ ದಂಧೆಗೆ ಸಂಬಂಧಿಸಿದ ಒಬ್ಬನನ್ನು ವಶಕ್ಕೆ ಪಡೆಯಲಾಗಿದ್ದು, ಪ್ರಕರಣದ ಹಿಂದೆ ಇನ್ನಷ್ಟು ಮಂದಿ ಭಾಗಿಯಾಗಿರುವ ಶಂಕೆಯ ಹಿನ್ನೆಲೆಯಲ್ಲಿ ತನಿಖೆ ಮುಂದುವರಿದಿದೆ.

**ಫಾರಂಹೌಸ್‌ನಲ್ಲಿ ರಹಸ್ಯ ಕಾರ್ಯಾಚರಣೆ**

ಸ್ಥಳೀಯರೊಬ್ಬರಿಗೆ ಸೇರಿದ ಫಾರಂಹೌಸ್ ಅನ್ನು ಬಾಡಿಗೆಗೆ ಪಡೆದಿದ್ದ ಆರೋಪಿಗಳು, ವಿವಿಧೆಡೆಯಿಂದ ಕಡಿಮೆ ಬೆಲೆಯ ಔಷಧಗಳನ್ನು ತರಿಸಿಕೊಂಡು ಅವುಗಳಿಗೆ ಹೆಚ್ಚಿನ ಬೆಲೆಯ ಲೇಬಲ್‌ಗಳನ್ನು ಅಂಟಿಸಿ ಮರುಪ್ಯಾಕಿಂಗ್ ಮಾಡುತ್ತಿದ್ದರು ಎನ್ನಲಾಗಿದೆ. ಜನವಸತಿ ಪ್ರದೇಶದಿಂದ ಸ್ವಲ್ಪ ದೂರದಲ್ಲಿದ್ದ ಫಾರಂಹೌಸ್‌ನಲ್ಲಿ ಈ ಚಟುವಟಿಕೆ ನಡೆಯುತ್ತಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಖಚಿತ ಮಾಹಿತಿ ಆಧರಿಸಿ ಸುಮಾರು 30 ಅಧಿಕಾರಿಗಳ ತಂಡ ರಾತ್ರಿ ವೇಳೆ ಫಾರಂಹೌಸ್ ಮೇಲೆ ದಾಳಿ ನಡೆಸಿ ಪರಿಶೀಲನೆ ನಡೆಸಿತು. ಈ ವೇಳೆ ಪ್ಯಾಕ್ ಮಾಡಲಾಗಿದ್ದ ಔಷಧಗಳು, ವಿವಿಧ ಕಂಪನಿಗಳ ಲೇಬಲ್‌ಗಳು, ಖಾಲಿ ಬಾಟಲಿಗಳು, ಅವಧಿ ಮೀರಿದ ಔಷಧಗಳು ಸೇರಿದಂತೆ ಹಲವು ವಸ್ತುಗಳು ಪತ್ತೆಯಾಗಿವೆ.

**ರೂ 600ರ ಔಷಧಕ್ಕೆ ರೂ 6 ಸಾವಿರದ ಲೇಬಲ್**

ತೆಲಂಗಾಣ, ಹಿಮಾಚಲ ಪ್ರದೇಶ ಸೇರಿದಂತೆ ವಿವಿಧ ರಾಜ್ಯಗಳಿಂದ ಔಷಧಗಳನ್ನು ತರಿಸಿಕೊಂಡು ಅವುಗಳನ್ನು ಮರುಪ್ಯಾಕಿಂಗ್ ಮಾಡಲಾಗುತ್ತಿತ್ತು ಎನ್ನಲಾಗಿದೆ. ಸುಮಾರು ರೂ 600 ಮೌಲ್ಯದ ಔಷಧಕ್ಕೆ ರೂ 6,000 ಬೆಲೆಯ ಲೇಬಲ್ ಅಂಟಿಸಿ ಮಾರಾಟ ಮಾಡಲಾಗುತ್ತಿತ್ತು ಎಂದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ.

ಈ ಮೂಲಕ ಗ್ರಾಹಕರಿಗೆ ಹೆಚ್ಚಿನ ಬೆಲೆಗೆ ಔಷಧಗಳನ್ನು ಮಾರಾಟ ಮಾಡಿ ಭಾರಿ ಪ್ರಮಾಣದ ಹಣ ಗಳಿಸುವ ದಂಧೆ ನಡೆಯುತ್ತಿತ್ತು ಎಂಬ ಶಂಕೆ ವ್ಯಕ್ತವಾಗಿದೆ. 2ನೇ ಪುಟಕ್ಕೆ...

## ■ ಸುದ್ದಿ ಚುಟುಕು

## ಖರ್ಗೆ ಟ್ರಸ್ಟ್ ನಿವೇಶನ: ದೂರಿನ ಪ್ರತಿ ಕೇಳಿದ ಕೋರ್ಟ್

● ವಿಕ್ರಮ ವಾಹಿನಿ । ಬೆಂಗಳೂರು

ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಬಿಡಿಎಯಿಂದ ನಿಯಮಬಾಹಿರವಾಗಿ ನಿವೇಶನ ಮಂಜೂರು ಮಾಡಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ, ಖಾಸಗಿ ದೂರಿನ ಪ್ರತಿಯನ್ನು ಸಲ್ಲಿಸುವಂತೆ ಹೈಕೋರ್ಟ್ ದೂರುದಾರರ ಪರ ವಕೀಲರಿಗೆ ಸೂಚಿಸಿದೆ.

ಲಂಚಮುಕ್ತ ಕರ್ನಾಟಕ ವೇದಿಕೆಯ ರಾಜ್ಯಾಧ್ಯಕ್ಷ ವಿಜಯರಾಘವ ಮರಾಠೆ ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಪೀಠ, ವಿಶೇಷ ನ್ಯಾಯಾಲಯದ ಕ್ರಮ ಪ್ರಶ್ನಿಸಿರುವ ಅರ್ಜಿಗೆ ಸಂಬಂಧಿಸಿದ ದೂರಿನ ಪ್ರತಿ ಸಲ್ಲಿಸುವಂತೆ ಸೂಚಿಸಿ ವಿಚಾರಣೆಯನ್ನು ಮುಂದೂಡಿತು.

ಪ್ರಕರಣದಲ್ಲಿ ಪ್ರಮಾಣಪತ್ರದಲ್ಲಿನ ಕೆಲವು ಗೊಂದಲಗಳ ಹಿನ್ನೆಲೆಯಲ್ಲಿ ವಿಶೇಷ ನ್ಯಾಯಾಲಯವೇ ನೇರವಾಗಿ ವಿಚಾರಣೆ ನಡೆಸಲು ಮುಂದಾಗಿದೆ ಎಂದು ಲೋಕಾಯುಕ್ತ ಪರ ವಕೀಲರು ನ್ಯಾಯಪೀಠಕ್ಕೆ ತಿಳಿಸಿದರು. ಇದಕ್ಕೆ ಪೀಠ, ಪ್ರಮಾಣಪತ್ರದಲ್ಲಿನ ದೋಷದ ಆಧಾರದಲ್ಲಿ ವಿಶೇಷ ನ್ಯಾಯಾಲಯವೇ ವಿಚಾರಣೆ ನಡೆಸಬಹುದೇ ಎಂದು ಪ್ರಶ್ನಿಸಿತು.

ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಬನಶಂಕರಿಯಲ್ಲಿ 8,125 ಚದರ ಮೀಟರ್ ವಿಸ್ತೀರ್ಣದ ಸಿವಿಕ್ ಅಮೆನಿಟಿ ನಿವೇಶನವನ್ನು ಪರಿಶಿಷ್ಟ ಜಾತಿ ಕೋಟಾದಡಿ ನಿಯಮಬಾಹಿರವಾಗಿ ಮಂಜೂರು ಮಾಡಲಾಗಿದೆ ಎಂದು ದೂರುದಾರರು ಆರೋಪಿಸಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಮತ್ತು ಅವರ ಕುಟುಂಬಸ್ಥರು ಟ್ರಸ್ಟ್‌ಗೆ ಸಂಬಂಧ ಹೊಂದಿರುವ ಹಿನ್ನೆಲೆಯಲ್ಲಿ ಅಧಿಕಾರ ದುರುಪಯೋಗ ಹಾಗೂ ನಿಯಮ ಉಲ್ಲಂಘನೆಯಾಗಿದೆ ಎಂದು ದೂರಿನಲ್ಲಿ ಹೇಳಲಾಗಿದೆ.

ಬಳಿಕ ಬಿಟಿಎಂ ಲೇಔಟ್‌ನಲ್ಲಿ ಸುಮಾರು 130 ಕೋಟಿ ಮೌಲ್ಯದ ಪರ್ಯಾಯ ನಿವೇಶನವನ್ನು ಟ್ರಸ್ಟ್‌ಗೆ ವರ್ಗಾಯಿಸಲಾಗಿದೆ. ಈ ಬಗ್ಗೆ ಭ್ರಷ್ಟಾಚಾರ ತಡೆ ಕಾಯ್ದೆಯಡಿ ತನಿಖೆ ನಡೆಸುವಂತೆ ದೂರುದಾರರು ಕೋರಿದ್ದಾರೆ.

## 4 ದಿನ ಭಾರಿ ಮಳೆ: ಐಎಂಡಿ



● ವಿಕ್ರಮ ವಾಹಿನಿ । ನವದೆಹಲಿ

ಕರ್ನಾಟಕ ಸೇರಿದಂತೆ ದೇಶದ ಹಲವು ರಾಜ್ಯಗಳಲ್ಲಿ ಆಗಸ್ಟ್ 22ರವರೆಗೆ ವ್ಯಾಪಕ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ. ಪೂರ್ವ ರಾಜಸ್ಥಾನ, ಹಿಮಾಚಲ ಪ್ರದೇಶ, ಉತ್ತರ ಪ್ರದೇಶ, ಛತ್ತೀಸ್‌ಗಢ ಸೇರಿದಂತೆ ಹಲವು ಪ್ರದೇಶಗಳಲ್ಲಿ ಭಾರಿ ಮಳೆಯ ಎಚ್ಚರಿಕೆ ನೀಡಲಾಗಿದೆ.

ಕರ್ನಾಟಕಕ್ಕೂ ಮಳೆ: ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ, ತಮಿಳುನಾಡು, ಕೇರಳ, ಪುದುಚೇರಿ ಸೇರಿದಂತೆ ದಕ್ಷಿಣ ಭಾರತದ ಹಲವು ಭಾಗಗಳಲ್ಲಿ ಮುಂದಿನ ನಾಲ್ಕು ದಿನ ಮಳೆಯಾಗುವ ಸಾಧ್ಯತೆಯಿದೆ. ಗುಜರಾತ್, ಕೊಂಕಣ ಮತ್ತು ಗೋವಾದಲ್ಲೂ ವ್ಯಾಪಕ ಮಳೆಯ ಮುನ್ಸೂಚನೆ ಇದೆ.

ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತದ ಪರಿಣಾಮ ಪೂರ್ವ ಮತ್ತು ಮಧ್ಯ ಭಾರತದಲ್ಲಿ ಮಳೆ ಚಟುವಟಿಕೆ ಚುರುಕುಗೊಳ್ಳುವ ಸಾಧ್ಯತೆಯಿದೆ. ಒಡಿಶಾ, ಜಾರ್ಖಂಡ್, ಬಿಹಾರ ಹಾಗೂ ಪಶ್ಚಿಮ ಬಂಗಾಳದಲ್ಲಿ ವ್ಯಾಪಕ ಮಳೆಯ ನಿರೀಕ್ಷೆಯಿದೆ.

ಉತ್ತರ ಭಾರತದಲ್ಲೂ ಮಳೆ: ಜಮ್ಮು–ಕಾಶ್ಮೀರ, ಲಡಾಖ್, ಹಿಮಾಚಲ ಪ್ರದೇಶ, ಉತ್ತರಾಖಂಡ, ಪಂಜಾಬ್, ಹರಿಯಾಣ, ದೆಹಲಿ, ರಾಜಸ್ಥಾನ ಮತ್ತು ಉತ್ತರ ಪ್ರದೇಶದ ಕೆಲವು ಭಾಗಗಳಲ್ಲಿ ಭಾರಿ ಮಳೆಯಾಗಬಹುದು. ಹಿಮಾಚಲ ಪ್ರದೇಶ ಹಾಗೂ ಪಶ್ಚಿಮ ಉತ್ತರ ಪ್ರದೇಶದಲ್ಲಿ ಹೆಚ್ಚಿನ ಮಳೆಯ ಸಾಧ್ಯತೆಯಿದೆ.


ಮಧ್ಯಪ್ರದೇಶ, ಛತ್ತೀಸ್‌ಗಢ ಮತ್ತು ವಿದರ್ಭದಲ್ಲೂ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಈಶಾನ್ಯ ರಾಜ್ಯಗಳಲ್ಲೂ ವ್ಯಾಪಕ ಮಳೆಯ ನಿರೀಕ್ಷೆಯಿದೆ.

ಭಾರಿ ಮಳೆಯ ಹಿನ್ನೆಲೆಯಲ್ಲಿ ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವುದು ಹಾಗೂ ಸ್ಥಳೀಯ ಪ್ರವಾಹ ಉಂಟಾಗುವ ಸಾಧ್ಯತೆಯಿರುವುದರಿಂದ ಜನರು ಮುನ್ನೆಚ್ಚರಿಕೆ ವಹಿಸುವಂತೆ ಹವಾಮಾನ ಇಲಾಖೆ ಸೂಚಿಸಿದೆ.

## ಮಾಜಿ ಶಿಕ್ಷಣ ಸಚಿವ ಬಿ.ಸಿ. ನಾಗೇಶ್ ನಿಧನ

● ವಿಕ್ರಮ ವಾಹಿನಿ । ಬೆಂಗಳೂರು

ಬಿಜೆಪಿಯ ಹಿರಿಯ ನಾಯಕ ಹಾಗೂ ಮಾಜಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಬಿ.ಸಿ. ನಾಗೇಶ್ (67) ಅವರು ಮಂಗಳವಾರ ರಾತ್ರಿ ಬೆಂಗಳೂರಿನಲ್ಲಿ ನಿಧನರಾದರು. ದೀರ್ಘಕಾಲದಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಜಯನಗರದಲ್ಲಿರುವ ಪುತ್ರಿಯ ನಿವಾಸದಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಆರೋಗ್ಯ ಸ್ಥಿತಿ ಕ್ಷೀಣಿಸಿದ ಹಿನ್ನೆಲೆಯಲ್ಲಿ ಕೊನೆಯುಸಿರೆಳೆದಿದ್ದಾರೆ.



ತಿಪಟೂರು ವಿಧಾನಸಭಾ ಕ್ಷೇತ್ರದಿಂದ ಬಿಜೆಪಿ ಯಿಂದ ಎರಡು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದ ನಾಗೇಶ್ ಅವರು, ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರದಲ್ಲಿ 2021ರಿಂದ 2023ರವರೆಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸಕಾಲ ಇಲಾಖೆಯ ಸಚಿವರಾಗಿ ಸೇವೆ ಸಲ್ಲಿಸಿದ್ದರು. ಶಿಕ್ಷಣ ಸಚಿವರಾಗಿದ್ದ ಅವಧಿಯಲ್ಲಿ ಹಲವು ಮಹತ್ವದ ನಿರ್ಧಾರಗಳ ಮೂಲಕ ಗಮನ ಸೆಳೆದಿದ್ದರು. ನಾಗೇಶ್ ಅವರ ಪಾರ್ಥಿವ ಶರೀರವನ್ನು ಮಂಗಳವಾರ ರಾತ್ರಿ ಬೆಂಗಳೂರಿನಿಂದ ತಿಪಟೂರಿಗೆ ಕೊಂಡೊಯ್ಯಲಾಗುತ್ತಿದೆ. ಬುಧವಾರ (ಆ.19) ತಿಪಟೂರಿನಲ್ಲಿ ಸಾರ್ವಜನಿಕ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದ್ದು, ಬಳಿಕ ಧಾರ್ಮಿಕ ವಿಧಿವಿಧಾನಗಳೊಂದಿಗೆ ಅಂತ್ಯಕ್ರಿಯೆ ನೆರವೇರಲಿದೆ. ಅವರ ನಿಧನಕ್ಕೆ ಬಿಜೆಪಿ ನಾಯಕರು ಸೇರಿದಂತೆ ವಿವಿಧ ಪಕ್ಷಗಳ ರಾಜಕೀಯ ಗಣ್ಯರು ಸಂತಾಪ ಸೂಚಿಸಿದ್ದಾರೆ. ಸರಳ ನಡೆ, ಪಕ್ಷ ಸಂಘಟನೆಯ ಬದ್ಧತೆ ಹಾಗೂ ಸಾರ್ವಜನಿಕ ಸೇವೆಯನ್ನು ಸ್ಮರಿಸಿರುವ ಗಣ್ಯರು, ನಾಗೇಶ್ ಅವರ ಅಗಲಿಕೆ ರಾಜ್ಯ ರಾಜಕೀಯಕ್ಕೆ ತುಂಬಲಾರದ ನಷ್ಟ ಎಂದು ಕಂಬನಿ ಮಿಡಿದಿದ್ದಾರೆ.

## ಕೆಪಿಎಸ್‌ಸಿ ಸಾಹುಕಾರ್‌ಗೆ ಹೈಕೋರ್ಟ್ ರಿಲೀಫ್

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರನ್ನು ಅಮಾನತುಗೊಳಿಸಿ ರಾಜ್ಯಪಾಲರು ಹೊರಡಿಸಿದ್ದ ಆದೇಶವನ್ನು ಹೈಕೋರ್ಟ್ ರದ್ದುಪಡಿಸಿದೆ. ಅಲ್ಲದೆ, ಆದೇಶದ ಪ್ರತಿ ದೊರೆತ ಏಳು ದಿನಗಳೊಳಗೆ ಸಾಹುಕಾರ್ ಅವರನ್ನು ಕೆಪಿಎಸ್‌ಸಿ ಅಧ್ಯಕ್ಷರಾಗಿ ಮರುನೇಮಕ ಮಾಡಬೇಕು ಎಂದು ನ್ಯಾಯಾಲಯ ಸೂಚಿಸಿದೆ.

ನ್ಯಾಯಮೂರ್ತಿ ಸೂರಜ್ ಗೋವಿಂದರಾಜು ಅವರಿದ್ದ ಏಕಸದಸ್ಯ ಪೀಠ ಈ ತೀರ್ಪು



ಪ್ರಕಟಿಸಿದೆ. ಸಚಿವ ಸಂಪುಟದ ಸಲಹೆಗೂ ಮುನ್ನ ರಾಜ್ಯಪಾಲರು ಅಮಾನತು ಆದೇಶ ಹೊರಡಿಸಿರುವುದು ಸಾಂವಿಧಾನಿಕವಾಗಿ ಸರಿಯಾಗಿಲ್ಲ ಎಂಬ ಕಾರಣಕ್ಕೆ ಆದೇಶವನ್ನು ರದ್ದುಪಡಿಸಲಾಗಿದೆ. 2ನೇ ಪುಟಕ್ಕೆ...

### ಬೆಂಗಳೂರಿನ ನಿವಾಸ ಸೇರಿ 13 ಕಡೆ ದಾಳಿ

● ವಿಕ್ರಮ ವಾಹಿನಿ । ಬೆಂಗಳೂರು

ಕೆಪಿಎಸ್‌ಸಿ ನೇಮಕಾತಿ ಅಕ್ರಮ ಆರೋಪದ ಹಿನ್ನೆಲೆಯಲ್ಲಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಸೇರಿದಂತೆ ರಾಜ್ಯದ 13 ಕಡೆ ಇಡಿ ಅಧಿಕಾರಿಗಳು ಶೋಧ ನಡೆಸಿದರು. 3ನೇ ಪುಟಕ್ಕೆ...

## ಸದನದಲ್ಲಿ ನಾಗೇಂದ್ರ ವಿರುದ್ಧ ಪ್ರತಿಭಟನೆ

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣಕಾಸು ಅಕ್ರಮ ಪ್ರಕರಣದಲ್ಲಿ ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ–ಜೆಡಿಎಸ್ ಸದಸ್ಯರು ವಿಧಾನಸಭೆಯಲ್ಲಿ ಪ್ರತಿಭಟನೆ ಮುಂದುವರಿಸಿದರು. ‘187 ಕೋಟಿ’ ಹಣದ ವಿಚಾರಕ್ಕೆ ಆಡಳಿತ–ವಿಪಕ್ಷಗಳ ನಡುವೆ ವಾಗ್ವಾದ ನಡೆದಿದ್ದು, ಅಶೋಕ್–ಬಾಲಕೃಷ್ಣ ನಡುವೆ ಮಾತಿನ ಚಕಮಕಿ ನಡೆಯಿತು. ಬಳಿಕ ಬರಗಾಲ ಚರ್ಚೆಗೂ ಅವಕಾಶ ನೀಡಲಾಯಿತು.

● ವಿಕ್ರಮ ವಾಹಿನಿ । ಬೆಂಗಳೂರು

ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ವಿಧಾನಸಭೆಯಲ್ಲಿ ಮಂಗಳವಾರವೂ ಪ್ರತಿಭಟನೆ ಮುಂದುವರಿಸಿದರು. ಕಪ್ಪು ಶಾಲು ಧರಿಸಿ ಘೋಷಣೆ ಕೂಗಿದ ವಿಪಕ್ಷ ಸದಸ್ಯರು, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣಕಾಸು ಅಕ್ರಮಕ್ಕೆ ಸಚಿವರು ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಭೋಜನ ವಿರಾಮದ ಬಳಿಕ ಕಲಾಪ ಆರಂಭವಾಗುತ್ತಿದ್ದಂತೆ ವಿಪಕ್ಷ ಸದಸ್ಯರು ಪ್ರತಿಭಟನೆ ನಡೆಸಿದರು. ಈ ವೇಳೆ ಆಡಳಿತ ಹಾಗೂ ಪ್ರತಿಪಕ್ಷಗಳ ನಡುವೆ ತೀವ್ರ ವಾಗ್ವಾದ ನಡೆಯಿತು. ಬಿಜೆಪಿ ಸದಸ್ಯರು ರೂ 187 ಕೋಟಿ ಹಣದ ಕುರಿತು ಘೋಷಣೆ ಕೂಗಿದರೆ, ಸಚಿವ ಕೃಷ್ಣ ಬೈರೇಗೌಡ ಅವರು ನೋಟಿಸ್ ನೀಡದೆ ಆರೋಪ ಮಾಡುವುದು ಸದನದ ನಿಯಮಗಳಿಗೆ ವಿರುದ್ಧ ಎಂದು ಆಕ್ಷೇಪಿಸಿದರು. ಘೋಷಣೆಗಳನ್ನು ಕಡತಕ್ಕೆ ಸೇರಿಸದಂತೆ ಸ್ಪೀಕರ್ ಸೂಚಿಸಿದರು.

**ಅಶೋಕ್–ಬಾಲಕೃಷ್ಣ ವಾಕ್ಸಮರ**

ಪ್ರತಿಭಟನೆ ವೇಳೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಹಾಗೂ ಸಚಿವ ಬಾಲಕೃಷ್ಣ ನಡುವೆ ತೀವ್ರ ಮಾತಿನ ಚಕಮಕಿ ನಡೆಯಿತು. ಬರಗಾಲ ಘೋಷಣೆ ಹಾಗೂ ರೈತರಿಗೆ ಪರಿಹಾರ ನೀಡುವ ವಿಚಾರದಲ್ಲೂ ಇಬ್ಬರ ನಡುವೆ ವಾಗ್ವಾದ ನಡೆಯಿತು.

**ಬರಗಾಲ ಚರ್ಚೆಗೆ ಅವಕಾಶ**

ಇದೇ ವೇಳೆ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ರೇವಣ್ಣ ಸಲ್ಲಿಸಿದ್ದ ಬರಗಾಲ ಕುರಿತ ನಿಲುವಳಿ ಸೂಚನೆ ಮೇಲೆ ಚರ್ಚೆಗೆ ಸ್ಪೀಕರ್ ಅವಕಾಶ ನೀಡಿದರು. ನಿಯಮ 69ರಡಿ ಚರ್ಚೆಗೆ ಅವಕಾಶ ನೀಡಿದ್ದನ್ನು ಬಿಜೆಪಿ ಸದಸ್ಯರು ಆಕ್ಷೇಪಿಸಿದರು.

ಜೆಡಿಎಸ್ ಸದಸ್ಯರು ಮೊದಲು ನಾಗೇಂದ್ರ ರಾಜೀನಾಮೆ ಪಡೆಯಬೇಕು, ಬಳಿಕ ಬರ ಪರಿಹಾರದ ಕುರಿತು ಚರ್ಚಿಸಬೇಕು ಎಂದು ಆಗ್ರಹಿಸಿದರು. ಪರಿಣಾಮ ಸದನದಲ್ಲಿ ಕೆಲಕಾಲ ಗದ್ದಲದ ವಾತಾವರಣ ನಿರ್ಮಾಣವಾಯಿತು.

ಬರಗಾಲದಿಂದ ರೈತರು ಸಂಕಷ್ಟದಲ್ಲಿದ್ದು, ಸರ್ಕಾರ ತಕ್ಷಣ ಬರ ಘೋಷಿಸಿ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ವಿಪಕ್ಷ ಸದಸ್ಯರು ಆಗ್ರಹಿಸಿದರು. ನಾಗೇಂದ್ರ ರಾಜೀನಾಮೆ ಹಾಗೂ ಬರ ಪರಿಹಾರ ವಿಚಾರಗಳು ಏಕಕಾಲದಲ್ಲಿ ಪ್ರಸ್ತಾಪವಾದ ಹಿನ್ನೆಲೆಯಲ್ಲಿ ಸದನದಲ್ಲಿ ಕೆಲಕಾಲ ಗದ್ದಲದ ವಾತಾವರಣ ಮುಂದುವರಿಯಿತು.

## ಪಶುವೈದ್ಯ ನೇಮಕ ಅಕ್ರಮ: ಶಿಕ್ಷಕರ ಮನೆಗೆ ಇಡಿ ದಾಳಿ

● ವಿಕ್ರಮ ವಾಹಿನಿ । ಚಿಕ್ಕಬಳ್ಳಾಪುರ

ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ಗೌರಿಬಿದನೂರಿನ ಕರೇಕಲ್ಲಹಳ್ಳಿಯ ವಿದ್ಯಾನಗರದಲ್ಲಿರುವ ಶಿಕ್ಷಕ ದಂಪತಿಯ ನಿವಾಸದ ಮೇಲೆ ಮಂಗಳವಾರ ದಾಳಿ ನಡೆಸಿದರು.

ಶಿಕ್ಷಕರಾದ ರಾಮಕೃಷ್ಣಪ್ಪ ಮತ್ತು ರೇಣುಕಮ್ಮ ಅವರ ಮನೆಗೆ ಬೆಳಿಗ್ಗೆಯೇ ಅಧಿಕಾರಿಗಳ ತಂಡ ವ್ಯಾಪಕ ಭದ್ರತೆಯೊಂದಿಗೆ ಆಗಮಿಸಿ ಶೋಧ ಕಾರ್ಯಾಚರಣೆ ನಡೆಸಿತು. ನೇಮಕಾತಿಗೆ ಸಂಬಂಧಿಸಿದ ದಾಖಲೆಗಳು ಹಾಗೂ ಇತರ ಮಾಹಿತಿಗಳ ಕುರಿತು ಅಧಿಕಾರಿಗಳು ಪರಿಶೀಲನೆ ನಡೆಸಿದರು ಎಂದು ತಿಳಿದುಬಂದಿದೆ.

ರಾಮಕೃಷ್ಣಪ್ಪ–ರೇಣುಕಮ್ಮ ದಂಪತಿಯ ಪುತ್ರ ಲೋಕೇಶ್ ಅವರು ಕರ್ನಾಟಕ ಲೋಕಸೇವಾ ಆಯೋಗ ಪ್ರಕಟಿಸಿದ್ದ ಪಶುವೈದ್ಯಾಧಿಕಾರಿ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದರು.

ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಈ ಆಯ್ಕೆ ಪ್ರಕ್ರಿಯೆಯೂ ತನಿಖೆಯ ವ್ಯಾಪ್ತಿಗೆ ಬಂದಿರುವುದಾಗಿ ಮೂಲಗಳು ತಿಳಿಸಿವೆ.

ಆದರೆ, ದಾಳಿ ವೇಳೆ ಯಾವುದೇ ವಸ್ತು ಅಥವಾ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆಯೇ ಎಂಬ ಬಗ್ಗೆ ಇಡಿ ಅಧಿಕಾರಿಗಳಿಂದ ಅಧಿಕೃತ ಮಾಹಿತಿ ಲಭ್ಯವಾಗಿಲ್ಲ. ಶೋಧದ ಬಳಿಕ ಲಭ್ಯವಾಗುವ ದಾಖಲೆಗಳು ಹಾಗೂ ಮಾಹಿತಿಯ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ.

ಈ ದಾಳಿ ಪಶುವೈದ್ಯಾಧಿಕಾರಿ ನೇಮಕಾತಿ ಅಕ್ರಮ ಪ್ರಕರಣದ ತನಿಖೆಗೆ ಸಂಬಂಧಿಸಿದ ಮಹತ್ವದ ಬೆಳವಣಿಗೆಯಾಗಿದೆ.

ನೇಮಕಾತಿಯಲ್ಲಿ ಹಣದ ವಹಿವಾಟು ಅಥವಾ ಅಕ್ರಮ ನಡೆದಿದೆಯೇ ಎಂಬುದರ ಕುರಿತು ಲಭ್ಯ ದಾಖಲೆಗಳು ಹಾಗೂ ಇತರ ಸಾಕ್ಷ್ಯಗಳನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ನೇಣು ಹಾಕಿದ್ರೂ ನಾವು ‘ವಂದೇ ಮಾತರಂ’ ಎರಡು ಪ್ಯಾರಾ ಅಷ್ಟೇ ಹಾಡೋದು

● ವಿಕ್ರಮ ವಾಹಿನಿ । ನವದೆಹಲಿ

‘ವಂದೇ ಮಾತರಂ’ ಗೀತೆಗೆ ಕಾಂಗ್ರೆಸ್ ವಿರೋಧವಿಲ್ಲ. ಆದರೆ ಪಕ್ಷದ ಕಾರ್ಯಕ್ರಮಗಳಲ್ಲಿ ಗೀತೆಯ ಎರಡು ಪ್ಯಾರಾಗಳನ್ನು ಮಾತ್ರ ಹಾಡಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಸ್ಪಷ್ಟಪಡಿಸಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ಜೈಲಿಗೆ ಹಾಕಿದರೂ, ನೇಣಿಗೆ ಹಾಕಿದರೂ ಎರಡು ಪ್ಯಾರಾಗಳನ್ನಷ್ಟೇ ಹಾಡುತ್ತೇವೆ. ಪೂರ್ಣ ಗೀತೆಯನ್ನು ಕಾಂಗ್ರೆಸ್ ಕಾರ್ಯಕ್ರಮಗಳಲ್ಲಿ ಹಾಡುವುದಿಲ್ಲ” ಎಂದು ಹೇಳಿದರು. ‘ವಂದೇ ಮಾತರಂ’ ಅನ್ನು ಕಡ್ಡಾಯಗೊಳಿಸುವ ಮೂಲಕ ರಾಷ್ಟ್ರಗೀತೆಗೆ ಎರಡನೇ ಸ್ಥಾನ ನೀಡುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಕಾಂಗ್ರೆಸ್‌ಗೆ ಗೀತೆಯ ಬಗ್ಗೆ ಯಾವುದೇ ವಿರೋಧವಿಲ್ಲ ಎಂದರು.

## ನೀಟ್ ಹೋರಾಟ: 2,873 ಮಂದಿ ವಿರುದ್ಧ ಕ್ರಿಮಿನಲ್ ದಾಖಲೆ

● ವಿಕ್ರಮ ವಾಹಿನಿ । ನವದೆಹಲಿ

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಆರೋಪ ಖಂಡಿಸಿ ಜುಲೈ 20ರಂದು ದೆಹಲಿಯಲ್ಲಿ ನಡೆದ ಪ್ರತಿಭಟನೆ ವೇಳೆ 2,873 ಮಂದಿ ಅಪರಾಧ ಹಿನ್ನೆಲೆಯವರು ಭಾಗಿಯಾಗಿದ್ದರು ಎಂದು ದೆಹಲಿ ಪೊಲೀಸರು ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿರುವ ಅಫಿಡವಿಟ್‌ನಲ್ಲಿ ತಿಳಿಸಿದ್ದಾರೆ. ಪ್ರತಿಭಟನೆ ವೇಳೆ ನಡೆದ ಹಿಂಸಾಚಾರದಲ್ಲಿ 240ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಜಂತರ್ ಮಂತರ್ ಹಾಗೂ ಸುತ್ತಮುತ್ತ ನಡೆದ ಪ್ರತಿಭಟನೆಯಲ್ಲಿ 30 ಸಾವಿರಕ್ಕೂ ಅಧಿಕ ಮಂದಿ ಸೇರಿದ್ದರು. ಪ್ರತಿಭಟನಾಕಾರರು ಸಂಸತ್ತಿನತ್ತ ಮುನ್ನಡೆಯಲು ಯತ್ನಿಸಿದ ಸಂದರ್ಭದಲ್ಲಿ ಪರಿಸ್ಥಿತಿ ಉದ್ವಿಗ್ನಗೊಂಡು ಹಿಂಸಾಚಾರಕ್ಕೆ ತಿರುಗಿತ್ತು. ಹಲವು ಬಾರಿ ಎಚ್ಚರಿಕೆ ನೀಡಿ ಹಿಂದೆ ಸರಿಯುವಂತೆ ಸೂಚಿಸಿದರೂ ಪ್ರತಿಭಟನಾಕಾರರು ಮುಂದುವರಿದ ಹಿನ್ನೆಲೆಯಲ್ಲಿ ಪೊಲೀಸರು ಕ್ರಮ ಕೈಗೊಂಡರು ಎಂದು ಅಫಿಡವಿಟ್‌ನಲ್ಲಿ ವಿವರಿಸಲಾಗಿದೆ.

ಪೊಲೀಸರ ದಾಖಲೆಗಳ ಪ್ರಕಾರ, ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ 2,873 ಮಂದಿಗೆ ಅಪರಾಧ ಹಿನ್ನೆಲೆ ಇದೆ. ಇವರಲ್ಲಿ 92 ಮಂದಿ ವಿರುದ್ಧ ತಲಾ 10ಕ್ಕೂ ಹೆಚ್ಚು ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ. ಮತ್ತೂ 47 ಮಂದಿ ಗಂಭೀರ ಅಪರಾಧ ಹಿನ್ನೆಲೆ ಹೊಂದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರತಿಭಟನೆಯ ವೇಳೆ ಕೆಲವರು ಪೊಲೀಸರ ಮೇಲೆ ಕಲ್ಲು ಹಾಗೂ ದೊಣ್ಣೆಗಳಿಂದ ದಾಳಿ ನಡೆಸಿದ್ದಾರೆ. ಈ ಘಟನೆಗಳಿಗೆ ಸಂಬಂಧಿಸಿದ ವಿಡಿಯೋ, ಡಿಜಿಟಲ್ ದಾಖಲೆಗಳು ಹಾಗೂ ಇತರ ಸಾಕ್ಷ್ಯಗಳು ಲಭ್ಯವಿವೆ ಎಂದು ಪೊಲೀಸರು ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

ಹಿಂಸಾಚಾರ ಮತ್ತಷ್ಟು ವ್ಯಾಪಿಸುವುದನ್ನು ತಡೆಯಲು ಪರಿಸ್ಥಿತಿಗೆ ಅನುಗುಣವಾಗಿ ಅಗತ್ಯವಿರುವಷ್ಟು ಕನಿಷ್ಠ ಬಲವನ್ನಷ್ಟೇ ಬಳಸಲಾಗಿದೆ ಎಂದು ದೆಹಲಿ ಪೊಲೀಸರು ತಮ್ಮ ಕ್ರಮವನ್ನು ಸಮರ್ಥಿಸಿಕೊಂಡಿದ್ದಾರೆ. ಪ್ರತಿಭಟನಾಕಾರರಲ್ಲಿಯೂ ಕೆಲವರು ಗಾಯಗೊಂಡಿದ್ದು, ಎರಡೂ ಕಡೆಗಳಲ್ಲಿನ ಘಟನೆಗಳ ಕುರಿತು ನಿಷ್ಪಕ್ಷಪಾತ ತನಿಖೆ ಅಗತ್ಯ ಎಂದು ಹೇಳಿದ್ದಾರೆ.

ಪ್ರತಿಭಟನೆಗೆ ನೀಡಲಾಗಿದ್ದ ಅನುಮತಿ ಜುಲೈ 20ಕ್ಕೆ ಮುಕ್ತಾಯಗೊಂಡಿದ್ದರೂ, ಪ್ರತಿಭಟನಾಕಾರರು ಸ್ಥಳದಿಂದ ತೆರಳದೆ ಮುಂದುವರಿದಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಶಾಂತಿಯುತವಾಗಿ ಪ್ರತಿಭಟನೆ ನಡೆಸುವುದು ಪ್ರತಿಯೊಬ್ಬ ನಾಗರಿಕನ ಹಕ್ಕು. ಆದರೆ ಅದು ಹಿಂಸಾಚಾರಕ್ಕೆ ತಿರುಗಿ ಸಾರ್ವಜನಿಕರು, ಪೊಲೀಸ್ ಸಿಬ್ಬಂದಿ ಹಾಗೂ ಸಾರ್ವಜನಿಕ ಆಸ್ತಿಗೆ ಹಾನಿಯಾಗುವುದನ್ನು ತಡೆಯುವುದು ಪೊಲೀಸರ ಕರ್ತವ್ಯ ಎಂದು ಅಫಿಡವಿಟ್‌ನಲ್ಲಿ ತಿಳಿಸಲಾಗಿದೆ.

ತಮ್ಮ ಕ್ರಮದ ಕುರಿತು ಸುಪ್ರೀಂ ಕೋರ್ಟ್ ನೇಮಿಸುವ ಯಾವುದೇ ತನಿಖಾ ಸಮಿತಿಯ ಮುಂದೆ ವಿಚಾರಣೆಗೆ ಹಾಜರಾಗಲು ಸಿದ್ಧ ಎಂದು ದೆಹಲಿ ಪೊಲೀಸರು ಸ್ಪಷ್ಟಪಡಿಸಿದ್ದಾರೆ. ಪ್ರತಿಭಟನೆಯಲ್ಲಿ ಬಾಹ್ಯಶಕ್ತಿಗಳು ಭಾಗವಹಿಸಿ ಹಿಂಸಾಚಾರಕ್ಕೆ ಕಾರಣವಾದ ಬಗ್ಗೆ ತನಿಖೆ ಅಗತ್ಯವಿದೆ ಎಂದೂ ಅವರು ತಿಳಿಸಿದ್ದಾರೆ.

### ಪ್ರಮುಖ ಅಂಶಗಳು

- 2,873 ಅಪರಾಧ ಹಿನ್ನೆಲೆಯವರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು ಎಂದು ಪೊಲೀಸರು ಮಾಹಿತಿ.
- 240ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ಗಾಯಗೊಂಡಿದ್ದಾರೆ.
- ಪ್ರತಿಭಟನೆಯಲ್ಲಿ 30 ಸಾವಿರಕ್ಕೂ ಅಧಿಕ ಮಂದಿ ಸೇರಿದ್ದರು.
- 92 ಮಂದಿಯ ವಿರುದ್ಧ 10ಕ್ಕೂ ಹೆಚ್ಚು ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ.
- 47 ಮಂದಿಗೆ ಗಂಭೀರ ಅಪರಾಧ ಹಿನ್ನೆಲೆ ಇದೆ. ಪ್ರತಿಭಟನಾಕಾರರಿಂದ ಪೊಲೀಸರ ಮೇಲೆ ಕಲ್ಲು, ದೊಣ್ಣೆಗಳಿಂದ ದಾಳಿ ನಡೆದಿರುವ ಆರೋಪ.
- ಸಾರ್ವಜನಿಕ ಆಸ್ತಿಗೂ ಹಾನಿಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.
- ಪರಿಸ್ಥಿತಿ ನಿಯಂತ್ರಿಸಲು ಕನಿಷ್ಠ ಬಲಪ್ರಯೋಗ ಮಾಡಲಾಗಿದೆ ಎಂದು ಪೊಲೀಸರ ಸಮರ್ಥನೆ.
- ನ್ಯಾಯಾಲಯ ಸೂಚಿಸುವ ಯಾವುದೇ ತನಿಖೆಗೆ ಸಿದ್ಧ ಎಂದು ದೆಹಲಿ ಪೊಲೀಸರು ತಿಳಿಸಿದ್ದಾರೆ.

## ಶಾಲಾ ಬಾಲಕನ ಮೇಲೆ ಪಿಲ್ಲರ್ ಬಿದ್ದು ಸಾವು

● ವಿಕ್ರಮ ವಾಹಿನಿ । ಚಿಕ್ಕನಾಯಕನಹಳ್ಳಿ

ಹಾಲು ಉತ್ಪಾದಕರ ಸಹಕಾರ ಸಂಘದ ಬಳಿ ಭದ್ರತೆಯಿಲ್ಲದೆ ನಿರ್ಮಿಸಲಾಗಿದ್ದ ಪಿಲ್ಲರ್ ಏಕಾಏಕಿ ಕುಸಿದು ನಾಲ್ಕನೇ ತರಗತಿ ವಿದ್ಯಾರ್ಥಿಯೊಬ್ಬ ಮೃತಪಟ್ಟಿರುವ ಘಟನೆ ತಾಲೂಕಿನ ಬೆಳಿಗೀಹಳ್ಳಿ ಗ್ರಾಮದಲ್ಲಿ ನಡೆದಿದೆ.

ಮೃತನನ್ನು ಬೆಳಿಗೀಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ನಾಲ್ಕನೇ ತರಗತಿ ವಿದ್ಯಾರ್ಥಿ ಧನುಷ್ (10) ಎಂದು ಗುರುತಿಸಲಾಗಿದೆ. ಶಾಲೆಯ ಸಮೀಪವೇ ನಾಲ್ಕು ಪಿಲ್ಲರ್‌ಗಳನ್ನು ಯಾವುದೇ ಸುರಕ್ಷತಾ ಕ್ರಮವಿಲ್ಲದೆ ಹಾಕಲಾಗಿತ್ತು. ವಿದ್ಯಾರ್ಥಿಗಳು ಆ ಪ್ರದೇಶದಲ್ಲಿ ಓಡಾಡುತ್ತಿದ್ದ ವೇಳೆ ಪಿಲ್ಲರ್ ಕುಸಿದಿದ್ದು, ಮೂವರು ಮಕ್ಕಳು ಅಪಾಯದಿಂದ ಪಾರಾಗಿದ್ದಾರೆ. ಆದರೆ ಧನುಷ್ ಪಿಲ್ಲರ್ ಅಡಿಯಲ್ಲಿ ಸಿಲುಕಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ.

ಘಟನೆಯಿಂದ ಗ್ರಾಮದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದ್ದು, ಮೃತ ಬಾಲಕನ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಸ್ಥಳಕ್ಕೆ ತಹಶೀಲ್ದಾರ್ ಮಮತಾ ಹಾಗೂ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಘಟನೆ ಕುರಿತು ಮುಂದಿನ ಕ್ರಮ ಕೈಗೊಂಡಿದ್ದಾರೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

### ಸವಿ ವಾಹಿನಿ

ಸತ್ಯವನ್ನು ತಿಳಿಯುವುದು ಜ್ಞಾನ ಮಾರ್ಗ, ಸತ್ಯವನ್ನು ನಂಬುವುದು ಭಕ್ತಿಮಾರ್ಗ, ಸತ್ಯಪಥದಲ್ಲಿ ನಡೆಯುವುದು ಮುಕ್ತಿಮಾರ್ಗ.

### ದಿನ ಪಂಚಾಂಗ

ಆಗಸ್ಟ್, 19–2026 ವರ್ಷ ಋತು, ಶ್ರಾವಣ ಮಾಸ, ಶುದ್ಧ ಪಕ್ಷ. ಸಪ್ತಮಿ ತಿಥಿ ರಾ–8:22
ಸ್ವಾತಿ ನಕ್ಷತ್ರ ಬೆ–9:11
ರಾಹುಕಾಲ ಮ–12:22–1:56
ಶೀತಲ ಸಪ್ತಮಿ, ವಿಶ್ವ ಛಾಯಾಗ್ರಾಹಕ ದಿನ, ತುಳಸೀದಾಸ ಜಯಂತಿ, ಶಿವಮುಷ್ಟಿ ವ್ರತ, ಸೂರ್ಯ ಪವಿತ್ರಾರೋಪಣ, ವಿನೀತ ಕುಮಾರಸ್ವಾಮಿ ಪುಣ್ಯದಿನ, ಧಾರವಾಡ ಘಾಟಕ ಗುರುನಾಥರಾಯರ ಪುಣ್ಯತಿಥಿ, ಸಂತೆಬೆನ್ನೂರು ಸತ್ಯಾವರತೀರ್ಥ ಆರಾಧನೆ


### ಆಧ್ಯಾತ್ಮ

# ಸೂರ್ಯನ ಪಥ ಬದಲಾವಣೆ: ವಿಶೇಷ ಆಚರಣೆ

ಭಾರತೀಯ ಸಂಸ್ಕೃತಿ ಹಾಗೂ ಜ್ಯೋತಿಷ್ಯ ಪರಂಪರೆಯಲ್ಲಿ ಸೂರ್ಯನ ಚಲನೆಗೆ ವಿಶೇಷ ಮಹತ್ವವಿದೆ. ಸೂರ್ಯನ ಚಲನೆಯನ್ನು ಆಧರಿಸಿ ಉತ್ತರಾಯಣ ಮತ್ತು ದಕ್ಷಿಣಾಯನ ಎಂಬ ಎರಡು ಪ್ರಮುಖ ಕಾಲಘಟ್ಟಗಳನ್ನು ಗುರುತಿಸಲಾಗುತ್ತದೆ. ಇವುಗಳಲ್ಲಿ ದಕ್ಷಿಣಾಯನವು ಧಾರ್ಮಿಕ, ಆಧ್ಯಾತ್ಮಿಕ ಹಾಗೂ ಕೃಷಿ ದೃಷ್ಟಿಯಿಂದ ಮಹತ್ವದ ಅವಧಿಯಾಗಿದ್ದು, ಇದೇ ಅವಧಿಯಲ್ಲಿ ಸಿಂಹಸಂಕ್ರಾಂತಿಯೂ ಸಂಭವಿಸುತ್ತದೆ.

ಸೂರ್ಯನು ಕರ್ಕಾಟಕ ರಾಶಿಗೆ ಪ್ರವೇಶಿಸುವ ಸಂದರ್ಭದಲ್ಲಿ ದಕ್ಷಿಣಾಯನ ಆರಂಭವಾಗುತ್ತದೆ. ಸಾಮಾನ್ಯವಾಗಿ ಜುಲೈ ಮಧ್ಯಭಾಗದಲ್ಲಿ ಆರಂಭವಾಗುವ ಈ ಅವಧಿ ಮಕರ ಸಂಕ್ರಾಂತಿಯವರೆಗೆ ಸುಮಾರು ಆರು ತಿಂಗಳುಗಳ ಕಾಲ ಇರುತ್ತದೆ. ಸೂರ್ಯನು ದಕ್ಷಿಣಾಭಿಮುಖವಾಗಿ ಚಲಿಸುವಂತೆ ಭಾಸವಾಗುವ ಈ ಕಾಲವನ್ನು ದಕ್ಷಿಣಾಯನ ಎಂದು ಕರೆಯಲಾಗುತ್ತದೆ.

ಹಿಂದೂ ಧಾರ್ಮಿಕ ನಂಬಿಕೆಯ ಪ್ರಕಾರ, ಮಾನವನ ಒಂದು ವರ್ಷವು ದೇವತೆಗಳಿಗೆ ಒಂದು ದಿನಕ್ಕೆ ಸಮಾನ.



ಉತ್ತರಾಯಣವನ್ನು ದೇವತೆಗಳ ಹಗಲು ಹಾಗೂ ದಕ್ಷಿಣಾಯನವನ್ನು ದೇವತೆಗಳ ರಾತ್ರಿ ಎಂದು ಪರಿಗಣಿಸಲಾಗುತ್ತದೆ. ಹೀಗಾಗಿ ದಕ್ಷಿಣಾಯನದಲ್ಲಿ ಪೂಜೆ, ವ್ರತ, ಧ್ಯಾನ, ದಾನ, ಪಿತೃ ತರ್ಪಣ ಸೇರಿದಂತೆ ವಿವಿಧ ಆಧ್ಯಾತ್ಮಿಕ ಆಚರಣೆಗಳಿಗೆ ವಿಶೇಷ ಮಹತ್ವ ನೀಡಲಾಗಿದೆ.

ದಕ್ಷಿಣಾಯನ ಅವಧಿಯಲ್ಲೇ ಹಲವು ಪ್ರಮುಖ ಧಾರ್ಮಿಕ ಹಬ್ಬಗಳು ಬರುತ್ತವೆ. ಆಷಾಢದ ಆಚರಣೆಗಳು, ಶ್ರಾವಣ ಮಾಸದ ವ್ರತಗಳು, ನಾಗರಪಂಚಮಿ, ಗಣೇಶ ಚತುರ್ಥಿ, ನವರಾತ್ರಿ ಹಾಗೂ ದೀಪಾವಳಿ ಸೇರಿದಂತೆ ಅನೇಕ ಹಬ್ಬಗಳು ಈ ಅವಧಿಯಲ್ಲಿ ನಡೆಯುತ್ತವೆ. ಪಿತೃಪಕ್ಷ ಹಾಗೂ ಮಹಾಲಯ ಅಮಾವಾಸ್ಯೆಯ ಸಂದರ್ಭದಲ್ಲಿ ಪಿತೃಗಳಿಗೆ ತರ್ಪಣ, ಶ್ರಾದ್ಧ ಮತ್ತಿತರ ವಿಧಿವಿಧಾನಗಳನ್ನು ನೆರವೇರಿಸುವುದು ಸಂಪ್ರದಾಯವಾಗಿದೆ. ಕೃಷಿ ಪ್ರಧಾನ ಸಮಾಜದಲ್ಲಿ ದಕ್ಷಿಣಾಯನಕ್ಕೆ ಮತ್ತೊಂದು ವಿಶೇಷ ಸ್ಥಾನವಿದೆ. ಮಳೆಗಾಲದ ಆಗಮನದಿಂದ ಭೂಮಿಯಲ್ಲಿ ಹಸಿರು ಚಿಗುರು ಮೂಡಿ, ಬೆಳೆಗಳು ಬೆಳೆಯುವ ಕಾಲ ಇದಾಗಿದೆ. ಮಳೆ, ಹವಾಮಾನ ಮತ್ತು ಕೃಷಿ ಚಟುವಟಿಕೆಗಳೊಂದಿಗೆ ಈ ಅವಧಿ ನಿಕಟವಾಗಿ ಸಂಬಂಧ ಹೊಂದಿದೆ.

ಸೂರ್ಯನು ಕರ್ಕಾಟಕ ರಾಶಿಯಿಂದ ಸಿಂಹ ರಾಶಿಗೆ ಪ್ರವೇಶಿಸುವ ದಿನವನ್ನು ಸಿಂಹಸಂಕ್ರಾಂತಿ ಅಥವಾ ಸಿಂಹ ಸಂಕ್ರಮಣ ಎಂದು ಕರೆಯಲಾಗುತ್ತದೆ. ಸಾಮಾನ್ಯವಾಗಿ ಆಗಸ್ಟ್ ಮಧ್ಯಭಾಗದಲ್ಲಿ ಸಂಭವಿಸುವ ಈ ಸಂಕ್ರಾಂತಿಗೆ ಧಾರ್ಮಿಕವಾಗಿ ವಿಶೇಷ ಮಹತ್ವವಿದೆ. ಜ್ಯೋತಿಷ್ಯದಲ್ಲಿ ಸಿಂಹ ರಾಶಿಯ ಅಧಿಪತಿ ಸೂರ್ಯನೇ ಆಗಿರುವುದರಿಂದ, ಸೂರ್ಯನು ತನ್ನ ಸ್ವಕ್ಷೇತ್ರವಾದ ಸಿಂಹ ರಾಶಿಗೆ ಪ್ರವೇಶಿಸುವ ದಿನವನ್ನು ಪವಿತ್ರವೆಂದು ಪರಿಗಣಿಸಲಾಗುತ್ತದೆ.

ಕರ್ನಾಟಕದ ಕರಾವಳಿ ಭಾಗದಲ್ಲಿ ಸಿಂಹಸಂಕ್ರಾಂತಿಗೆ ವಿಶಿಷ್ಟ ಆಚರಣೆಗಳಿವೆ. ಸ್ಥಳೀಯ ಸಂಪ್ರದಾಯಗಳ ಪ್ರಕಾರ ಇದು ಆಟಿ ತಿಂಗಳ ಅಂತ್ಯ ಹಾಗೂ ಶ್ರಾವಣ ಮಾಸದ ಆರಂಭದೊಂದಿಗೆ ಸಂಬಂಧ ಹೊಂದಿದೆ. ದೇವಾಲಯಗಳಲ್ಲಿ ವಿಶೇಷ ಪೂಜೆಗಳು ನಡೆಯುವುದಲ್ಲದೆ, ಕುಟುಂಬಗಳು ತಮ್ಮ ಸಂಪ್ರದಾಯಕ್ಕೆ ಅನುಗುಣವಾಗಿ ಧಾರ್ಮಿಕ ಆಚರಣೆಗಳನ್ನು ನೆರವೇರಿಸುತ್ತವೆ.


ಸಿಂಹಸಂಕ್ರಾಂತಿಯಂದು ಮುಂಜಾನೆ ಸ್ನಾನ ಮಾಡಿ ಸೂರ್ಯದೇವನಿಗೆ ಅರ್ಘ್ಯ ನೀಡುವುದು ಶುಭಕರ ಎಂಬ ನಂಬಿಕೆ ಇದೆ. ಧಾನ್ಯ, ಹಣ್ಣು, ವಸ್ತ್ರ ಸೇರಿದಂತೆ ಅಗತ್ಯ ವಸ್ತುಗಳನ್ನು ದಾನ ಮಾಡುವ ಸಂಪ್ರದಾಯವೂ ಹಲವು ಕಡೆಗಳಲ್ಲಿ ಕಂಡುಬರುತ್ತದೆ. ಆರೋಗ್ಯ, ಸಮೃದ್ಧಿ ಹಾಗೂ ಕುಟುಂಬದ ಕ್ಷೇಮಕ್ಕಾಗಿ ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸಲಾಗುತ್ತದೆ.

# ದಕ್ಷಿಣ ಭಾರತದ ರಾಜ್ಯಗಳು ಒಗ್ಗಟ್ಟಾಗಿರಬೇಕು: ಡಿ.ಕೆ. ಶಿವಕುಮಾರ್

**ದಕ್ಷಿಣ ರಾಜ್ಯಗಳ ಒಗ್ಗಟ್ಟಿನಿಂದ ದೇಶದ ಆರ್ಥಿಕ ಶಕ್ತಿ ವೃದ್ಧಿ; ಕರ್ನಾಟಕದ ಮುಂದಿನ 25 ವರ್ಷಗಳ ಅಭಿವೃದ್ಧಿಗೆ ಆಡಳಿತ–ವಿಪಕ್ಷಗಳು ಒಟ್ಟಾಗಿ ಕೆಲಸ ಮಾಡಬೇಕು ಎಂದು ಡಿ.ಕೆ. ಶಿವಕುಮಾರ್ ಕರೆ. ಬೆಂಗಳೂರು ಅಭಿವೃದ್ಧಿ, ನೀರಿನ ಸಮಸ್ಯೆ ಹಾಗೂ ಬಿಡದಿ ಟೌನ್‌ಶಿಪ್ ಯೋಜನೆಗಳಿಗೂ ಆದ್ಯತೆ ನೀಡುವುದಾಗಿ ತಿಳಿಸಿದರು.**

● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳು ಒಗ್ಗಟ್ಟಾಗಿ ಕೆಲಸ ಮಾಡಿದರೆ ದೇಶವನ್ನು ಆರ್ಥಿಕ ಶಕ್ತಿಯನ್ನಾಗಿ ರೂಪಿಸಲು ಸಾಧ್ಯ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.



ವಿಧಾನಸಭೆಯಲ್ಲಿ ಉಪಸಭಾಧ್ಯಕ್ಷರ ಆಯ್ಕೆ ಬಳಿಕ ಮಾತನಾಡಿದ ಅವರು, ಕರ್ನಾಟಕದ ಪ್ರತಿಭಾ ಸಾಮರ್ಥ್ಯ ಅಪಾರವಾಗಿದ್ದು, ಬೆಂಗಳೂರು ಜಾಗತಿಕ ಮಟ್ಟದಲ್ಲಿ ದೇಶದ ಪ್ರಮುಖ ಜ್ಞಾನ, ತಂತ್ರಜ್ಞಾನ ಹಾಗೂ ಹೂಡಿಕೆ ಕೇಂದ್ರವಾಗಿ ಬೆಳೆದಿದೆ. ಈ ಶಕ್ತಿಯನ್ನು ರಾಜ್ಯದ ಅಭಿವೃದ್ಧಿಗೆ ಬಳಸಿಕೊಳ್ಳಲು ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳು ಒಟ್ಟಾಗಿ ಕೆಲಸ ಮಾಡಬೇಕು ಎಂದರು.

ಬಿಡದಿ ಟೌನ್‌ಶಿಪ್ ಬಗ್ಗೆ ಚರ್ಚೆಗೆ ಸಿದ್ಧ

ಬಿಡದಿ ಟೌನ್‌ಶಿಪ್ ಕುರಿತು ಚರ್ಚೆಗೆ ಸರ್ಕಾರ ಸಿದ್ಧವಿದೆ. ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಹಿಂದೆ ಪ್ರಸ್ತಾಪಿಸಿದ್ದ ಟೌನ್‌ಶಿಪ್ ಯೋಜನೆಯ ಉದ್ದೇಶ ತಪ್ಪಲ್ಲ. ಹಿಂದಿನ ಸರ್ಕಾರಗಳ ದೂರದೃಷ್ಟಿಯ ಯೋಜನೆಗಳನ್ನು ಮುಂದುವರಿಸುವುದಾಗಿ ಶಿವಕುಮಾರ್ ಹೇಳಿದರು.

"ಕುಮಾರಸ್ವಾಮಿ, ಬಿ.ಎಸ್. ಯಡಿಯೂರಪ್ಪ ಹಾಗೂ ಬಸವರಾಜ ಬೊಮ್ಮಾಯಿ ಅವರ ಉತ್ತಮ ಆಲೋಚನೆಗಳನ್ನು ನಾವು ಮುಂದುವರಿಸುತ್ತೇವೆ. ಯೋಜನೆಗಳಲ್ಲಿ ಲೋಪದೋಷಗಳಿದ್ದರೆ ಸರಿಪಡಿಸೋಣ. ರಾಜ್ಯದ ಹಿತಕ್ಕಾಗಿ ಎಲ್ಲರೂ ಒಟ್ಟಾಗಿ ಕೆಲಸ ಮಾಡೋಣ" ಎಂದರು.

ವೇಗವಾಗಿ ಬೆಳೆಯುತ್ತಿರುವ ಬೆಂಗಳೂರಿಗೆ ನೀರು ಒದಗಿಸುವುದು ದೊಡ್ಡ ಸವಾಲಾಗಿದೆ. ಹೆಸರಘಟ್ಟ, ಹೊಸಕೋಟೆ, ತಿಪ್ಪಗೊಂಡನಹಳ್ಳಿ ಸೇರಿದಂತೆ ಪ್ರಮುಖ ಕೆರೆಗಳನ್ನು ಅಭಿವೃದ್ಧಿಪಡಿಸಿ ಅಂತರ್ಜಲ ಹೆಚ್ಚಿಸುವ ಮೂಲಕ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸರ್ಕಾರ ಪ್ರಯತ್ನಿಸುತ್ತಿದೆ ಎಂದು ತಿಳಿಸಿದರು.

ಬೆಂಗಳೂರಿನಲ್ಲಿ ಸುಮಾರು 1.5 ಕೋಟಿ ಜನಸಂಖ್ಯೆ ಹಾಗೂ 1.4 ಕೋಟಿ ವಾಹನಗಳಿದ್ದು, ನಗರಕ್ಕೆ ಅಗತ್ಯ ಮೂಲಸೌಕರ್ಯ, ನೀರು ಮತ್ತು ವಸತಿ ಒದಗಿಸುವುದು ಎಲ್ಲರ ಜವಾಬ್ದಾರಿ ಎಂದರು.

ಮುಂದಿನ 25 ವರ್ಷಗಳಲ್ಲಿ ಕರ್ನಾಟಕವನ್ನು ದೇಶದ ಶಕ್ತಿಶಾಲಿ ರಾಜ್ಯವನ್ನಾಗಿ ರೂಪಿಸಲು ಆಡಳಿತ ಮತ್ತು ವಿರೋಧ ಪಕ್ಷಗಳು ಸಾಮರಸ್ಯದಿಂದ ಕೆಲಸ ಮಾಡಬೇಕು. ರಾಜಕೀಯವನ್ನು ಬದಿಗಿಟ್ಟು ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವತ್ತ ಗಮನಹರಿಸಬೇಕು ಎಂದು ಶಿವಕುಮಾರ್ ಕರೆ ನೀಡಿದರು.

ಬೆಂಗಳೂರಿನಲ್ಲಿ 26 ಲಕ್ಷಕ್ಕೂ ಹೆಚ್ಚು ಐಟಿ ವೃತ್ತಿಪರರು, ವೈದ್ಯಕೀಯ ಹಾಗೂ ಪ್ಯಾರಾಮೆಡಿಕಲ್ ಕ್ಷೇತ್ರದಲ್ಲಿ ಅಪಾರ ಪ್ರತಿಭೆ ಇದೆ. ವಿಶ್ವವೇ ಬೆಂಗಳೂರಿನ ಪ್ರತಿಭಾ ಸಂಪತ್ತನ್ನು ಗಮನಿಸುತ್ತಿದೆ. ಈ ಸಾಮರ್ಥ್ಯಕ್ಕೆ ಸೂಕ್ತ ಮಾನ್ಯತೆ ನೀಡಿ ರಾಜ್ಯದ ಅಭಿವೃದ್ಧಿಗೆ ಬಳಸಿಕೊಳ್ಳಬೇಕು ಎಂದರು.

ಕರ್ನಾಟಕದ 350 ಕಿ.ಮೀ. ಕರಾವಳಿಯನ್ನು ಪ್ರವಾಸೋದ್ಯಮಕ್ಕೆ ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಪ್ರತ್ಯೇಕ ಪ್ರವಾಸೋದ್ಯಮ ನೀತಿ ರೂಪಿಸಲಾಗುತ್ತಿದೆ. ರೈತರು, ನೀರಾವರಿ, ನೀರು ಮತ್ತು ಯುವಜನರ ಭವಿಷ್ಯಕ್ಕೆ ಆದ್ಯತೆ ನೀಡಿ ಸರ್ಕಾರ ಮುಂದುವರಿಯಲಿದೆ ಎಂದು ಹೇಳಿದರು. "ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ. ಜನರ ಸೇವೆಗಾಗಿ ನಾವು ಅಧಿಕಾರದಲ್ಲಿದ್ದೇವೆ. ಮುಂದಿನ ಪೀಳಿಗೆಯ ಭವಿಷ್ಯಕ್ಕಾಗಿ ಎಲ್ಲರೂ ಒಟ್ಟಾಗಿ ಕೆಲಸ ಮಾಡೋಣ" ಎಂದು ಶಿವಕುಮಾರ್ ಸದನಕ್ಕೆ ಮನವಿ ಮಾಡಿದರು.

# ಬರ ಪರಿಹಾರ ನೀಡದೆ ಹೇಳಿಕೆಗಷ್ಟೇ ಸರ್ಕಾರ ಸೀಮಿತ: ಆರ್. ಅಶೋಕ್



**ಬರ ಘೋಷಣೆ ಹಾಗೂ ರೈತರಿಗೆ ಪರಿಹಾರ ನೀಡುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬರ ನಿರ್ವಹಣೆಗೆ ತಕ್ಷಣ ಅನುದಾನ ಬಿಡುಗಡೆ, ರೈತರಿಗೆ ಪರಿಹಾರ ಹಾಗೂ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ ಅವರು, ನಾಗೇಂದ್ರ ವಜಾ, ಕೆಪಿಎಸ್‌ಸಿ ಅಕ್ರಮಕ್ಕೆ ಸಿಬಿಐ ತನಿಖೆ ಹಾಗೂ ಬೆಂಗಳೂರಿನ ಮೂಲಸೌಕರ್ಯ ಸಮಸ್ಯೆಗಳ ಪರಿಹಾರಕ್ಕೂ ಆಗ್ರಹಿಸಿದರು.**

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದರೂ ಸರ್ಕಾರ ರೈತರಿಗೆ ಪರಿಹಾರ ನೀಡದೆ, ಬರ ಘೋಷಣೆಯನ್ನೂ ಮಾಡದೆ ಕೇವಲ ಸದನದಲ್ಲಿ ಹೇಳಿಕೆ ನೀಡಲು ಮುಂದಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಬರಪೀಡಿತ ಪ್ರದೇಶಗಳಲ್ಲಿ ನಡೆಸಿದ ಅಧ್ಯಯನದ ಆಧಾರದ ಮೇಲೆ ವರದಿ ನೀಡಿದೆ. ಉತ್ತರ ಕರ್ನಾಟಕ ಸೇರಿದಂತೆ ಹಲವು ಭಾಗಗಳಲ್ಲಿ ಬರದ ಪರಿಸ್ಥಿತಿ ತೀವ್ರವಾಗಿದ್ದು, ಕಾವೇರಿ ನೀರಿನ ಕೊರತೆಯಿಂದ ಮೈಸೂರು ಸುತ್ತಮುತ್ತಲಿನ ಜಿಲ್ಲೆಗಳಲ್ಲೂ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದರೂ ಸರ್ಕಾರದಿಂದ ಈವರೆಗೆ ಪರಿಹಾರ ಬಿಡುಗಡೆ ಮಾಡಿಲ್ಲ ಎಂದು ದೂರಿದರು.

ಬರ ನಿರ್ವಹಣೆಗೆ ಅನುದಾನ, ರೈತರಿಗೆ ಪರಿಹಾರ ಹಾಗೂ ಅಗತ್ಯ ಕ್ರಮ ಕೈಗೊಂಡ ಬಳಿಕ ಸರ್ಕಾರ ಹೇಳಿಕೆ ನೀಡಲಿ. ಯಾವುದೇ ಕ್ರಮ ಕೈಗೊಳ್ಳದೆ ಹೇಳಿಕೆ ನೀಡುವುದರಿಂದ ಪ್ರಯೋಜನವಿಲ್ಲ ಎಂದು ಅಶೋಕ ಹೇಳಿದರು.

**ನಾಗೇಂದ್ರ ವಜಾಕ್ಕೆ ಆಗ್ರಹ:** ಮಾಜಿ ಸಚಿವ ಬಿ. ನಾಗೇಂದ್ರ ವಿರುದ್ಧದ ಪ್ರಕರಣಗಳನ್ನು ಉಲ್ಲೇಖಿಸಿದ ಅಶೋಕ, ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸುವವರೆಗೆ ಸದನದಲ್ಲಿ ಹೋರಾಟ ಮುಂದುವರಿಸುವುದಾಗಿ ಹೇಳಿದರು. ಮೊದಲು ಈ ವಿಚಾರವನ್ನು ಪ್ರಸ್ತಾಪಿಸಿ, ನಂತರ ಬರ ಪರಿಸ್ಥಿತಿ ಕುರಿತು ಚರ್ಚೆ ನಡೆಸಲಾಗುವುದು ಎಂದರು.

**ಕೆಪಿಎಸ್‌ಸಿಅಕ್ರಮದ ಬಗ್ಗೆ ಸಿಬಿಐ ತನಿಖೆಗೆ ಒತ್ತಾಯ:** ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳ ಕುರಿತು ಮಾತನಾಡಿದ ಅವರು, ಪಶುವೈದ್ಯಾಧಿಕಾರಿ ಹಾಗೂ ಪೊಲೀಸ್ ನೇಮಕಾತಿ ಸೇರಿದಂತೆ ಹಲವು ಪರೀಕ್ಷೆಗಳಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿದರು. ಎಸ್‌ಐಟಿ ತನಿಖೆಯಿಂದ ಪ್ರಕರಣ ಮುಚ್ಚಿಹಾಕುವ ಸಾಧ್ಯತೆಯಿದ್ದು, ಸಿಬಿಐ ತನಿಖೆ ನಡೆಸಿದರೆ ನಿಜಾಂಶ ಹೊರಬರಲಿದೆ ಎಂದು ಹೇಳಿದರು.

ಕೆಪಿಎಸ್‌ಸಿ ಅಕ್ರಮ ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ನಡೆಸುತ್ತಿರುವ ದಾಳಿಗಳನ್ನು ಸ್ವಾಗತಿಸಿದ ಅವರು, ತಪ್ಪಿತಸ್ಥರನ್ನು ಪತ್ತೆಹಚ್ಚಿ ಅಕ್ರಮವಾಗಿ ಸಂಗ್ರಹಿಸಿದ ಹಣವನ್ನು ಸರ್ಕಾರದ ಖಜಾನೆಗೆ ಮರಳಿಸುವ ಕೆಲಸವಾಗಬೇಕು ಎಂದು ಒತ್ತಾಯಿಸಿದರು.

**ಬೆಂಗಳೂರಿನ ಸಮಸ್ಯೆ ಮೊದಲು ಪರಿಹರಿಸಿ**

ಬೆಂಗಳೂರಿನ ಗುಂಡಿಬಿದ್ದ ರಸ್ತೆಗಳು, ಕಸ, ಪಾದಚಾರಿ ಮಾರ್ಗಗಳ ಒತ್ತುವರಿ ಸೇರಿದಂತೆ ಮೂಲಸೌಕರ್ಯ ಸಮಸ್ಯೆಗಳನ್ನು ಮೊದಲು ಪರಿಹರಿಸಬೇಕು ಎಂದು ಅಶೋಕ ಹೇಳಿದರು. 'ಸ್ವಚ್ಛ ಬೆಂಗಳೂರು' ಅಭಿಯಾನ ನಡೆಯುತ್ತಿದ್ದರೂ ನಗರದ ಹಲವು ರಸ್ತೆಗಳು ಕಸದಿಂದ ಮುಕ್ತವಾಗಿಲ್ಲ. ಜನರಿಗೆ ನೆಮ್ಮದಿಯ ಬದುಕು ಕಲ್ಪಿಸಿದ ಬಳಿಕ ಇತರ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಬಹುದು ಎಂದರು.

**ಮಂಕಾಳ ವೈದ್ಯರಿಗೆ ಅಭಿನಂದನೆ:** ಉಪಸಭಾಧ್ಯಕ್ಷರಾಗಿ ಆಯ್ಕೆಯಾದ ಮಂಕಾಳ ವೈದ್ಯರಿಗೆ ಅಭಿನಂದನೆ ಸಲ್ಲಿಸಿದ ಅಶೋಕ, ವಿಧಾನಸಭಾಧ್ಯಕ್ಷರು ಅವರಿಗೆ ಸದನದ ಕಾರ್ಯವೈಖರಿಯಲ್ಲಿ ಹೆಚ್ಚಿನ ಅವಕಾಶ ನೀಡಿ ಅನುಭವ ಪಡೆಯಲು ಸಹಕರಿಸಬೇಕು ಎಂದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜಕೀಯವಾಗಿ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡುವ ಚಾಕಚಕ್ಯತೆ ಹೊಂದಿದ್ದಾರೆ ಎಂದು ಹೇಳಿದ ಅವರು, ಆದರೆ ಆಡಳಿತ ವ್ಯವಸ್ಥೆಯಲ್ಲಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದು ಮತ್ತು ಎಲ್ಲ ಶಾಸಕರನ್ನು ಒಗ್ಗೂಡಿಸುವುದು ದೊಡ್ಡ ಸವಾಲಾಗಿದೆ ಎಂದರು.

# ಹನೂರು ಶೂಟೌಟ್: ಬಚಾವಾದವನ ವಿಡಿಯೋ?

● ವಿಕ್ರಮ ವಾಹಿನಿ | ಚಾಮರಾಜನಗರ

ಹನೂರು ಅರಣ್ಯ ಪ್ರದೇಶದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ನಡೆಸಿದ ಗುಂಡಿನ ದಾಳಿಯಲ್ಲಿ ಮೂವರು ಮೃತಪಟ್ಟ ಪ್ರಕರಣದಲ್ಲಿ ಬಚಾವಾಗಿದ್ದ ಮಹಿಮದಾಸ್ ಇದೀಗ ಅಜ್ಞಾತ ಸ್ಥಳದಿಂದ ವಿಡಿಯೋ ಬಿಡುಗಡೆ ಮಾಡಿದ್ದಾರೆ.

ವಿಡಿಯೋದಲ್ಲಿ ಮಾತನಾಡಿರುವ ಮಹಿಮದಾಸ್, ಗುಂಡಿನ ದಾಳಿ ನಡೆಯುತ್ತಿದ್ದ ವೇಳೆ ಸ್ಥಳದಿಂದ ಪರಾರಿಯಾಗಿ ಆಸ್ಪತ್ರೆಗೆ ದಾಖಲಾಗಿದ್ದೆ. ಸದ್ಯ ಪ್ರಕರಣದ ತನಿಖೆ ನಡೆಯುತ್ತಿದ್ದು, ವಿಚಾರಣೆಗೆ ಹಾಜರಾಗುವಂತೆ ಪೊಲೀಸರು ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ಸೂಚಿಸಿದ್ದಾರೆ ಎಂದು ತಿಳಿಸಿದ್ದಾರೆ. ಆದರೆ ಪೊಲೀಸರ ವಿಚಾರಣೆಗೆ ಹಾಜರಾಗಲು ಭಯವಾಗುತ್ತಿದೆ. ಹೀಗಾಗಿ ಹೊರಗೆ ಬರಲು ಹಿಂದೇಟು ಹಾಕುತ್ತಿದ್ದೇನೆ ಎಂದು ಅವರು ಹೇಳಿದ್ದಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಹಾಗೂ ಅರಣ್ಯ ಇಲಾಖೆ ತನಿಖೆ ಮುಂದುವರಿಸಿದ್ದು, ಮಹಿಮದಾಸ್ ಅವರ ಹೇಳಿಕೆ ಪ್ರಕರಣದ ತನಿಖೆಯಲ್ಲಿ ಮಹತ್ವ ಪಡೆದಿದೆ. ಅರಣ್ಯ ಪ್ರದೇಶದಲ್ಲಿ ನಡೆದ ಗುಂಡಿನ ದಾಳಿ ಪ್ರಕರಣದ ಕುರಿತು ಮಹಿಮದಾಸ್ ಹಲವು ಅನುಮಾನಗಳನ್ನು ವ್ಯಕ್ತಪಡಿಸಿದ್ದು, ತಮ್ಮ ಸುರಕ್ಷತೆ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ.

# ದೃಷ್ಟಿದೋಷ ನೌಕರರಿಗೆ ತರಬೇತಿ

● ವಿಕ್ರಮ ವಾಹಿನಿ | ಮೈಸೂರು

ದೃಷ್ಟಿದೋಷ ಹೊಂದಿರುವ ನೌಕರರು ತಮ್ಮ ದೈನಂದಿನ ಕಚೇರಿ ಕಾರ್ಯಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಲು ಅನುಕೂಲವಾಗುವಂತೆ, ಸುಲಭವಾಗಿ ಲಭ್ಯವಿರುವ ಡಿಜಿಟಲ್ ಸಾಧನಗಳು ಹಾಗೂ ಕಚೇರಿ ತಂತ್ರಾಂಶಗಳ ಪರಿಣಾಮಕಾರಿ ಬಳಕೆಯ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ನೈರುತ್ಯ ರೈಲ್ವೆಯ ಮೈಸೂರು ವಿಭಾಗವು ಆಯೋಜಿಸಿತು. ತರಬೇತಿ ಕಾರ್ಯಕ್ರಮದಲ್ಲಿ ರೈಲ್ವೆ ಕಚೇರಿಗಳಲ್ಲಿ ಬಳಸುವ ವಿವಿಧ ಡಿಜಿಟಲ್ ವ್ಯವಸ್ಥೆಗಳು ಮತ್ತು ಕಚೇರಿ ತಂತ್ರಾಂಶಗಳ ಕುರಿತು ಪ್ರಾಯೋಗಿಕ ತರಬೇತಿ ಹಾಗೂ ಮಾರ್ಗದರ್ಶನ ನೀಡಲಾಯಿತು. ಎಚ್‌ಆರ್‌ಎಂಎಸ್ (ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ), ಇ– ಆಫೀಸ್ (ಕಡತ ರಚನೆ, ಕಡತ ಚಲಾವಣೆ, ಟಿಪ್ಪಣಿ ಹಾಗೂ ಪತ್ರವ್ಯವಹಾರ), ಯುಎಂಐಡಿ (ವಿಶಿಷ್ಟ ವೈದ್ಯಕೀಯ ಗುರುತಿನ ಚೀಟಿ), ಅಧಿಕೃತ ಟಿಪ್ಪಣಿಗಳು ಮತ್ತು ಪತ್ರಗಳ ತಯಾರಿ, ಮೈಕ್ರೋಸಾಫ್ಟ್ ವರ್ಡ್ ಮತ್ತು ಎಕ್ಸೆಲ್, ಕೀಬೋರ್ಡ್ ಶಾರ್ಟ್‌ಕಟ್‌ಗಳು ಹಾಗೂ ಕಚೇರಿ ಕಾರ್ಯವನ್ನು ಸುಗಮಗೊಳಿಸುವ ಪ್ರವೇಶಯೋಗ್ಯತಾ ಸೌಲಭ್ಯಗಳ ಕುರಿತು ತರಬೇತಿ ನೀಡಲಾಯಿತು.




ಕಾರ್ಯಕ್ರಮವನ್ನು ಮೈಸೂರು ವಿಭಾಗದ ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರು ಶ್ರೀ ಶಮ್ಮಾಸ್ ಹಮೀದ್ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮೈಸೂರು ವಿಭಾಗದ ಹಿರಿಯ ವಿಭಾಗೀಯ ಸಿಬ್ಬಂದಿ ಅಧಿಕಾರಿ, ಶ್ರೀ ಶಿರೀಶ್ ಎಸ್. ಕಾಂಬ್ಳೆ ಸೇರಿದಂತೆ ರೈಲ್ವೆ ಅಧಿಕಾರಿಗಳು, ಇತರ ಸಿಬ್ಬಂದಿ ಉಪಸ್ಥಿತರಿದ್ದರು. ಕಾರ್ಯಕ್ರಮದ ಸಂದರ್ಭದಲ್ಲಿ ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರು ಶ್ರೀ ಶಮ್ಮಾಸ್ ಹಮೀದ್ ಅವರು ದೃಷ್ಟಿದೋಷ ಹೊಂದಿರುವ ನೌಕರರೊಂದಿಗೆ ಸಂವಾದ ನಡೆಸಿ, ಅವರ ಕುಂದುಕೊರತೆಗಳು, ಸಲಹೆಗಳು ಹಾಗೂ ಕೆಲಸಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಆಲಿಸಿದರು. ನೌಕರರು ಪ್ರಸ್ತಾಪಿಸಿದ ವಿಷಯಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಅವರು ಭರವಸೆ ನೀಡಿದರು.

ಈ ಕಾರ್ಯಕ್ರಮವು ದೃಷ್ಟಿದೋಷ ಹೊಂದಿರುವ ಉದ್ಯೋಗಿಗಳಲ್ಲಿ ಹೆಚ್ಚಿನ ಆತ್ಮವಿಶ್ವಾಸ ಮತ್ತು ಕಾರ್ಯಕ್ಷಮತೆಯನ್ನು ಬೆಳೆಸುವ ಹಾಗೂ ತಮ್ಮ ಅಧಿಕೃತ ಕರ್ತವ್ಯಗಳಲ್ಲಿ ಡಿಜಿಟಲ್ ತಂತ್ರಜ್ಞಾನಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಅವರನ್ನು ಸಬಲೀಕರಣಗೊಳಿಸುವ ಗುರಿಯನ್ನು ಹೊಂದಿತ್ತು.

# ನಕಲಿ ಔಷಧಿ ದಂಧೆ

1ನೇ ಪುಟದಿಂದ

**ಬೆಂಗಳೂರಿಗೂ ಜಾಲ ವಿಸ್ತರಣೆ ಶಂಕೆ**

ದಂಧೆಯ ಜಾಲ ಬೆಂಗಳೂರಿನ ಸೇರಿದಂತೆ ರಾಜ್ಯದ ಇತರ ಭಾಗಗಳಿಗೂ ವಿಸ್ತರಿಸಿರುವ ಸಾಧ್ಯತೆಯಿದೆ ಎಂದು ಪೊಲೀಸರು ಶಂಕಿಸಿದ್ದಾರೆ. ವಶಪಡಿಸಿಕೊಂಡ ಔಷಧಗಳ ಮೂಲ, ಅವುಗಳನ್ನು ಪೂರೈಸುತ್ತಿದ್ದವರು ಹಾಗೂ ಮರುಪ್ಯಾಕಿಂಗ್ ಬಳಿಕ ಔಷಧಗಳನ್ನು ಖರೀದಿಸುತ್ತಿದ್ದವರ ಕುರಿತು ತನಿಖೆ ನಡೆಸಲಾಗುತ್ತಿದೆ.

**ಅಧಿಕಾರಿಗಳ ಜಂಟಿ ಕಾರ್ಯಾಚರಣೆ**

ಆಹಾರ ಸುರಕ್ಷತಾ ಮತ್ತು ಔಷಧ ನಿಯಂತ್ರಣ ಮಂಡಳಿ ಆಯುಕ್ತ ಶ್ರೀನಿವಾಸ್, ರಾಮನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ್ ಗೌಡ ಹಾಗೂ ಆರೋಗ್ಯ ಇಲಾಖೆಯ ಜಿಲ್ಲಾ ಸಹಾಯಕ ಔಷಧ ನಿಯಂತ್ರಣಾಧಿಕಾರಿ ನಮ್ರತಾ ಹಳ್ಳೂರ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದೆ. ಬೀಟ್ ಪೊಲೀಸರಿಂದ ದೊರೆತ ಮಾಹಿತಿಯ ಆಧಾರದ ಮೇಲೆ ದಾಳಿ ನಡೆಸಲಾಗಿದ್ದು, ವಶಪಡಿಸಿಕೊಂಡ ವಸ್ತುಗಳ ಕುರಿತು ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

ಪ್ರಕರಣ ದಾಖಲಿಸಿಕೊಂಡು ದಂಧೆಯ ಸಂಪೂರ್ಣ ಜಾಲ, ಔಷಧಗಳ ಪೂರೈಕೆ ಮಾರ್ಗ ಹಾಗೂ ಹಣಕಾಸಿನ ವ್ಯವಹಾರಗಳ ಬಗ್ಗೆ ತನಿಖೆ ನಡೆಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ್ ಗೌಡ ತಿಳಿಸಿದ್ದಾರೆ.

ದಾಳಿ ವೇಳೆ ವಶಪಡಿಸಿಕೊಂಡ ಔಷಧಗಳು ಹಾಗೂ ಇತರ ವಸ್ತುಗಳ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ. ಔಷಧಗಳ ನಿಜವಾದ ಬೆಲೆ, ಅವುಗಳ ಮೂಲ ಹಾಗೂ ಮರುಪ್ಯಾಕಿಂಗ್ ಬಳಿಕ ಯಾವ ಪ್ರದೇಶಗಳಿಗೆ ಪೂರೈಕೆ ಮಾಡಲಾಗುತ್ತಿತ್ತು ಎಂಬುದರ ಕುರಿತು ಮಾಹಿತಿ ಕಲೆಹಾಕಲಾಗುತ್ತಿದೆ.

ನಕಲಿ ಔಷಧಗಳ ಗುಣಮಟ್ಟ ಹಾಗೂ ಅವುಗಳನ್ನು ಸೇವಿಸಿದರೆ ಆರೋಗ್ಯದ ಮೇಲೆ ಉಂಟಾಗಬಹುದಾದ ಪರಿಣಾಮಗಳ ಬಗ್ಗೆಯೂ ಔಷಧ ನಿಯಂತ್ರಣ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

ವಶಪಡಿಸಿಕೊಂಡ ಕೆಲವು ಮಾದರಿಗಳನ್ನು ಪ್ರಯೋಗಾಲಯ ಪರೀಕ್ಷೆಗೆ ಕಳುಹಿಸುವ ಸಾಧ್ಯತೆಯಿದೆ.

ಈ ದಂಧೆಯಲ್ಲಿ ಕೇವಲ ಒಬ್ಬ ವ್ಯಕ್ತಿಯೇ ಭಾಗಿಯಾಗಿದ್ದಾನೆಯೇ ಅಥವಾ ಇದರ ಹಿಂದೆ ದೊಡ್ಡ ಜಾಲವೇ ಕಾರ್ಯನಿರ್ವಹಿಸುತ್ತಿದೆಯೇ ಎಂಬುದನ್ನು ಪತ್ತೆಹಚ್ಚಲು ತನಿಖೆ ಮುಂದುವರಿದಿದೆ.

ಬೆಂಗಳೂರಿಗೆ ಮಾತ್ರವಲ್ಲದೆ ರಾಜ್ಯದ ಇತರ ಜಿಲ್ಲೆಗಳಿಗೂ ಈ ನಕಲಿ ಔಷಧಗಳು ಪೂರೈಕೆಯಾಗಿರುವ ಸಾಧ್ಯತೆಯನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ. ಪ್ರಕರಣದ ಸಂಪೂರ್ಣ ಜಾಲವನ್ನು ಪತ್ತೆಹಚ್ಚಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# 'ರಾಜ್ಯ ಸರಕಾರಕ್ಕೆ ಶೀಘ್ರವೇ ಬಿಜೆಪಿ ಬರಗಾಲ ಅಧ್ಯಯನ ವರದಿ ಸಲ್ಲಿಕೆ'

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯ ಸರಕಾರಕ್ಕೆ ಬಿಜೆಪಿ ತಂಡಗಳ ಬರಗಾಲ ಅಧ್ಯಯನ ಸಂಬಂಧಿತ ವರದಿಯನ್ನು ಶೀಘ್ರವೇ ಸಲ್ಲಿಸಲಾಗುವುದು ಎಂದು ವಿಧಾನ ಪರಿಷತ್ತಿನ ವಿಪಕ್ಷ ಮುಖ್ಯ ಸಚೇತಕ ಎನ್.ರವಿಕುಮಾರ್ ಅವರು ತಿಳಿಸಿದ್ದಾರೆ.



ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಬರಗಾಲದ ಅಧ್ಯಯನಕ್ಕೆ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು 6 ತಂಡಗಳನ್ನು ರಚಿಸಿದ್ದರು. ಅವುಗಳು ಜಿಲ್ಲೆಗಳು ಮಾತ್ರವಲ್ಲದೇ ಕೆಲವು ತಾಲ್ಲೂಕುಗಳಿಗೂ ಭೇಟಿ ನೀಡಿವೆ ಎಂದು ವಿವರಿಸಿದರು.

ರಾಜ್ಯದಲ್ಲಿ ಭೀಕರ ಬರಗಾಲ ಇದೆ; ರಾಜ್ಯ ಸರಕಾರವು ನಯಾಪೈಸೆ ಬಿಡುಗಡೆ ಮಾಡಿಲ್ಲ ಎಂಬ ವಿಚಾರವನ್ನು ಗಮನಕ್ಕೆ ತರಲು ಉದ್ದೇಶಿಸಲಾಗಿದೆ. ರೈತರು ಸಂಕಷ್ಟದಲ್ಲಿದ್ದಾರೆ. ಅದರ ವರದಿಯನ್ನು ಸರಕಾರಕ್ಕೆ ಸಲ್ಲಿಸಬೇಕೆಂದು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಈ ಸಂಬಂಧ ವರದಿಯನ್ನು ಸಿದ್ಧಪಡಿಸಿದ್ದು, ಅದನ್ನು ಪಕ್ಷದ ರಾಜ್ಯಾಧ್ಯಕ್ಷರಿಗೆ ಸಲ್ಲಿಸುತ್ತಿರುವುದಾಗಿ ಹೇಳಿದರು.

ವರದಿ ಆಧರಿಸಿ ಬರಪೀಡಿತ ಪ್ರದೇಶಗಳಿಗೆ ತಕ್ಷಣ ಪರಿಹಾರ ಹಾಗೂ ಅಗತ್ಯ ಅನುದಾನ ಬಿಡುಗಡೆಗೆ ಸರ್ಕಾರದ ಮೇಲೆ ಒತ್ತಡ ಹೇರಲಾಗುವುದು ಎಂದು ತಿಳಿಸಿದರು.

# ಸೋನಿಯಾ, ರಾಹುಲ್ ಗಾಂಧಿ ದೇಶ ಬಿಟ್ಟು ತೊಲಗಲಿ: ಚನ್ನಬಸಪ್ಪ

● ವಿಕ್ರಮ ವಾಹಿನಿ | ಬೆಂಗಳೂರು

ವಂದೇ ಮಾತರಂ ವಿರೋಧ ಮಾಡುವ ಮುಸಲ್ಮಾನರು ಈ ದೇಶ ಬಿಟ್ಟು ತೊಲಗಲಿ. ಸ್ವಾತಂತ್ರ್ಯ ಸಿಕ್ಕ ಕೂಡಲೇ ದೇಶ ವಿಭಜನೆ ಮಾಡಿ ನಿಮಗಾಗಿ ಒಂದು ಪ್ರತ್ಯೇಕ ದೇಶ ಕೊಟ್ಟಿದ್ದೇವೆ ಎಂದು ಶಾಸಕ ಎಸ್.ಎನ್. ಚನ್ನಬಸಪ್ಪ ಅವರು ಆಗ್ರಹಿಸಿದ್ದಾರೆ.



ವಿಧಾನಸೌಧದ ಬಿಜೆಪಿ ಕಚೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ದೇಶದ ಕಾನೂನನ್ನು ಸ್ವೀಕಾರ ಮಾಡದ ಗೌರವ ನೀಡದ ನಿಮಗೆ ಭಾರತ ದೇಶ ಏಕೆ ಬೇಕು. ನೀವು ಈ ದೇಶದಲ್ಲಿ ಇರುವಂತಿಲ್ಲ. ದೇಶದ ಕಾನೂನು ಗೌರವಿಸದವರಿಗೆ ಶಕ್ತಿ ಕೊಡುವ ಸೋನಿಯಾ, ರಾಹುಲ್ ಕೂಡ ಈ ದೇಶದಲ್ಲಿ ಇರಕೂಡದು ಎಂದರು.

ವಂದೇ ಮಾತರಂ ಸಂಬಂಧ ಕಾನೂನು ಇದೆ. ಆದರೂ ನೀವು ವಿರೋಧ ಮಾಡ್ತಾ ಇದ್ದೀರಿ. ಆದ್ದರಿಂದ ಮುಸ್ಲಿಮರ ಜೊತೆಗೆ ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ಅವರು ದೇಶ ಬಿಟ್ಟು ತೊಲಗಬೇಕು ಎಂದು ಹೇಳಿದರು.

ಕಾಂಗ್ರೆಸ್‌ನದ್ದು ನೀಚತನದ ಪರಮಾವಧಿ. ಮುಸ್ಲಿಮರಿಗೆ ನೋವಾಗುತ್ತದೆ ಎಂದು ವಂದೇ ಮಾತರಂಗೆ ಅಗೌರವ ತೋರಿದ್ದಾರೆ. ಮುಸ್ಲಿಮರಿಗಾಗಿ ಬದುಕುವ ಕಾಂಗ್ರೆಸ್ ಈ ದೇಶಕ್ಕೆ ಅವಶ್ಯಕತೆ ಇಲ್ಲ. ಸಂವಿಧಾನದ ಆಶಯಕ್ಕೆ ಸರಿಯಾಗಿ ಇರುವುದಾದರೆ ಇರಿ ಇಲ್ಲವಾದರೆ ತೊಲಗಿ. ಇದಕ್ಕಾಗಿ ಒಂದು ಆಂದೋಲನ ಮಾಡುತ್ತೇವೆ ಎಂದು ಎಚ್ಚರಿಸಿದರು.

ಅಲ್ಲಾನ ಬಗ್ಗೆ ಹೇಳಿದಾಗ ಈ ದೇಶದ ಹಿಂದೂಗಳು ಎಲ್ಲವನ್ನೂ ಸಹಿಸಿಕೊಂಡರು. ಹಿಂದೂಸ್ತಾನದಲ್ಲಿ ಆಜಾನ್ ಕೂಗುತ್ತಾರೆ. ನಾವು ಅದನ್ನು ಕೇಳಿಸಿಕೊಂಡಿದ್ದೇವೆ. ಕಾಂಗ್ರೆಸ್‌ನ ದೇಶದ್ರೋಹಿ ಮಾನಸಿಕತೆ ವಿರುದ್ಧ ಸಿಡಿದೇಳಲು ಈ ದೇಶದ ಯುವಕರು ಸಿದ್ಧರಿದ್ದಾರೆ ಎಂದು ಹೇಳಿದರು.

ಆರ್‌ಎಸ್‌ಎಸ್ ದೇಶಭಕ್ತ ಸಂಘಟನೆ. ಅದು ಯಾವುದೇ ಕಾನೂನು ಉಲ್ಲಂಘನೆ ಮಾಡಿಲ್ಲ. ದೇಶದ್ರೋಹದ ಚಟುವಟಿಕೆ ಮಾಡಿಲ್ಲ. ಆದರೂ ಅಂತಹ ಆರ್‌ಎಸ್‌ಎಸ್ ಬಗ್ಗೆ ಪ್ರಿಯಾಂಕ್ ಖರ್ಗೆ ಹಗುರವಾಗಿ ಮಾತನಾಡುತ್ತಾರೆ. ಆರ್‌ಎಸ್‌ಎಸ್ ನಿಯಂತ್ರಣಕ್ಕೆ ಮಸೂದೆ ತರುವ ಕಾಂಗ್ರೆಸ್ ದೇಶದ ಕಾನೂನು ಉಲ್ಲಂಘಿಸುವ ಮುಸ್ಲಿಮರ ವಿರುದ್ಧ ಯಾವುದೇ ಕಾನೂನು ತರುತ್ತಿಲ್ಲ. ತಾಕತ್ತಿದ್ದರೆ ಇದಕ್ಕೂ ಕಾನೂನು ತನ್ನಿ ಎಂದು ಆಗ್ರಹಿಸಿದರು.

ದೇಶಭಕ್ತ ಆರ್‌ಎಸ್‌ಎಸ್ ನಿಕೃಷ್ಟವಾಗಿ ಕಂಡು ದೇಶ ವಿರೋಧಿ ಮುಸ್ಲಿಮರನ್ನು ಆರಾಧಿಸುತ್ತೀರಿ. ದೇಶವಿರೋಧಿಗಳಿಗೆ ಕುಮ್ಮಕ್ಕು ಕೊಡುವ ರಾಹುಲ್ ಹಾಗೂ ಸೋನಿಯಾ ಈ ದೇಶದ ಕ್ಷಮೆ ಕೇಳಲೂ ಅರ್ಹರಲ್ಲ ಎಂದು ನುಡಿದರು.

ಇದೇ ಮೊದಲ ಬಾರಿ ಕಾಂಗ್ರೆಸ್ ವಂದೇ ಮಾತರಂ ಗೀತೆಗೆ ಅವಮಾನ ಮಾಡಿದ್ದಲ್ಲ. ಕಾಂಗ್ರೆಸ್ ಸಮಾವೇಶದಲ್ಲೇ ರಾಹುಲ್ ಗಾಂಧಿ ಅವರು ವಂದೇ ಮಾತರಂ ಹೇಳಲು ನಿರಾಕರಿಸಿದ್ದಾರೆ. ಈ ದೇಶ ಮತ್ತು ವ್ಯಕ್ತಿಗಳ ಬಗ್ಗೆ ಗೌರವ ಇಲ್ಲದವರು ಈ ದೇಶದಲ್ಲಿ ಯಾಕೆ ಇರಬೇಕು. ವಂದೇ ಮಾತರಂ ಗೀತೆಗೆ ಗೌರವ ತೋರಿದ ಸಂಸದ ಇಮ್ರಾನ್ ಮಸೂದ್ ಅವರಂತಹವರಿಗೆ ಗುಂಡಿಟ್ಟು ಕೊಲ್ಲುವುದು ಒಂದೇ ಬಾಕಿ ಎಂದರು. ಕಾಂಗ್ರೆಸ್ ಇಡೀ ದೇಶದ ಸಂಸ್ಕೃತಿಯನ್ನು ನಾಶ ಮಾಡುತ್ತಿದೆ.

ವಿಧಾನಪರಿಷತ್ ಸದಸ್ಯರಾದ ಡಿ.ಎಸ್. ಅರುಣ್, ಡಾ. ಧನಂಜಯ ಸರ್ಜಿ ಉಪಸ್ಥಿತರಿದ್ದರು.

# ಕೆಪಿಎಸ್‌ಸಿ ಸಾಹುಕಾರ್‌ಗೆ ಹೈಕೋರ್ಟ್ ರಿಲೀಫ್

1ನೇ ಪುಟದಿಂದ

ಮರುನೇಮಕಗೊಂಡ ಬಳಿಕ ಸಾಹುಕಾರ್ ಅವರು ಅಧ್ಯಕ್ಷರಾಗಿ ತಮ್ಮ ಅಧಿಕಾರ ಹಾಗೂ ಸೌಲಭ್ಯಗಳನ್ನು ಮುಂದುವರಿಸಿಕೊಂಡು ಹೋಗಬಹುದು ಎಂದು ನ್ಯಾಯಾಲಯ ತಿಳಿಸಿದೆ. ಸಾಹುಕಾರ್ ಹಾಗೂ ಅವರ ಪುತ್ರಿಯ ವಿರುದ್ಧ ಕೇಳಿಬಂದಿರುವ ಅಧಿಕಾರ ದುರುಪಯೋಗ ಮತ್ತು ಸ್ವಜನಪಕ್ಷಪಾತದ ಆರೋಪಗಳ ಸತ್ಯಾಸತ್ಯತೆ ಪರಿಶೀಲನೆಗೆ ಈ ತೀರ್ಪು ಯಾವುದೇ ರೀತಿಯ ಅಡ್ಡಿಯಾಗುವುದಿಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ತಮ್ಮ ಪುತ್ರಿಗೆ ಸರ್ಕಾರಿ ಹುದ್ದೆ ದೊರಕಿಸುವಲ್ಲಿ ಅಧಿಕಾರ ದುರುಪಯೋಗ ಮಾಡಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಜುಲೈ 10ರಂದು ಸಾಹುಕಾರ್ ಅವರನ್ನು ಕೆಪಿಎಸ್‌ಸಿ ಅಧ್ಯಕ್ಷ ಸ್ಥಾನದಿಂದ ಅಮಾನತುಗೊಳಿಸಿದ್ದರು. ಇದನ್ನು ಪ್ರಶ್ನಿಸಿ ಸಾಹುಕಾರ್ ಹೈಕೋರ್ಟ್ ಮೊರೆ ಹೋಗಿದ್ದರು. ರಾಜ್ಯಪಾಲರ ಆದೇಶವನ್ನು ರದ್ದುಪಡಿಸಿರುವ ಹೈಕೋರ್ಟ್ ತೀರ್ಪಿನಿಂದ ಸಾಹುಕಾರ್ ಅವರ ಮರುನೇಮಕಕ್ಕೆ ದಾರಿ ತೆರೆದಿದ್ದರೂ, ಅವರ ವಿರುದ್ಧದ ಆರೋಪಗಳ ತನಿಖೆ ಮುಂದುವರಿಯಲು ಯಾವುದೇ ತಡೆ ಇಲ್ಲ ಎಂಬುದನ್ನು ನ್ಯಾಯಾಲಯ ಸ್ಪಷ್ಟಪಡಿಸಿದೆ.

PRGI NO: KARKAN/2018/78481



**ವಿಧಾನಸೌಧದ ಬ್ಯಾಂಕ್ವೆಟ್‌ಹಾಲ್ ನಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ವತಿಯಿಂದ ಹಮ್ಮಿಕೊಳ್ಳಲಾದ "ಕೌಶಲ್ಯ ಕರ್ನಾಟಕ" ವಿಶ್ವ ಯುವ ಕೌಶಲ್ಯ ದಿನಾಚರಣೆ – 2026 ಕಾರ್ಯಕ್ರಮವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿದರು. ಈ ಕಾರ್ಯಕ್ರಮದಲ್ಲಿ, ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಸಕ್ಕರೆ ಸಚಿವರಾದ ಶಂಕರಪ್ಪ ಲಮಾಣಿ, ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಹೆಚ್.ಎಂ. ರೇವಣ್ಣ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶಿವಕಾಂತಮ್ಮ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಕರ್ನಾಟಕ ಕೌಶಲ್ಯ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಇ.ವಿ. ರಮಣರೆಡ್ಡಿ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ಸುಬೋಧ ಯಾದವ್, ಹಿರಿಯ ಸಿದ್ಧಲಿಂಗಪ್ಪ ಪೂಜಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.**

# ‘ನಿಮ್ಮ ಮಕ್ಕಳನ್ನೂ ಸರ್ಕಾರಿ ಶಾಲೆಗೆ ಕಳಿಸಿ’: ಅಭಿಜಿತ್ ದೀಪ್ಕೆ

● ವಿಕ್ರಮ ವಾಹಿನಿ । ಮುಂಬೈ



ಸರ್ಕಾರಿ ಶಾಲೆಗಳ ಗುಣಮಟ್ಟ ಸುಧಾರಿಸಬೇಕಾದರೆ ಶಿಕ್ಷಣ ಇಲಾಖೆಯ ಸಚಿವರು, ಅಧಿಕಾರಿಗಳು, ಪ್ರಾಂಶುಪಾಲರು ಹಾಗೂ ಶಿಕ್ಷಕರು ತಮ್ಮ ಮಕ್ಕಳನ್ನೇ ಸರ್ಕಾರಿ ಶಾಲೆಗಳಿಗೆ ದಾಖಲಿಸಬೇಕು ಎಂದು ಕಾಕ್ರೋಚ್ ಜನತಾ ಪಾರ್ಟಿ ಸಂಸ್ಥಾಪಕ ಅಭಿಜಿತ್ ದೀಪ್ಕೆ ಸವಾಲು ಹಾಕಿದ್ದಾರೆ. ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಮಾತನಾಡಿದ ಅವರು, ಸರ್ಕಾರಿ ಶಿಕ್ಷಣ ವ್ಯವಸ್ಥೆಯ ಮೇಲೆ ಅಧಿಕಾರಿಗಳಿಗೆ ನಂಬಿಕೆ ಇದ್ದರೆ ತಮ್ಮ ಮಕ್ಕಳಿಗೂ ಅದೇ ಶಾಲೆಗಳನ್ನು ಆಯ್ಕೆ ಮಾಡಬೇಕು ಎಂದು ಪ್ರಶ್ನಿಸಿದ್ದಾರೆ.

ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿನ ಮೂಲಸೌಕರ್ಯ ಸಮಸ್ಯೆಗಳನ್ನು ಗುರುತಿಸಲು ಅಎಕ ವತಿಯಿಂದ ‘ಸ್ಕೂಲ್ ಟೀಕ್ ಕರೋ’ ಅಭಿಯಾನ ನಡೆಸಲಾಗುತ್ತಿದೆ. ಆಗಸ್ಟ್ 15ರಂದು ಮಹಾರಾಷ್ಟ್ರದ ಹಿಂಗೋಲಿ ಜಿಲ್ಲೆಯ ಸಂತುಕ್ ಪಿಂಪ್ರಿ ಗ್ರಾಮದ ಸರ್ಕಾರಿ ಶಾಲೆಗೆ ಭೇಟಿ ನೀಡಿದ ಅವರು, ಕುಡಿಯುವ ನೀರು, ಶೌಚಾಲಯ, ಮುರಿದ ಕಿಟಕಿಗಳು ಹಾಗೂ ಬೆಂಚುಗಳ ಕೊರತೆ ಸೇರಿದಂತೆ ಹಲವು ಸಮಸ್ಯೆಗಳನ್ನು ಪ್ರಸ್ತಾಪಿಸಿದರು.

ನೀಟ್–ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ಶಿಕ್ಷಣ ಮತ್ತು ಪರೀಕ್ಷಾ ವ್ಯವಸ್ಥೆಯ ಸುಧಾರಣೆ ಕುರಿತು ದೀಪ್ಕೆ ಧ್ವನಿ ಎತ್ತುತ್ತಿದ್ದಾರೆ. ಸದ್ಯ ಅಎಕ ಅನ್ನು ರಾಜಕೀಯ ಪಕ್ಷಕ್ಕಿಂತ ಒತ್ತಡದ ಗುಂಪಾಗಿ ಕಾರ್ಯನಿರ್ವಹಿಸುವ ಉದ್ದೇಶ ಹೊಂದಿರುವುದಾಗಿ ಅವರು ತಿಳಿಸಿದ್ದಾರೆ.

# ಬೆಂಗಳೂರಿನ ನಿವಾಸ ಸೇರಿ 13 ಕಡೆ ದಾಳಿ

1ನೇ ಪುಟದಿಂದ

ಬೆಂಗಳೂರಿನಲ್ಲಿರುವ ಅವರ ನಿವಾಸ ಸೇರಿದಂತೆ ಹಲವು ಸ್ಥಳಗಳಲ್ಲಿ ಏಕಕಾಲಕ್ಕೆ ಕಾರ್ಯಾಚರಣೆ ನಡೆದಿದ್ದು, ದಾಖಲೆಗಳು ಹಾಗೂ ಹಣಕಾಸಿನ ವ್ಯವಹಾರಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಅಧಿಕಾರಿಗಳು ಪರಿಶೀಲಿಸಿದರು.

ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಸೇರಿದಂತೆ ಕೆಪಿಎಸ್‌ಸಿ ನಡೆಸಿದ ವಿವಿಧ ನೇಮಕಾತಿ ಪ್ರಕ್ರಿಯೆಗಳಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಈ ಶೋಧ ಮಹತ್ವ ಪಡೆದಿದೆ. ಪ್ರಶ್ನೆಪತ್ರಿಕೆ ಸೋರಿಕೆ, ಒಎಂಆರ್ ಪತ್ರಿಕೆಗಳಲ್ಲಿ ತಿದ್ದುಪಡಿ, ಅಭ್ಯರ್ಥಿಗಳ ಮಾಹಿತಿಯ ಸೋರಿಕೆ ಹಾಗೂ ಆಯ್ಕೆ ಪ್ರಕ್ರಿಯೆಯಲ್ಲಿ ನಿಯಮ ಉಲ್ಲಂಘನೆಯಂತಹ ಆರೋಪಗಳು ಕೇಳಿಬಂದಿವೆ.

400 ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಮಾಜಿ ಅಧ್ಯಕ್ಷರು, ಕೆಪಿಎಸ್‌ಸಿಯ ಮಾಜಿ ಸದಸ್ಯರು, ಅಧಿಕಾರಿಗಳು ಹಾಗೂ ಆಯ್ಕೆಯಾದ 29 ಅಭ್ಯರ್ಥಿಗಳ ವಿರುದ್ಧ ಈಗಾಗಲೇ ಪ್ರಕರಣ ದಾಖಲಾಗಿದೆ. ಪರೀಕ್ಷೆಯಲ್ಲಿ ಕೆಲ ಅಭ್ಯರ್ಥಿಗಳು ಅಸಾಮಾನ್ಯವಾಗಿ ಹೆಚ್ಚಿನ ಅಂಕ ಗಳಿಸಿರುವುದು ಅನುಮಾನಕ್ಕೆ ಕಾರಣವಾಗಿದ್ದು, ಈ ಕುರಿತು ತನಿಖೆ ನಡೆಯುತ್ತಿದೆ.

ಶಿವಶಂಕರಪ್ಪ ಸಾಹುಕಾರ್ ಅವರ ಇಬ್ಬರು ಪುತ್ರಿಯರ ಸರ್ಕಾರಿ ನೇಮಕಾತಿಗೆ ಸಂಬಂಧಿಸಿದ ಆರೋಪಗಳೂ ವಿವಾದಕ್ಕೆ ಕಾರಣವಾಗಿದ್ದವು. ಅಧಿಕಾರ ದುರುಪಯೋಗದ ಆರೋಪದ ಹಿನ್ನೆಲೆಯಲ್ಲಿ ರಾಜ್ಯಪಾಲರು ಅವರನ್ನು ಕೆಪಿಎಸ್‌ಸಿ ಅಧ್ಯಕ್ಷ ಸ್ಥಾನದಿಂದ ಅಮಾನತುಗೊಳಿಸಿ, ಸಂವಿಧಾನದ 317(1)ನೇ ವಿಧಿಯಡಿ ಸುಪ್ರೀಂ ಕೋರ್ಟ್ ವಿಚಾರಣೆಗೆ ಶಿಫಾರಸು ಮಾಡಿದ್ದರು.

ಪುತ್ರಿಯರ ನೇಮಕಾತಿಗೆ ಸಂಬಂಧಿಸಿದಂತೆ ಆದಾಯ ಹಾಗೂ ಹಿಂದುಳಿದ ವರ್ಗದ ಪ್ರಮಾಣಪತ್ರಗಳ ಬಳಕೆಯ ಬಗ್ಗೆಯೂ ಆರೋಪಗಳು ಕೇಳಿಬಂದಿದ್ದವು. ಈ ಹಿನ್ನೆಲೆಯಲ್ಲಿ ಸಂಬಂಧಿತ ದಾಖಲೆಗಳು ಮತ್ತು ಆಸ್ತಿ–ಆದಾಯ ವಿವರಗಳ ಪರಿಶೀಲನೆಯೂ ತನಿಖೆಯ ಭಾಗವಾಗಿದೆ.

ಇದೀಗ ಇಡಿ ನಡೆಸಿರುವ ಶೋಧದಿಂದ ಪ್ರಕರಣದ ಹಣಕಾಸಿನ ಆಯಾಮಗಳ ಬಗ್ಗೆಯೂ ತನಿಖೆ ನಡೆಯುತ್ತಿರುವುದು ಕುತೂಹಲ ಮೂಡಿಸಿದೆ. ಆದರೆ ಮಂಗಳವಾರದ ಕಾರ್ಯಾಚರಣೆಯಲ್ಲಿ ಏನು ಪತ್ತೆಯಾಗಿದೆ ಅಥವಾ ಎಷ್ಟು ಹಣ, ಆಸ್ತಿ ಅಥವಾ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂಬುದರ ಕುರಿತು ಇಡಿಯಿಂದ ಸಂಪೂರ್ಣ ಅಧಿಕೃತ ಮಾಹಿತಿ ಇನ್ನೂ ಹೊರಬಂದಿಲ್ಲ.

# ಕೌಶಲ್ಯವೇ ಯುವಕರ ಶಕ್ತಿ: ಡಿ.ಕೆ. ಶಿವಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

“ಕೌಶಲ್ಯವನ್ನು ಯಾರಿಂದಲೂ ಕದಿಯಲು ಸಾಧ್ಯವಿಲ್ಲ. ಯುವಕರ ಜ್ಞಾನ, ಪ್ರತಿಭೆ ಹಾಗೂ ಕೌಶಲ್ಯದ ಬಲದಿಂದ ಕರ್ನಾಟಕ ಜಾಗತಿಕ ಮಟ್ಟದಲ್ಲಿ ಹೊಸ ಸಂಶೋಧನೆಗಳ ತವರೂರಾಗಿದೆ” ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ವಿಶ್ವ ಯುವ ಕೌಶಲ್ಯ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯೆಯ ಜತೆಗೆ ಕೌಶಲ್ಯವೂ ಅಗತ್ಯ. ಯುವಕರು ಸ್ಥಳೀಯ ಮಟ್ಟದ ಸ್ಪರ್ಧೆಗೆ ಸೀಮಿತವಾಗದೆ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸುವ ಗುರಿ ಹೊಂದಬೇಕು ಎಂದು ಕರೆ ನೀಡಿದರು.

ಬೆಂಗಳೂರಿನಲ್ಲಿ ಸುಮಾರು 25 ಲಕ್ಷ ಐಟಿ ವೃತ್ತಿಪರರಿದ್ದು, ಕರ್ನಾಟಕ ಕೌಶಲ್ಯದ ಪ್ರಮುಖ ಕೇಂದ್ರವಾಗಿದೆ. ಪದವಿ ಮಾತ್ರ ಯಶಸ್ಸಿನ ಮಾನದಂಡವಲ್ಲ; ಪ್ರತಿ ವ್ಯಕ್ತಿಯಲ್ಲೂ ಯಾವುದಾದರೂ ಒಂದು ಕೌಶಲ್ಯ ಇರುತ್ತದೆ. ಅದನ್ನು ಗುರುತಿಸಿ ಬೆಳೆಸಿಕೊಂಡರೆ ಜೀವನದಲ್ಲಿ ಎಲ್ಲೆಡೆ ಅವಕಾಶ ಪಡೆಯಬಹುದು ಎಂದರು.

ಖಾಸಗಿ ವಲಯದ ಉದ್ಯೋಗಾವಕಾಶಗಳ ಮಾಹಿತಿಯನ್ನು ಯುವಕರಿಗೆ ತಲುಪಿಸಲು ‘ಯುವಸೇತು’ ಯೋಜನೆ ಜಾರಿಗೆ ತರಲು ಸರ್ಕಾರ ಚಿಂತನೆ ನಡೆಸಿದೆ. ಉದ್ಯೋಗದಾತರು ತಮ್ಮಲ್ಲಿರುವ ಖಾಲಿ ಹುದ್ದೆಗಳ ಮಾಹಿತಿಯನ್ನು ಈ ವೇದಿಕೆಯ ಮೂಲಕ ಹಂಚಿಕೊಳ್ಳಲಿದ್ದಾರೆ ಎಂದು ಶಿವಕುಮಾರ್ ತಿಳಿಸಿದರು.



ನವೆಂಬರ್‌ನಲ್ಲಿ ನಡೆಯಲಿರುವ ಬೆಂಗಳೂರು ಟೆಕ್ ಸಮಿಟ್‌ನಲ್ಲಿ ವಿದ್ಯಾರ್ಥಿಗಳು ಭಾಗವಹಿಸಬೇಕು. ಯುವಕರ ಭವಿಷ್ಯಕ್ಕಾಗಿ ರಾಜ್ಯದಲ್ಲಿ ಎಐ ವಿಶ್ವವಿದ್ಯಾಲಯ ಸ್ಥಾಪಿಸುವ ಬಗ್ಗೆಯೂ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಶಿಳ್ಳೆ ಹೊಡೆದಾಗ, ಶಿಸ್ತು ಕಾಪಾಡುವಂತೆ ಶಿವಕುಮಾರ್ ಹಾಸ್ಯಮಿಶ್ರಿತವಾಗಿ ಸಲಹೆ ನೀಡಿದರು.




**ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ರಾಜ್ಯಸಭೆ ಸದಸ್ಯರಾದ ಶ್ರೀಮತಿ ಸುಧಾಮೂರ್ತಿ ಅವರು ವಿಧಾನಸೌಧದಲ್ಲಿ ಮಂಗಳವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ರಾಜ್ಯಸಭಾ ಸದಸ್ಯರಾದ ಮನ್ಸೂರ್ ಅಲಿಖಾನ್ ಅವರು ಇದ್ದರು.**

# ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ: ಮಾಲೀಕ ಅರೆಸ್ಟ್

● ವಿಕ್ರಮ ವಾಹಿನಿ । ಬೆಂಗಳೂರು


ಬಾಡಿಗೆಗೆ ವಾಸವಿದ್ದ 20 ವರ್ಷದ ಕಾಲೇಜು ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ 60 ವರ್ಷದ ಮನೆ ಮಾಲೀಕ ಕಮಲೇಶ್ ಕುಮಾರ್‌ನನ್ನು ಅಶೋಕನಗರ ಪೊಲೀಸರು ಬಂಧಿಸಿದ್ದಾರೆ.

ರಿಪೇರಿ ಕೆಲಸ ಪರಿಶೀಲಿಸುವ ನೆಪದಲ್ಲಿ ಮನೆಗೆ ಬಂದ ಆರೋಪಿ, ವಿದ್ಯಾರ್ಥಿನಿಯೊಂದಿಗೆ ಅಸಭ್ಯವಾಗಿ ವರ್ತಿಸಿ ಲೈಂಗಿಕ ಕಿರುಕುಳ ನೀಡಿದ್ದಾನೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಘಟನೆ ಬಳಿಕ ಆಘಾತಗೊಂಡ ವಿದ್ಯಾರ್ಥಿನಿ ಪೊಲೀಸರಿಗೆ ದೂರು ನೀಡಿದ್ದರು. ದೂರಿನ ಆಧಾರದ ಮೇಲೆ ಭಾರತೀಯ ನ್ಯಾಯ ಸಂಹಿತೆಯ ಸಂಬಂಧಿತ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಯನ್ನು ಬಂಧಿಸಿ ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ. ಘಟನೆ ಕುರಿತು ಹೆಚ್ಚಿನ ಮಾಹಿತಿ ಹಾಗೂ ಸಾಕ್ಷ್ಯಗಳನ್ನು ಪೊಲೀಸರು ಸಂಗ್ರಹಿಸುತ್ತಿದ್ದು, ತನಿಖೆ ಮುಂದುವರಿಸಿದ್ದಾರೆ.

# ನಾಗೇಂದ್ರರನ್ನು ಸಚಿವ ಸ್ಥಾನದಿಂದ ತಕ್ಷಣ ಕೈಬಿಡಿ: ವಿಜಯೇಂದ್ರ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಜ್ವಲಂತ ಸಮಸ್ಯೆಗಳ ಬಗ್ಗೆ ಇವತ್ತು ಸದನದಲ್ಲಿ ಚರ್ಚೆ ಆಗಬೇಕಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.



ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬರಗಾಲ ಸೇರಿದಂತೆ ಕೆಪಿಎಸ್ಸಿ ಹಗರಣದ ವಿಚಾರ, ಇತರ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆ ಆಗಬೇಕೆಂಬ ಇಚ್ಛಾಶಕ್ತಿ ರಾಜ್ಯ ಸರಕಾರಕ್ಕೆ, ಮುಖ್ಯಮಂತ್ರಿಗಳಿಗೆ ಇದ್ದರೆ ಮುಲಾಜಿಲ್ಲದೇ ನಾಗೇಂದ್ರರನ್ನು ತಕ್ಷಣ ಸಚಿವ ಸಂಪುಟದಿಂದ ಕೈಬಿಡಬೇಕು ಎಂದು ಒತ್ತಾಯಿಸಿದರು. ಸದನದಲ್ಲಿ ನಾಗೇಂದ್ರರ ವಿಚಾರ ಚರ್ಚಿಸಬೇಕೆಂಬ ಮಾತನ್ನು ಮುಖ್ಯಮಂತ್ರಿಗಳು ಹೇಳುತ್ತಿದ್ದಾರೆ.

ಆದರೆ, ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದಾಗ ನಾಗೇಂದ್ರರ ಹಗರಣದ ವಿಚಾರ ಇದೇ ಸದನದಲ್ಲಿ ಈ ಹಿಂದೆ ಸಮಗ್ರ ಚರ್ಚೆ ಆಗಿದೆ. ನಂತರದಲ್ಲೇ ನಾಗೇಂದ್ರರ ರಾಜೀನಾಮೆ ಪಡೆಯಲಾಗಿತ್ತು ಎಂದು ಗಮನಕ್ಕೆ ತಂದರು.

ನಾಗೇಂದ್ರರ ಕುರಿತು ಚರ್ಚೆಗೆ ಏನೂ ಉಳಿದಿಲ್ಲ ಎಂದ ಅವರು, ಭಂಡತನ ಬಿಟ್ಟು ಮುಖ್ಯಮಂತ್ರಿಗಳು ನಾಗೇಂದ್ರರನ್ನು ಕೈಬಿಡಬೇಕು ಎಂದು ಆಗ್ರಹಿಸಿದರು. ಬರಗಾಲ, ಕೆಪಿಎಸ್ಸಿ, ಬಿಡದಿ ಟೌನ್‌ಶಿಪ್, ನೈಸ್ ವಿಚಾರಗಳು ಸೇರಿ ಎಲ್ಲ ವಿಚಾರಗಳಿಗೆ ಚರ್ಚೆಗೆ ಅವಕಾಶ ಮಾಡಿಕೊಡಿ ಎಂದು ಒತ್ತಾಯಿಸಿದರು.

# ತಿರುಮಲ ದರ್ಶನ, ವಸತಿ ಟಿಕೆಟ್ ದಿನಾಂಕ ಪ್ರಕಟ

● ವಿಕ್ರಮ ವಾಹಿನಿ । ತಿರುಮಲ

**ನವೆಂಬರ್ ತಿರುಮಲ ದರ್ಶನಕ್ಕೆ ಬುಕ್ಕಿಂಗ್ ವೇಳಾಪಟ್ಟಿ ಪ್ರಕಟ; ಆ.21ರಿಂದ ವಿವಿಧ ಸೇವೆಗಳ ಟಿಕೆಟ್, ಆ.25ಕ್ಕೆ 300 ವಿಶೇಷ ಪ್ರವೇಶ ದರ್ಶನ ಮತ್ತು ವಸತಿ ಕೊಠಡಿಗಳ ಬುಕ್ಕಿಂಗ್ ಆರಂಭ.**

ತಿರುಮಲ ಶ್ರೀ ವೆಂಕಟೇಶ್ವರ ಸ್ವಾಮಿ ದರ್ಶನಕ್ಕೆ ಭಕ್ತರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ನವೆಂಬರ್ ತಿಂಗಳ ದರ್ಶನ, ವಿವಿಧ ಆರ್ಜಿತ ಸೇವೆಗಳು ಹಾಗೂ ವಸತಿ ಕೊಠಡಿಗಳ ಆನ್‌ಲೈನ್ ಬುಕ್ಕಿಂಗ್‌ಗೆ ಸಂಬಂಧಿಸಿದ ವೇಳಾಪಟ್ಟಿಯನ್ನು ತಿರುಮಲ ತಿರುಪತಿ ದೇವಸ್ಥಾನಂ (ಟಿಟಿಡಿ) ಪ್ರಕಟಿಸಿದೆ.

ಭಕ್ತರು ದರ್ಶನಕ್ಕೆ ಮುಂಚಿತವಾಗಿಯೇ ಸೂಕ್ತ ಯೋಜನೆ ಮಾಡಿಕೊಳ್ಳುವಂತೆ ಟಿಟಿಡಿ ಅಧ್ಯಕ್ಷ ಬಿ.ಆರ್. ನಾಯುಡು ಮನವಿ ಮಾಡಿದ್ದಾರೆ. ತಿರುಮಲದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿರುವುದರಿಂದ ದರ್ಶನದ ವೇಳೆ ಸಂಯಮ ಕಾಪಾಡಿಕೊಳ್ಳಬೇಕು ಹಾಗೂ ಟಿಟಿಡಿ ಸಿಬ್ಬಂದಿಯ ಸೂಚನೆಗಳನ್ನು ಪಾಲಿಸಬೇಕು ಎಂದು ಅವರು ತಿಳಿಸಿದ್ದಾರೆ.

ಸುಪ್ರಭಾತ, ತೋಮಾಲ, ಅರ್ಚನ ಹಾಗೂ ಅಷ್ಟದಳ ಪಾದಪದ್ಮಾರಾಧನ ಸೇವೆಗಳಿಗೆ ಆಗಸ್ಟ್ 18ರ ಬೆಳಗ್ಗೆ 10ರಿಂದ ಆಗಸ್ಟ್ 20ರ ಬೆಳಗ್ಗೆ 10ರವರೆಗೆ ಆನ್‌ಲೈನ್ ನೋಂದಣಿ ನಡೆಯಲಿದೆ. ಲಾಟರಿಯಲ್ಲಿ ಆಯ್ಕೆಯಾದ ಭಕ್ತರು ಆಗಸ್ಟ್ 20ರಿಂದ 22ರ ಮಧ್ಯಾಹ್ನ 12 ಗಂಟೆಯೊಳಗೆ ಶುಲ್ಕ ಪಾವತಿಸಬೇಕು.



ಶ್ರೀವಾಣಿ ಟ್ರಸ್ಟ್ ದರ್ಶನ ಕೋಟಾ ಆಗಸ್ಟ್ 24ರ ಬೆಳಗ್ಗೆ 10ಕ್ಕೆ ಬಿಡುಗಡೆಯಾಗಲಿದೆ. ವಯೋವೃದ್ಧರು, ವಿಶೇಷಚೇತನರು ಹಾಗೂ ದೀರ್ಘಕಾಲಿಕ ಕಾಯಿಲೆ ಹೊಂದಿರುವ ಭಕ್ತರಿಗೆ ನೀಡಲಾಗುವ ಉಚಿತ ವಿಶೇಷ ದರ್ಶನದ ಟಿಕೆಟ್‌ಗಳು ಆಗಸ್ಟ್ 24ರ ಮಧ್ಯಾಹ್ನ 3ಕ್ಕೆ ಬಿಡುಗಡೆಯಾಗಲಿವೆ.

ಭಕ್ತರು ಹೆಚ್ಚು ನಿರೀಕ್ಷಿಸುವ 300 ವಿಶೇಷ ಪ್ರವೇಶ ದರ್ಶನದ ಟಿಕೆಟ್‌ಗಳು ಆಗಸ್ಟ್ 25ರ ಬೆಳಗ್ಗೆ 10ಕ್ಕೆ ಬಿಡುಗಡೆಯಾಗಲಿವೆ. ಈ ಹಿಂದೆ ಪ್ರತಿ ತಿಂಗಳ 24ರಂದು ಟಿಕೆಟ್‌ಗಳನ್ನು ಬಿಡುಗಡೆ ಮಾಡಲಾಗುತ್ತಿತ್ತು. ಈ ಬಾರಿ ಒಂದು ದಿನ ತಡವಾಗಿ ಟಿಕೆಟ್‌ಗಳು ಲಭ್ಯವಾಗಲಿವೆ.

ತಿರುಮಲದ ವಸತಿ ಕೊಠಡಿಗಳ ಆನ್‌ಲೈನ್ ಬುಕ್ಕಿಂಗ್ ಆಗಸ್ಟ್ 25ರ ಮಧ್ಯಾಹ್ನ 3 ಗಂಟೆಗೆ ಆರಂಭವಾಗಲಿದೆ.

ಭಕ್ತರು ಟಿಟಿಡಿಯ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಿ ಮೊಬೈಲ್ ಸಂಖ್ಯೆ ಮತ್ತು ಒಟಿಪಿ ಮೂಲಕ ಲಾಗಿನ್ ಮಾಡಬೇಕು. ನಂತರ ಅಗತ್ಯವಿರುವ ದರ್ಶನ, ಸೇವೆ ಅಥವಾ ವಸತಿ ಆಯ್ಕೆ ಮಾಡಿಕೊಂಡು ದಿನಾಂಕ ಹಾಗೂ ಸಮಯವನ್ನು ಆಯ್ಕೆ ಮಾಡಬೇಕು.

ಅಗತ್ಯ ಗುರುತಿನ ಚೀಟಿ ವಿವರಗಳನ್ನು ನಮೂದಿಸಿ ಆನ್‌ಲೈನ್‌ನಲ್ಲಿ ಶುಲ್ಕ ಪಾವತಿಸಿದ ಬಳಿಕ ಟಿಕೆಟ್ ಅಥವಾ ರಶೀದಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

# ಮಕ್ಕಳಿಂದ ಬೈಕ್ ಸುರಕ್ಷತಾ ಆವಿಷ್ಕಾರ

● ವಿಕ್ರಮ ವಾಹಿನಿ । ಹಾವೇರಿ

ಚಾಲನಾ ಪರವಾನಗಿ ಇಲ್ಲದವರು ಹಾಗೂ ಅಪ್ರಾಪ್ತರು ದ್ವಿಚಕ್ರ ವಾಹನ ಚಲಾಯಿಸುವುದನ್ನು ತಡೆಯುವ ಉದ್ದೇಶದಿಂದ ಹಾವೇರಿಯ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದ 5ನೇ ತರಗತಿ ವಿದ್ಯಾರ್ಥಿಗಳು ವಿನೂತನ ಭದ್ರತಾ ತಂತ್ರಜ್ಞಾನ ಅಭಿವೃದ್ಧಿಪಡಿಸಿದ್ದಾರೆ.

ವಿದ್ಯಾರ್ಥಿಗಳಾದ ಹ್ರಿದಾನ್ ಪವನ ಬಹದ್ದೂರ್ ದೇಸಾಯಿ ಮತ್ತು ಅಥರ್ವ ಬ್ರಹ್ಮೇರಿ ರೂಪಿಸಿರುವ ಈ ವ್ಯವಸ್ಥೆಯಲ್ಲಿ ಚಾಲನಾ ಪರವಾನಗಿ ಇದ್ದರೆ ಮಾತ್ರ ಬೈಕ್ ಸ್ಟಾರ್ಟ್ ಆಗುತ್ತದೆ. ಲೈಸೆನ್ಸ್ ಇಲ್ಲದಿದ್ದರೆ ವಾಹನ ಚಾಲನೆ ಸಾಧ್ಯವಾಗದಂತೆ ತಂತ್ರಜ್ಞಾನವನ್ನು ವಿನ್ಯಾಸಗೊಳಿಸಲಾಗಿದೆ.

ವಿಶೇಷವೆಂದರೆ, ವಿದ್ಯಾರ್ಥಿಗಳು ಇದನ್ನು ಕೇವಲ ವಿಜ್ಞಾನ ಮಾದರಿಯಾಗಿ ಪ್ರದರ್ಶಿಸದೆ, ನೈಜ ದ್ವಿಚಕ್ರ ವಾಹನಕ್ಕೆ ಅಳವಡಿಸಿ ಯಶಸ್ವಿಯಾಗಿ ಪರೀಕ್ಷಿಸಿದ್ದಾರೆ.

ಅಪ್ರಾಪ್ತ ವಯಸ್ಕರ ಬೈಕ್ ಚಾಲನೆ ಹಾಗೂ ಇದರಿಂದ ಸಂಭವಿಸಬಹುದಾದ ರಸ್ತೆ ಅಪಘಾತಗಳನ್ನು ತಡೆಯುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಶಿಕ್ಷಕರಾದ ರಾಘವೇಂದ್ರ ಪಾಟೀಲ್ ಹಾಗೂ ಪಲ್ಲವಿ ತಾಂತ್ರಿಕ ಮಾರ್ಗದರ್ಶನ ನೀಡಿದ್ದು, ಮುಖ್ಯೋಪಾಧ್ಯಾಯಿನಿ ಶ್ಯಾಮಲಾ ವಿ. ಪ್ರೋತ್ಸಾಹ ನೀಡಿದ್ದಾರೆ. ತರಗತಿಯಲ್ಲಿ ಕಲಿತ ಎಲೆಕ್ಟ್ರಾನಿಕ್ಸ್, ಪ್ರೋಗ್ರಾಮಿಂಗ್ ಮತ್ತು ತಂತ್ರಜ್ಞಾನವನ್ನು ಸಾಮಾಜಿಕ ಸಮಸ್ಯೆಗೆ ಪರಿಹಾರವಾಗಿ ಬಳಸಿರುವ ಪುಟಾಣಿ ವಿಜ್ಞಾನಿಗಳ ಪ್ರಯತ್ನಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

ವಿದ್ಯಾರ್ಥಿಗಳು ರೂಪಿಸಿರುವ ವ್ಯವಸ್ಥೆಯಲ್ಲಿ ವಾಹನ ಚಾಲನೆಗೆ ಮುನ್ನ ಚಾಲನಾ ಪರವಾನಗಿ ಹೊಂದಿರುವ ವ್ಯಕ್ತಿಯನ್ನು ಗುರುತಿಸುವ ತಂತ್ರಜ್ಞಾನವನ್ನು ಬಳಸಲಾಗಿದೆ. ಪರವಾನಗಿ ಇಲ್ಲದಿದ್ದರೆ ವಾಹನದ ಚಾಲನಾ ವ್ಯವಸ್ಥೆ ಕಾರ್ಯನಿರ್ವಹಿಸದಂತೆ ವಿನ್ಯಾಸಗೊಳಿಸಿರುವುದು ಇದರ ವಿಶೇಷತೆಯಾಗಿದೆ.

ಈ ಆವಿಷ್ಕಾರವನ್ನು ನೈಜ ದ್ವಿಚಕ್ರ ವಾಹನಕ್ಕೆ ಅಳವಡಿಸಿ ಹಲವು ಬಾರಿ ಪರೀಕ್ಷಿಸಲಾಗಿದ್ದು, ವ್ಯವಸ್ಥೆ ನಿರೀಕ್ಷೆಯಂತೆ ಕಾರ್ಯನಿರ್ವಹಿಸಿದೆ. ಅಪ್ರಾಪ್ತರು ಬೈಕ್ ಚಲಾಯಿಸುವುದನ್ನು ತಡೆಯುವುದರ ಜತೆಗೆ, ಪರವಾನಗಿ ಇಲ್ಲದೆ ವಾಹನ ಓಡಿಸುವವರಿಂದ ಉಂಟಾಗಬಹುದಾದ ಅಪಘಾತಗಳನ್ನು ಕಡಿಮೆ ಮಾಡುವ ಉದ್ದೇಶವೂ ಇದಾಗಿದೆ.

# ಸತ್ಯೇಂದ್ರ ಜೈನ್ ಸೇರಿ ಆರು ಮಂದಿ ಬಂಧನ

● ವಿಕ್ರಮ ವಾಹಿನಿ । ನವದೆಹಲಿ

ದೆಹಲಿ ಜಲ ಮಂಡಳಿಯ ಒಳಚರಂಡಿ ಸಂಸ್ಕರಣಾ ಘಟಕಗಳ ವಿಸ್ತರಣೆ ಹಾಗೂ ಉನ್ನತೀಕರಣಕ್ಕೆ ಸಂಬಂಧಿಸಿದ ಟೆಂಡರ್ ಅಕ್ರಮ ಪ್ರಕರಣದಲ್ಲಿ ಆಮ್ ಆದ್ಮಿ ಪಕ್ಷದ ನಾಯಕ ಹಾಗೂ ಮಾಜಿ ಸಚಿವ ಸತ್ಯೇಂದ್ರ ಜೈನ್ ಸೇರಿದಂತೆ ಆರು ಮಂದಿಯನ್ನು ದೆಹಲಿ ಭ್ರಷ್ಟಾಚಾರ ನಿಗ್ರಹ ದಳ ಮಂಗಳವಾರ ಬಂಧಿಸಿದೆ.

ಬಂಧಿತರಲ್ಲಿ ದೆಹಲಿ ಜಲ ಮಂಡಳಿಯ ಮಾಜಿ ಸಿಇಒ ಹಾಗೂ ನಿವೃತ್ತ ಐಎಎಸ್ ಅಧಿಕಾರಿ ಉದಿತ್ ಪ್ರಕಾಶ್ ರೈ, ಗುತ್ತಿಗೆ ಆಧಾರಿತ ಮಾಜಿ ಸಲಹೆಗಾರ ಅಂಕಿತ್ ಶ್ರೀವಾಸ್ತವ ಹಾಗೂ ಮೂವರು ಖಾಸಗಿ ವ್ಯಕ್ತಿಗಳು ಸೇರಿದ್ದಾರೆ. ಆರೋಪಿಗಳ ವಿರುದ್ಧ ಭ್ರಷ್ಟಾಚಾರ ತಡೆ ಕಾಯ್ದೆ ಹಾಗೂ ಐಪಿಸಿಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ 2024ರ ಮೇ 11ರಂದು ಎಫ್‌ಐಆರ್ ದಾಖಲಿಸಲಾಗಿತ್ತು ಎಂದು ಎಸಿಬಿ ತಿಳಿಸಿದೆ.

ಘಟಕಗಳ ವಿಸ್ತರಣೆ ಮತ್ತು ಉನ್ನತೀಕರಣಕ್ಕಾಗಿ ಹೊರಡಿಸಲಾಗಿದ್ದ ಟೆಂಡರ್‌ನಲ್ಲಿ ಅಕ್ರಮ ನಡೆದಿದೆ ಎಂಬುದು ಪ್ರಕರಣದ ಪ್ರಮುಖ ಆರೋಪವಾಗಿದೆ. ಇತರ ಕಂಪನಿಗಳ ಸ್ಪರ್ಧೆಯನ್ನು ಸೀಮಿತಗೊಳಿಸಿ, ನಿರ್ದಿಷ್ಟ ತಂತ್ರಜ್ಞಾನ ಹಾಗೂ ‘ಮೆಸರ್ಸ್ ಯುರೋಟೆಕ್ ಎನ್ವಿರಾನ್‌ಮೆಂಟ್ ಪ್ರೈವೇಟ್ ಲಿಮಿಟೆಡ್’ ಎಂಬ ಕಂಪನಿಗೆ ಅನುಕೂಲವಾಗುವ ರೀತಿಯಲ್ಲಿ ಟೆಂಡರ್‌ನ ತಾಂತ್ರಿಕ ಮಾನದಂಡಗಳನ್ನು ರೂಪಿಸಲಾಗಿದೆ ಎಂದು ತನಿಖಾ ಸಂಸ್ಥೆ ಆರೋಪಿಸಿದೆ.



ಇದಲ್ಲದೆ, ಸಂಸ್ಕರಿಸಿದ ತ್ಯಾಜ್ಯ ನೀರಿಗೆ ಸಂಬಂಧಿಸಿದ ಅಗತ್ಯ ಮಾನದಂಡಗಳನ್ನು ಟೆಂಡರ್‌ನಿಂದ ಕೈಬಿಡಲಾಗಿದೆ ಹಾಗೂ ತಾಂತ್ರಿಕ ವಿವರಗಳಲ್ಲಿ ಬದಲಾವಣೆ ಮಾಡಲಾಗಿದೆ ಎಂದು ಎಸಿಬಿ ಹೇಳಿದೆ. ಈ ಅಕ್ರಮಗಳಿಂದ ಸರ್ಕಾರದ ಬೊಕ್ಕಸಕ್ಕೆ ಭಾರಿ ಆರ್ಥಿಕ ನಷ್ಟ ಉಂಟಾಗಿದೆ ಎಂಬ ಆರೋಪವೂ ಇದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಎಸಿಬಿ ತನಿಖೆ ಮುಂದುವರಿಸಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದ ಇತರ ವ್ಯಕ್ತಿಗಳ ಪಾತ್ರ ಹಾಗೂ ಹಣಕಾಸಿನ ವ್ಯವಹಾರಗಳ ಬಗ್ಗೆಯೂ ಪರಿಶೀಲನೆ ನಡೆಸುತ್ತಿದೆ. ಆರೋಪಿಗಳ ವಿರುದ್ಧದ ಆರೋಪಗಳು ತನಿಖೆಯ ಹಂತದಲ್ಲಿದ್ದು, ಪ್ರಕರಣದ ಮುಂದಿನ ಬೆಳವಣಿಗೆಗಳತ್ತ ಗಮನ ಹರಿಸಲಾಗಿದೆ.

ಬಂಧಿತರನ್ನು ವಿಚಾರಣೆಗೆ ಒಳಪಡಿಸಿರುವ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು, ಗುತ್ತಿಗೆ ಪ್ರಕ್ರಿಯೆಯಲ್ಲಿ ನಿಯಮ ಉಲ್ಲಂಘನೆಯಾಗಿದೆಯೇ ಹಾಗೂ ನಿರ್ದಿಷ್ಟ ಸಂಸ್ಥೆಗೆ ಅನುಕೂಲ ಕಲ್ಪಿಸಲು ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆಯೇ ಎಂಬ ಬಗ್ಗೆ ಮಾಹಿತಿ ಕಲೆಹಾಕುತ್ತಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳು, ಹಣಕಾಸಿನ ವ್ಯವಹಾರಗಳು ಹಾಗೂ ನಿರ್ಧಾರ ಕೈಗೊಂಡವರ ಪಾತ್ರದ ಬಗ್ಗೆಯೂ ಪರಿಶೀಲನೆ ನಡೆಸಲಾಗುತ್ತಿದೆ.


ಒಳಚರಂಡಿ ಸಂಸ್ಕರಣಾ ಘಟಕಗಳ ವಿಸ್ತರಣೆ ಮತ್ತು ಉನ್ನತೀಕರಣ ಕಾಮಗಾರಿಗಳ ಮಂಜೂರು, ಟೆಂಡರ್ ಷರತ್ತುಗಳ ಬದಲಾವಣೆ ಹಾಗೂ ಗುತ್ತಿಗೆ ನೀಡುವ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದೆಯೇ ಎಂಬುದನ್ನು ತನಿಖಾ ತಂಡ ಪರಿಶೀಲಿಸುತ್ತಿದೆ. ತನಿಖೆ ಪೂರ್ಣಗೊಂಡ ಬಳಿಕ ಪ್ರಕರಣದ ಸಂಪೂರ್ಣ ಚಿತ್ರಣ ಸ್ಪಷ್ಟವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಹನೂರು ಎನ್‌ಕೌಂಟರ್‌ಗೆ ನ್ಯಾಯಾಂಗ ತನಿಖೆ: ವಿಜಯೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು

ಚಾಮರಾಜನಗರ ಜಿಲ್ಲೆಯ ಹನೂರು ಬಳಿ ನಡೆದ ಅರಣ್ಯ ಎನ್‌ಕೌಂಟರ್ ಪ್ರಕರಣದ ಬಗ್ಗೆ ಅನುಮಾನಗಳು ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಮ್ಯಾಜಿಸ್ಟ್ರೇಟ್ ತನಿಖೆ ಬದಲಿಗೆ ನ್ಯಾಯಾಂಗ ತನಿಖೆ ನಡೆಸಿ ಸತ್ಯಾಂಶವನ್ನು ಬಹಿರಂಗಪಡಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ಮೃತ ಮೂವರ ಕುಟುಂಬಗಳಿಗೆ ಮಾನವೀಯ ನೆಲೆಯಲ್ಲಿ ತಲಾ 1 ಕೋಟಿ ಪರಿಹಾರ ಹಾಗೂ ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡಬೇಕು. ಮೃತರ ಧರ್ಮವನ್ನು ಪರಿಗಣಿಸದೆ ಕುಟುಂಬಗಳಿಗೆ ನ್ಯಾಯ ಒದಗಿಸುವುದು ಸರ್ಕಾರದ ಕರ್ತವ್ಯ ಎಂದು ಅವರು ಹೇಳಿದರು.



ಮೃತರು ಬೇಟೆಗೆ ತೆರಳಿದ್ದರು ಎಂಬ ಆರೋಪವಿದ್ದರೆ ಅದರ ಸತ್ಯಾಸತ್ಯತೆ ತನಿಖೆಯಲ್ಲಿ ಹೊರಬರಲಿ. ಅರಣ್ಯ ಅಧಿಕಾರಿಗಳು ಕಾನೂನುಬದ್ಧವಾಗಿ ಕಾರ್ಯನಿರ್ವಹಿಸಿದ್ದಾರೆಯೇ ಎಂಬುದನ್ನೂ ಪರಿಶೀಲಿಸಬೇಕು. ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳ ಕುರಿತು ನಡೆಯುತ್ತಿರುವ ತನಿಖೆಯನ್ನು ಸ್ವಾಗತಿಸಿದ ವಿಜಯೇಂದ್ರ, ಸಿಬಿಐ ತನಿಖೆಗೆ ರಾಜ್ಯ ಸರ್ಕಾರ ಕೂಡಲೇ ಆದೇಶಿಸಬೇಕು ಎಂದರು. ಪರೀಕ್ಷೆ, ಫಲಿತಾಂಶ ಹಾಗೂ ನೇಮಕಾತಿಯಲ್ಲಿ ವಿಳಂಬದಿಂದ ಲಕ್ಷಾಂತರ ಉದ್ಯೋಗಾಕಾಂಕ್ಷಿಗಳಿಗೆ ಅನ್ಯಾಯವಾಗುತ್ತಿದೆ. ಅಕ್ರಮ ನಡೆದಿದ್ದರೆ ತಪ್ಪಿತಸ್ಥರನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಹನೂರು ಎನ್‌ಕೌಂಟರ್‌ಗೆ ನ್ಯಾಯಾಂಗ ತನಿಖೆ, ಮೃತ ಕುಟುಂಬಗಳಿಗೆ ಪರಿಹಾರ–ಉದ್ಯೋಗ ಹಾಗೂ ಕೆಪಿಎಸ್‌ಸಿ ಅಕ್ರಮಕ್ಕೆ ಸಿಬಿಐ ತನಿಖೆ– ಈ ಮೂರು ಬೇಡಿಕೆಗಳ ಬಗ್ಗೆ ಸರ್ಕಾರ ಸ್ಪಷ್ಟ ನಿರ್ಧಾರ ಕೈಗೊಳ್ಳಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು. ಹನೂರು ಪ್ರಕರಣದಲ್ಲಿ ಸತ್ಯಾಂಶ ಹೊರಬರಲು ಪಾರದರ್ಶಕ ತನಿಖೆ ಅಗತ್ಯವಾಗಿದ್ದು, ಯಾವುದೇ ಮುಚ್ಚುಮರೆ ಇರಬಾರದು ಎಂದು ವಿಜಯೇಂದ್ರ ಹೇಳಿದರು.

# ಹಂಸ ಜಾನಪದ ಸಂಭ್ರಮದಲ್ಲಿ ಕಂಗೊಳಿಸಿದ ಜನಪದ ಕಲೆ

● ವಿಕ್ರಮ ವಾಹಿನಿ । ಬೆಂಗಳೂರು

ಹಂಸ ಜ್ಯೋತಿ ಟ್ರಸ್ಟ್ (ರಿ.) ತನ್ನ ಸುವರ್ಣ ಸಂಭ್ರಮದ ಅಂಗವಾಗಿ ಆಯೋಜಿಸಿದ್ದ ‘ಹಂಸ ಜಾನಪದ ಸಂಭ್ರಮ’ ಕಾರ್ಯಕ್ರಮವು ಮಲ್ಲತ್ತಹಳ್ಳಿಯ ಕಲಾಗ್ರಾಮದ ಸಾಂಸ್ಕೃತಿಕ ಸಮುಚ್ಚಯ ಭವನದಲ್ಲಿ ಸೋಮವಾರ ಜಾನಪದ ಕಲೆ–ಸಂಸ್ಕೃತಿಯ ವೈವಿಧ್ಯಮಯ ಪ್ರದರ್ಶನಕ್ಕೆ ಸಾಕ್ಷಿಯಾಯಿತು.

ಬೆಂಗಳೂರಿನ ನಗರ ಜಿಲ್ಲೆಯ ನಿವೃತ್ತ ಜಿಲ್ಲಾಧಿಕಾರಿ ವಿ. ಶಂಕರ್, ಭಾ.ಆ.ಸೇ. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜಾನಪದ ಕಲೆಗಳು ನಮ್ಮ ನಾಡಿನ ಜೀವನಶೈಲಿ, ಸಂಸ್ಕೃತಿ, ಆಚರಣೆ ಹಾಗೂ ಜನರ ಬದುಕಿನೊಂದಿಗೆ ಬೆಸೆದುಕೊಂಡಿರುವ ಅಮೂಲ್ಯ ಪರಂಪರೆ. ಆಧುನಿಕತೆಯ ನಡುವೆಯೂ ಇವುಗಳನ್ನು ಉಳಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಸಮಾಜದ ಮೇಲಿದೆ ಎಂದರು.

ಜಾನಪದ ಕಲಾವಿದರಿಗೆ ಸೂಕ್ತ ವೇದಿಕೆ ಕಲ್ಪಿಸುವುದು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಗೌರವಿಸುವುದು ಸಾಂಸ್ಕೃತಿಕ ಕ್ಷೇತ್ರಕ್ಕೆ ನೀಡುವ ಮಹತ್ವದ ಕೊಡುಗೆಯಾಗಿದೆ.



ಕಾರ್ಯಕ್ರಮದಲ್ಲಿ ಜಾನಪದ ಗಾಯಕಿ ಹಾಗೂ ರಂಗನಟಿ ಸವಿತಾ ಗಣೇಶ್‌ಪ್ರಸಾದ್ ಮತ್ತು ತಂಡದ ಜಾನಪದ ಗಾಯನ ಪ್ರೇಕ್ಷಕರ ಗಮನ ಸೆಳೆಯಿತು. ಅಂತರರಾಷ್ಟ್ರೀಯ ಖ್ಯಾತಿಯ ಜಾನಪದ ಕಲಾವಿದ ಡೊಳ್ಳು ಚಂದ್ರು ಅವರ ತಂಡದಿಂದ ಡೊಳ್ಳು ಕುಣಿತ, ಪೂಜಾ ಕುಣಿತ, ವೀರಭದ್ರ ಕುಣಿತ, ಗೊಂಬೆ ಕುಣಿತ ಹಾಗೂ ಯಕ್ಷಗಾನ ಕುಣಿತ ಸೇರಿದಂತೆ ಹಲವು ಕಲಾಪ್ರಕಾರಗಳ ಪ್ರದರ್ಶನ ನಡೆಯಿತು.

10 ಸಾಧಕರಿಗೆ ‘ಹಂಸ ಸಮ್ಮಾನ್–2026’ ಸಾಂಸ್ಕೃತಿಕ, ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ, ಪತ್ರಿಕೋದ್ಯಮ ಹಾಗೂ ಕಲಾ ಕ್ಷೇತ್ರಗಳಲ್ಲಿ ಗಮನಾರ್ಹ ಸೇವೆ ಸಲ್ಲಿಸಿದ 10 ಸಾಧಕರಿಗೆ ‘ಹಂಸ ಸಮ್ಮಾನ್02026’ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಎಸ್. ಸರವಣನ್, ಕಂನಾಡಿಗ ನಾರಾಯಣ, ವಿನೋದ್ ಬಿ. ಧಾಂಗೆ, ಬಿ.ಎಸ್. ವೆಂಕಟಾಚಲಪತಿ, ವೈ.ಬಿ.ಎಚ್. ಜಯದೇವ್, ಡಾ. ಬಿ.ಎಂ. ಪಟೇಲ್‌ಪಾಂಡು, ಶ್ರೀನಿವಾಸ ಗೌಡ, ಹಿರಿಯ ಡೊಳ್ಳು ಕಲಾವಿದ ಶ್ರೀನಿವಾಸ, ಸವಿತಾ ಗಣೇಶ್‌ಪ್ರಸಾದ್ ಹಾಗೂ ಡಾ. ಮಧುರಾಣಿ ಗೌಡ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

ಶೇಷಾದ್ರಿಪುರಂ ಶಿಕ್ಷಣ ದತ್ತಿಯ ಗೌರವಾನ್ವಿತ ಪ್ರಧಾನ ಕಾರ್ಯದರ್ಶಿ ನಾಡೋಜ ಡಾ. ವೂಡೆ ಪಿ. ಕೃಷ್ಣ, ಡಾ. ಬಿ.ಆರ್. ಹಿರೇಮಠ, ಜಾಣಗೆರೆ ವೆಂಕಟರಾಮಯ್ಯ, ಎಸ್. ಬಾಲರಾಜ್, ಎಸ್.ಟಿ. ಉದಯಕುಮಾರ್, ಬಿ.ಎಸ್. ಮೋಹನ್‌ಕುಮಾರ್, ಎನ್. ಜಗದೀಶ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಪರಿಕಲ್ಪನೆ ಹಾಗೂ ಪ್ರಧಾನ ನಿರ್ವಹಣೆಯನ್ನು ಹಂಸ ಜ್ಯೋತಿ ಟ್ರಸ್ಟ್‌ನ ಸಂಸ್ಥಾಪಕ–ವ್ಯವಸ್ಥಾಪಕ ಟ್ರಸ್ಟಿ ಎಂ. ಮುರಳೀಧರ ವಹಿಸಿದ್ದರು. ಕಾರ್ಯನಿರ್ವಾಹಕ ಟ್ರಸ್ಟಿ ವಿಜಯ ಮುರಳೀಧರ ಸೇರಿದಂತೆ ಟ್ರಸ್ಟ್‌ನ ಪದಾಧಿಕಾರಿಗಳು ಸಹಕರಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಕಾರದೊಂದಿಗೆ ನಡೆದ ಸಮಾರಂಭದಲ್ಲಿ ಹಿರಿಯ ಪತ್ರಕರ್ತರು, ಸಾಹಿತಿಗಳು, ಕಲಾವಿದರು, ಸಮಾಜಸೇವಕರು ಹಾಗೂ ಶಿಕ್ಷಣ ಕ್ಷೇತ್ರದ ಗಣ್ಯರು ಭಾಗವಹಿಸಿದ್ದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# 53 ಎಂಜಿನಿಯರುಗಳಿಗೆ ಪ್ರತಿಜ್ಞಾವಿಧಿ ಬೋಧಿಸಿ, ನೇಮಕಾತಿ ಪತ್ರ ವಿತರಿಸಿದ ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು


ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ಹೊಸದಾಗಿ ಎಂಜಿನಿಯರುಗಳಾಗಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರೊಂದಿಗೆ.

ರಾಷ್ಟ್ರ ನಿರ್ಮಾಣದಲ್ಲಿ ಎಂಜಿನಿಯರುಗಳ ಪಾತ್ರ ಮಹತ್ವದ್ದಾಗಿದ್ದು, ಸದಾ ಗುಣಮಟ್ಟಕ್ಕೆ ಆದ್ಯತೆ ನೀಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಪ್ರತಿಪಾದಿಸಿದ್ದಾರೆ.

ವಿಧಾನಸೌಧದಲ್ಲಿಂದು ನೂತನವಾಗಿ ಆಯ್ಕೆಯಾಗಿರುವ 13 ಸಹಾಯಕ ಎಂಜಿನಿಯರುಗಳು ಮತ್ತು 40 ಕಿರಿಯ ಎಂಜಿನಿಯರುಗಳಿಗೆ ನೇಮಕಾತಿ ಪತ್ರ ವಿತರಿಸಿ ಮಾತನಾಡಿದ ಅವರು, ಎಂಜಿನಿಯರುಗಳು ರಾಷ್ಟ್ರ ನಿರ್ಮಾತೃಗಳಾಗಿದ್ದು, ಅವರು ವಿನ್ಯಾಸ ಮಾಡುವ ಅಣೆಕಟ್ಟೆ, ವಿಮಾನ ನಿಲ್ದಾಣ, ರೈಲು ನಿಲ್ದಾಣ, ರಸ್ತೆ, ಸೇತುವೆ ಇತ್ಯಾದಿ ಗಟ್ಟಿಮುಟ್ಟಾಗಿ, ದೀರ್ಘಾವಧಿ ಬಾಳಿಕೆ ಬಂದರೆ, ಜನ ಅವರನ್ನು ಖಂಡಿತಾ ಸ್ಮರಿಸುತ್ತಾರೆ ಎಂದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಲ್ಲಿ ಹೊಸದಾಗಿ ಎಂಜಿನಿಯರುಗಳಾಗಿ ನೇಮಕಗೊಂಡಿರುವ ನಿಮಗೆ ಮಹಾತ್ಮಾ ಗಾಂಧೀ ಅವರ ಕನಸಿನ ಗ್ರಾಮ ನೈರ್ಮಲ್ಯ ಮತ್ತು ಗ್ರಾಮೀಣಾಭಿವೃದ್ಧಿಯ ಅವಕಾಶ ಸಿಕ್ಕಿದೆ. ನೀವು ಪ್ರಾಮಾಣಿಕತೆಯಿಂದ ದಕ್ಷತೆಯಿಂದ ಮತ್ತು ಸಮರ್ಪಣಾ ಮನೋಭಾವದಿಂದ ಕೆಲಸ ಮಾಡಿದರೆ ಪ್ರತಿಯೊಂದು ಹಳ್ಳಿಯೂ ಅಭಿವೃದ್ಧಿ ಆಗುತ್ತದೆ ಎಂದರು.

ಶ್ರೇಷ್ಠ ಎಂಜಿನಿಯರ್ ಯಾರು ಎಂದರೆ ಭಾರತ ರತ್ನ ಸರ್. ಎಂ. ವಿಶ್ವೇಶ್ವರಯ್ಯ ಹೆಸರು ಹೇಳುತ್ತೇವೆ. ಸರ್. ಎಂ.ವಿ. ನಮ್ಮನ್ನಗಲಿ 65 ವರ್ಷವಾದರೂ ನಾವು ಅವರನ್ನು ಸ್ಮರಿಸುತ್ತೇವೆ. ಸಾಧಕರನ್ನು ಮತ್ತು ಪ್ರಾಮಾಣಿಕರನ್ನು ಸಮಾಜ ಸದಾ ಕೃತಜ್ಞತೆಯಿಂದ ನೆನೆಯುತ್ತದೆ. ನೀವೂ ದಕ್ಷತೆಯಿಂದ ಮತ್ತು ಪ್ರಾಮಾಣಿಕತೆಯಿಂದ ಕೆಲಸ ಮಾಡಿ ಜಗತ್ತು ಸ್ಮರಿಸುವಂತೆ ಮಾಡಿ ಎಂದು ಈಶ್ವರ ಖಂಡ್ರೆ ಹೇಳಿದರು.

ಇಲಾಖೆಯ ಎಂಜಿನಿಯರುಗಳು ಕೆಲಸದಲ್ಲಿ ರಾಜೀ ಮಾಡಿಕೊಳ್ಳಬಾರದು. ನೂರಾರು ವರ್ಷ ಬಾಳಿಕೆ ಬರುವಂತಹ ಶಾಶ್ವತ ಆಸ್ತಿಗಳನ್ನು ಗ್ರಾಮೀಣ ಪ್ರದೇಶದಲ್ಲಿ ನಿರ್ಮಿಸಬೇಕು. ಭವಿಷ್ಯದ ಚಿಂತನೆ ಇರಬೇಕು. ನೀವು ಇಂದು ಮಾಡುವ ವಿನ್ಯಾಸ, ಮುಂದಿನ 30 ವರ್ಷಗಳಲ್ಲಿ ಆಗಬಹುದಾದ ಜನಸಂಖ್ಯೆಯ ಹೆಚ್ಚಳ, ವಾಹನಗಳ ಒತ್ತಡ ಹೀಗೆ ಎಲ್ಲವನ್ನೂ ಒಳಗೊಂಡಿರಬೇಕು. ನೀವು ನಿರ್ಮಿಸುವ ಓವರ್ ಹೆಡ್ ಟ್ಯಾಂಕ್ ಗಳಿರಲಿ, ಕೊಳವೆ ಮಾರ್ಗವಿರಲಿ ಗಟ್ಟಿಯಾಗಿ ನಿಲ್ಲಬೇಕು. ಜನ ಮೆಚ್ಚುವಂತೆ ಇರಬೇಕು ಎಂದು ತಿಳಿಸಿದರು.

ಎಲ್ಲ ನಾಗರಿಕತೆಗಳೂ ಹುಟ್ಟಿದ್ದು ನದಿಗಳ ತಟದಲ್ಲಿ. ಮನುಷ್ಯ ನೀರಿಲ್ಲದೆ ಬದುಕಲು ಸಾಧ್ಯವೇ ಇಲ್ಲ. ನೀರು ಅಮೃತ ಸಮಾನ. ಆದರೆ ಇಂದು ನದಿ, ಕೆರೆ, ಕುಂಟೆ ಎಲ್ಲವೂ ಕಲುಷಿತವಾಗುತ್ತಿದೆ. ಜಲ ಮೂಲಗಳು ಹಾಳಾಗದಂತೆ ಎಚ್ಚರ ವಹಿಸಬೇಕು. ಮುಂದಿನ 30 ವರ್ಷಗಳ ನೀರಿನ ಅಗತ್ಯವನ್ನು ಮನಗಂಡು ಯೋಜನೆ ರೂಪಿಸಬೇಕು ಎಂದರು.

ನೀರಿಗಾಗಿ ಯುದ್ಧ ನಡೆಯುತ್ತದೆ ಎಂದು ಹಿರಿಯರು ಹೇಳುತ್ತಿದ್ದರು. ಅದನ್ನು ನಾವು ನೋಡುತ್ತಿದ್ದೇವೆ. ಕಾವೇರಿ, ಕೃಷ್ಣ ಮಹಾದಾಯಿಗಾಗಿ ನೆರೆ ರಾಜ್ಯಗಳೊಂದಿಗೆ ಸಂಘರ್ಷ ನಡೆಯುತ್ತಿದೆ. ಪಾಕಿಸ್ತಾನ- ಭಾರತ ನಡುವೆಯೂ ನದಿ ನೀರಿಗಾಗಿ ಹೋರಾಟ ಇದೆ. ಹೀಗಾಗಿ ಜೀವ ಜಲ ನೀರಿನ ಸಂರಕ್ಷಣೆ ಆಗಬೇಕು ಎಂದರು. ರಾಜ್ಯದ ಅರ್ಧದಷ್ಟು ಜನ ಗ್ರಾಮೀಣ ಪ್ರದೇಶದಲ್ಲಿದ್ದು, ಪ್ರತಿಯೊಬ್ಬರಿಗೂ ಪ್ರತಿ ನಿತ್ಯ 100 ಲೀಟರ್ ನೀರು ಪೂರೈಸಬೇಕಾಗುತ್ತದೆ ಇಲ್ಲವೇ ಕನಿಷ್ಠ 55 ಲೀಟರ್ ಆದರೂ ಪೂರೈಕೆ ಮಾಡಬೇಕು. ಈ ನಿಟ್ಟಿನಲ್ಲಿ ಎಂಜಿನಿಯರುಗಳ ಯೋಜನೆ ಅತ್ಯಂತ ಮಹತ್ವದ್ದು ಎಂದರು. ಇದೇ ಸಂದರ್ಭದಲ್ಲಿ ನೂತನ ಎಂಜಿನಿಯರುಗಳಿಗೆ ಕಾರ್ಯಕ್ರಮದಲ್ಲಿ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಆಯುಕ್ತರಾದ ಫೌಜಿಯ ತರನ್ನಂ ಮತ್ತಿತರು ಪಾಲ್ಗೊಂಡಿದ್ದರು.

# ನಯನತಾರಾ ಮುಡಿ ಕೊಟ್ರಾ? ವೈರಲ್ ಫೋಟೋ ಸತ್ಯವೇನು?

● ವಿಕ್ರಮ ವಾಹಿನಿ । ಬೆಂಗಳೂರು

ರಾಕಿಂಗ್ ಸ್ಟಾರ್ ಯಶ್ ಅಭಿನಯದ ಬಹುನಿರೀಕ್ಷಿತ 'ಟಾಕ್ಸಿಕ್' ಚಿತ್ರದ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಹೊಸ ಸುದ್ದಿಗಳು ಹರಿದಾಡುತ್ತಿರುವ ಬೆನ್ನಲ್ಲೇ, ನಟಿ ನಯನತಾರಾ ಅವರ ತಲೆ ಬೋಳಿಸಿಕೊಂಡಿರುವ ಫೋಟೋವೊಂದು ವೈರಲ್ ಆಗಿದೆ. ಇದರಿಂದ ಅಭಿಮಾನಿಗಳಲ್ಲಿ ಕುತೂಹಲ ಮೂಡಿತ್ತು.



ವೈರಲ್ ಚಿತ್ರದಲ್ಲಿ ನಯನತಾರಾ ಸಂಪೂರ್ಣವಾಗಿ ತಲೆ ಬೋಳಿಸಿಕೊಂಡಿರುವಂತೆ ಕಾಣಿಸಿಕೊಂಡಿದ್ದು, ಅವರು ಚಿತ್ರದ ಪಾತ್ರಕ್ಕಾಗಿ ಮುಡಿ ಕೊಟ್ಟಿದ್ದಾರೆಯೇ ಎಂಬ ಚರ್ಚೆ ಆರಂಭವಾಗಿತ್ತು. ಆದರೆ ಈ ಫೋಟೋ ನಿಜವಲ್ಲ ಎಂಬ ಮಾಹಿತಿ ಹೊರಬಿದ್ದಿದೆ.

ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಚಿತ್ರವನ್ನು ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಬಳಸಿ ಎಡಿಟ್ ಮಾಡಲಾಗಿದೆ ಎನ್ನಲಾಗಿದ್ದು, ನಯನತಾರಾ ಯಾವುದೇ ಕಾರಣಕ್ಕೂ ಮುಡಿ ಕೊಟ್ಟಿಲ್ಲ. ಅವರು ಸದ್ಯ ತಮ್ಮ ಸಹಜ ಲುಕ್‌ನಲ್ಲೇ ಇದ್ದು, ವಿವಿಧ ಚಿತ್ರಗಳ ಚಿತ್ರೀಕರಣದಲ್ಲಿ ತೊಡಗಿಸಿಕೊಂಡಿದ್ದಾರೆ.

ಯಶ್ ಮತ್ತು ನಯನತಾರಾ ಅಭಿನಯದ 'ಟಾಕ್ಸಿಕ್' ಚಿತ್ರದ ಕುರಿತಂತೆ ಇಂತಹ ಹಲವು ವದಂತಿಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ವೈರಲ್ ಫೋಟೋಗಳನ್ನು ನಂಬುವ ಮುನ್ನ ಅವುಗಳ ಸತ್ಯಾಸತ್ಯತೆ ಪರಿಶೀಲಿಸುವಂತೆ ಅಭಿಮಾನಿಗಳಿಗೆ ಮನವಿ ಮಾಡಲಾಗಿದೆ.

# ಫಿಲಿಪೈನ್ಸ್ ಶಾಲೆಯಲ್ಲಿ ಗುಂಡಿನ ದಾಳಿ: ಇಬ್ಬರು ಸಾವು

● ವಿಕ್ರಮ ವಾಹಿನಿ । ಜಾಂಬೋಂಗಾ (ಫಿಲಿಪೈನ್ಸ್)

ದಕ್ಷಿಣ ಫಿಲಿಪೈನ್ಸ್‌ನ ಜಾಂಬೋಂಗಾ ನಗರದ ಪ್ರತಿಷ್ಠಿತ ಅಟೆನಿಯೊ ಡಿ ಜಾಂಬೋಂಗಾ ವಿಶ್ವವಿದ್ಯಾಲಯದ ಪ್ರೌಢಶಾಲಾ ಆವರಣದಲ್ಲಿ ಮಂಗಳವಾರ ಗುಂಡಿನ ದಾಳಿ ನಡೆದಿದ್ದು, ಇಬ್ಬರು ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ. 9ನೇ ತರಗತಿಯ ವಿದ್ಯಾರ್ಥಿಯೊಬ್ಬ ಸಹಪಾಠಿಯ ಮೇಲೆ ಗುಂಡು ಹಾರಿಸಿ, ಬಳಿಕ ತಾನೂ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಾಥಮಿಕ ಮಾಹಿತಿಯಂತೆ, ಆರೋಪಿ ವಿದ್ಯಾರ್ಥಿ ಎರಡು ಪಿಸ್ತೂಲ್‌ಗಳೊಂದಿಗೆ ಶಾಲಾ ಆವರಣ ಪ್ರವೇಶಿಸಿದ್ದ. ಮೊದಲು ಶಿಕ್ಷಕರೊಬ್ಬರ ಮೇಲೆ ಗುಂಡು ಹಾರಿಸಿದ್ದು, ಅವರು ಅಪಾಯದಿಂದ ಪಾರಾಗಿದ್ದಾರೆ. ಬಳಿಕ ಕಟ್ಟಡದ ನಾಲ್ಕನೇ ಮಹಡಿಗೆ ತೆರಳಿ 10ನೇ ತರಗತಿಯ ವಿದ್ಯಾರ್ಥಿಯೊಬ್ಬನಿಗೆ ಗುಂಡಿಕ್ಕಿದ್ದಾನೆ. ಘಟನೆಯಲ್ಲಿ ಇತರ ಇಬ್ಬರು ಗಾಯಗೊಂಡಿದ್ದಾರೆ.

ಕೃತ್ಯದ ಬಳಿಕ ಆರೋಪಿ ಐದನೇ ಮಹಡಿಗೆ ತೆರಳಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಘಟನೆಯ ಕೆಲವು ದೃಶ್ಯಗಳನ್ನು ಆತ ಧರಿಸಿದ್ದ ಕ್ಯಾಮೆರಾದ ಮೂಲಕ ಸಾಮಾಜಿಕ ಜಾಲತಾಣದಲ್ಲಿ ನೇರ ಪ್ರಸಾರ ಮಾಡಿದ್ದ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಪೊಲೀಸರು ಘಟನೆಯ ಡಿಜಿಟಲ್ ಸಾಕ್ಷ್ಯಗಳನ್ನು ಪರಿಶೀಲಿಸುತ್ತಿದ್ದಾರೆ.

ವಿದ್ಯಾರ್ಥಿ ಇಂತಹ ಕೃತ್ಯಕ್ಕೆ ಮುಂದಾಗಲು ಕಾರಣವೇನು ಎಂಬುದರ ಕುರಿತು ತನಿಖೆ ನಡೆಯುತ್ತಿದ್ದು, ಆತನ ಆನ್‌ಲೈನ್ ಗೇಮಿಂಗ್ ಮತ್ತು ಚಾಟ್‌ಗಳ ಇತಿಹಾಸವನ್ನೂ ಸೈಬರ್ ವಿಭಾಗ ಪರಿಶೀಲಿಸುತ್ತಿದೆ ಎಂದು ಆಂತರಿಕ ಸಚಿವ ಜೊನ್ವಿಕ್ ರೆಮುಲ್ಲಾ ತಿಳಿಸಿದ್ದಾರೆ. ಘಟನೆಯ ಸಂಪೂರ್ಣ ಹಿನ್ನೆಲೆ ಹಾಗೂ ಶಸ್ತ್ರಾಸ್ತ್ರಗಳು ವಿದ್ಯಾರ್ಥಿಯ ಕೈಗೆ ಹೇಗೆ ಬಂದವು ಎಂಬುದರ ಬಗ್ಗೆಯೂ ತನಿಖೆ ಮುಂದುವರಿದಿದೆ.

ಘಟನೆ ಬಳಿಕ ಶಾಲಾ ಆವರಣದಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದ್ದು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಯನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಯಿತು. ಗಾಯಗೊಂಡವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆಯಿಂದ ಶಾಲಾ ಸಮುದಾಯದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ.

ಆರೋಪಿ ವಿದ್ಯಾರ್ಥಿಯ ಕುಟುಂಬದ ಹಿನ್ನೆಲೆ, ಶಾಲೆಯಲ್ಲಿ ಆತನ ವರ್ತನೆ ಹಾಗೂ ಸಹಪಾಠಿಗಳೊಂದಿಗೆ ಹೊಂದಿದ್ದ ಸಂಬಂಧಗಳ ಬಗ್ಗೆಯೂ ಪೊಲೀಸರು ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಗುಂಡಿನ ದಾಳಿಗೆ ಪೂರ್ವಯೋಜನೆ ಇತ್ತೇ ಎಂಬುದನ್ನೂ ತನಿಖಾಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.

ಶಾಲಾ ಆವರಣಕ್ಕೆ ಎರಡು ಪಿಸ್ತೂಲ್‌ಗಳೊಂದಿಗೆ ವಿದ್ಯಾರ್ಥಿ ಹೇಗೆ ಪ್ರವೇಶಿಸಿದ ಎಂಬುದು ತನಿಖೆಯ ಪ್ರಮುಖ ಅಂಶವಾಗಿದೆ. ಶಸ್ತ್ರಾಸ್ತ್ರಗಳ ಮೂಲ ಪತ್ತೆಹಚ್ಚಲು ಪೊಲೀಸರು ಪ್ರಯತ್ನಿಸುತ್ತಿದ್ದು, ಲಭ್ಯವಿರುವ ದೃಶ್ಯಗಳು, ಸಂದೇಶಗಳು ಹಾಗೂ ಇತರ ಸಾಕ್ಷ್ಯಗಳನ್ನು ಆಧರಿಸಿ ಪ್ರಕರಣದ ತನಿಖೆ ಮುಂದುವರಿದಿದೆ.

ಘಟನೆಯ ಹಿನ್ನೆಲೆಯಲ್ಲಿ ಶಾಲಾ ಆಡಳಿತವು ವಿದ್ಯಾರ್ಥಿಗಳ ಸುರಕ್ಷತೆ ಕುರಿತು ತುರ್ತು ಕ್ರಮಗಳನ್ನು ಕೈಗೊಂಡಿದ್ದು, ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಪೊಲೀಸರೊಂದಿಗೆ ಸಹಕರಿಸುತ್ತಿದೆ.

# 'ಒಕ್ಕೂಟ ವ್ಯವಸ್ಥೆಯಲ್ಲಿ ಬೇರೆ ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಸಲ್ಲದು'

● ವಿಕ್ರಮ ವಾಹಿನಿ । ಬೆಂಗಳೂರು

"ಇದು ಒಕ್ಕೂಟ ವ್ಯವಸ್ಥೆ. ಯಾವುದೇ ರಾಜ್ಯವೂ ಇನ್ನೊಂದು ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಮಾಡಬಾರದು. ಪನ್ನೀರ್‌ಸೆಲ್ವಂ ಆಗಲಿ ಅಥವಾ ಯಾರೇ ಆಗಲಿ, ಅವರಿಗೆ ಕನಿಷ್ಠ ಸಂಸ್ಕೃತಿ ಇರಬೇಕು" ಎಂದು ಸಿಎಂ ಡಿ ಕೆ ಶಿವಕುಮಾರ್ ತಿರುಗೇಟು ನೀಡಿದರು.



ಬೆಂಗಳೂರಿನಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಂಗಳವಾರ ಪ್ರತಿಕ್ರಿಯೆ ನೀಡಿದರು.

ಹನೂರು ಶೂಟೌಟ್ ಪ್ರಕರಣದಲ್ಲಿ ಸಿಬಿಐ ತನಿಖೆ ನಡೆಯಬೇಕು ಎಂದು ತಮಿಳುನಾಡು ಮಾಜಿ ಸಿಎಂ ಪನೀರ್ ಸೇಲ್ವಂ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ತಮಿಳುನಾಡಿನ ಕಾನೂನು ಮತ್ತು ಸುವ್ಯವಸ್ಥೆಯ ಸಮಸ್ಯೆಯಲ್ಲಿ ನಾನು ಯಾವುದೇ ರೀತಿಯಲ್ಲಿ ಮಧ್ಯಪ್ರವೇಶಿಸಲು ಸಾಧ್ಯವಿಲ್ಲ. ಪ್ರತಿಯೊಂದು ರಾಜ್ಯಕ್ಕೂ ತನ್ನದೇ ಆದ ಸಮಸ್ಯೆ ಇರುತ್ತದೆ. ಅದನ್ನು ಅವರೂ ತಿಳಿದುಕೊಳ್ಳಬೇಕು.

ನಮ್ಮ ರಾಜ್ಯವನ್ನು ಹೇಗೆ ರಕ್ಷಿಸಿಕೊಳ್ಳಬೇಕು ಎಂಬುದು ನಮಗೆ ತಿಳಿದಿದೆ. ಅವರು ತಮ್ಮ ಕೆಲಸವನ್ನು ಮಾಡಲಿ. ನಾವು ನಮ್ಮ ಕೆಲಸವನ್ನು ಮಾಡುತ್ತೇವೆ. ಅವರ ಆಡಳಿತದಲ್ಲಿ ಹಸ್ತಕ್ಷೇಪ ಮಾಡಲು ನಾನು ಬಯಸುವುದಿಲ್ಲ. ನಮ್ಮ ರಾಜ್ಯಕ್ಕಿರುವ ಪವಿತ್ರತೆಯನ್ನು ನಾವು ಕಾಪಾಡಿಕೊಳ್ಳಬೇಕು, ರಕ್ಷಿಸಬೇಕು" ಎಂದು ತಿಳಿಸಿದರು.

ಪ್ರಕರಣದ ತನಿಖೆ ಆಗಬೇಕು ಎಂದು ತಮಿಳುನಾಡು ಸಿಎಂ ವಿಜಯ್ ಹೇಳಿಕೆ ನೀಡಿರುವ ಬಗ್ಗೆ ಕೇಳಿದಾಗ, "ನಾನು ಇದರ ಬಗ್ಗೆ ಪ್ರತಿಕ್ರಿಯಿಸಲು ಬಯಸುವುದಿಲ್ಲ. ಇದು ಸಾಮಾನ್ಯ ಚರ್ಚೆ. ಅವರು ತಮ್ಮ ಕೆಲಸವನ್ನು ಮಾಡಬೇಕು, ನಾವು ನಮ್ಮ ಕೆಲಸವನ್ನು ಮಾಡಬೇಕು" ಎಂದು ತಿಳಿಸಿದರು.


ವಿಧಾನಸಭೆ ನೂತನ ಉಪಸಭಾಧ್ಯಕ್ಷರಾಗಿ ಆಯ್ಕೆಯಾದ ಮಾಂಕಾಳ ವೈದ್ಯ ಅವರನ್ನು ಸಿಎಂ ಡಿ ಕೆ ಶಿವಕುಮಾರ್ ಅವರು ಮಂಗಳವಾರ ಅಭಿನಂದಿಸಿದರು.

# ಅಭಿಮನ್ಯುವಿಗೆ ವಿಶ್ರಾಂತಿ; ಅಂಬಾರಿ ಯಾರಿಗೆ?

● ವಿಕ್ರಮ ವಾಹಿನಿ । ಮೈಸೂರು

ವಿಶ್ವವಿಖ್ಯಾತ ಮೈಸೂರು ದಸರಾ ಜಂಬೂ ಸವಾರಿಗೆ ಸಿದ್ಧತೆ ಆರಂಭವಾಗಿದ್ದು, ಈ ಬಾರಿ ಚಿನ್ನದ ಅಂಬಾರಿ ಹೊರುವ ಗಜರಾಜ ಯಾರು ಎಂಬ ಕುತೂಹಲ ಮೂಡಿದೆ. 2020ರಿಂದ ಸತತವಾಗಿ ಅಂಬಾರಿ ಹೊತ್ತಿದ್ದ ದಸರಾ ಕ್ಯಾಪ್ಟನ್ ಅಭಿಮನ್ಯುವಿಗೆ 60 ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಈ ಬಾರಿ ವಿಶ್ರಾಂತಿ ನೀಡಲಾಗಿದೆ.

ಅಭಿಮನ್ಯುವಿನ ಬದಲಿಗೆ ಧನಂಜಯ, ಮಹೇಂದ್ರ, ಸುಗ್ರೀವ ಹಾಗೂ ಪ್ರಶಾಂತ ಆನೆಗಳ ಪೈಕಿ ಒಬ್ಬರನ್ನು ಅಂಬಾರಿ ಹೊರುವುದಕ್ಕೆ ಆಯ್ಕೆ ಮಾಡುವ ಸಾಧ್ಯತೆಯಿದೆ. ಆನೆಗಳ ಸಾಮರ್ಥ್ಯ, ತರಬೇತಿ ಹಾಗೂ ಅನುಭವ ಆಧರಿಸಿ ಅಂತಿಮ ನಿರ್ಧಾರ ಕೈಗೊಳ್ಳಲಾಗುತ್ತದೆ.

ಆ.26ರಂದು ಗಜಪಯಣ ಆರಂಭವಾಗಲಿದ್ದು, ಮೊದಲ ಹಂತದಲ್ಲಿ ಧನಂಜಯ, ಮಹೇಂದ್ರ, ಏಕಲವ್ಯ, ಪ್ರಶಾಂತ, ಗೋಪಿ, ಶ್ರೀರಾಮ, ಸುಗ್ರೀವ, ಲಕ್ಷ್ಮೀ ಹಾಗೂ ಕಾವೇರಿ ಸೇರಿದಂತೆ ಒಂಬತ್ತು ಆನೆಗಳು ಮೈಸೂರಿಗೆ ಆಗಮಿಸಲಿವೆ. ತುರ್ತು ಸಂದರ್ಭಕ್ಕಾಗಿ ಭೀಮ ಹಾಗೂ ಹರ್ಷನನ್ನು ಮೀಸಲು ಆನೆಗಳಾಗಿ ಇರಿಸಲಾಗಿದೆ.

ಸುಮಾರು 25 ವರ್ಷಗಳಿಂದ ದಸರಾ ಗಜಪಡೆಯ ಭಾಗವಾಗಿದ್ದ ಅಭಿಮನ್ಯು, ಹಲವು ವರ್ಷಗಳ ಕಾಲ ಅಂಬಾರಿ ಹೊತ್ತು ಜನರ ಮೆಚ್ಚುಗೆ ಗಳಿಸಿದ್ದ. ಈ ಬಾರಿ ಆತನ ಅನುಪಸ್ಥಿತಿಯಲ್ಲಿ ಹೊಸ ಅಂಬಾರಿ ಆನೆಯ ಆಯ್ಕೆ ದಸರಾ ಅಭಿಮಾನಿಗಳ ಕುತೂಹಲ ಹೆಚ್ಚಿಸಿದೆ.

# ಹಸಿವು ಮತ್ತು ಆಹಾರವೇ ಜೀವಿಯ ಸರ್ವಸ್ವ: ರಾಘವೇಶ್ವರ ಶ್ರೀ

● ವಿಕ್ರಮ ವಾಹಿನಿ । ಗೋಕರ್ಣ

ಹಸಿವು ಹಾಗೂ ಆಹಾರ ಇವೆರಡೇ ಜೀವಿಯ ಎಲ್ಲವನ್ನೂ ನಿರ್ಧರಿಸುತ್ತದೆ. ಹಾಗಾಗಿ ವೇದ ಪರಂಪರೆಯಲ್ಲಿ 'ಅಗ್ನಿಸೋಮಾತ್ಮಕಂ ಜಗತ್' ಎಂದಿದ್ದು, ಅಗ್ನಿ ಎಂದರೆ ಹಸಿವಾಗಿದ್ದು, ಸೋಮ ಎಂದರೆ ಆಹಾರವಾಗಿದೆ. ಆಹಾರವನ್ನು ತಿಳಿದುಕೊಳ್ಳಲು ಹಸಿವನ್ನು ಹಾಗೂ ಹಸಿವಿನ ಮೂಲವನ್ನು ಮೊದಲು ಅರಿತುಕೊಳ್ಳಬೇಕು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 18.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ 'ಜಠರಾಗ್ನಿ'ಯ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಆಧುನಿಕ ವಿಜ್ಞಾನದಲ್ಲಿ ದೇಹವೆಂದರೆ ಆಮ್ಲಜನಕ, ಇಂಗಾಲ, ಪರಮಾಣು ಎಂಬುದಾಗಿ ವಿಶ್ಲೇಷಿಸುತ್ತಾರೆ. ಇವುಗಳನ್ನು ಅನ್ವೇಷಿಸಲು ಆಧುನಿಕರು ದೊಡ್ಡ ಸಾಧನೆಯನ್ನೇ ಮಾಡಿದ್ದಾರೆ. ಅದನ್ನು ಅಲ್ಲಗಳೆಯುವಂತಿಲ್ಲ. ಆದರೆ ನಾವು ಎಂದರೆ ಏನು? ಎಂದಾಗ



ಕೇವಲ ಆಮ್ಲಜನಕ, ಇಂಗಾಲ, ಪರಮಾಣುಗಳು ಎನ್ನಲಾಗದು. ಭಾರತೀಯ ದೃಷ್ಟಿಯಲ್ಲಿ ದೇಹವೆಂದರೆ ಪಂಚಭೂತಗಳ ಸಂಯೋಜನೆಯಾಗಿದ್ದು, ಗಟ್ಟಿಯಾದ ಭಾಗಗಳು ಪೃಥ್ವಿ, ದ್ರವಾಂಶ ನೀರು, ಉಷ್ಣಾಂಶ ಅಗ್ನಿ, ಗಾಳಿಯು ವಾಯು, ದೇಹದಲ್ಲಿರುವ ಸ್ಥಳಾವಕಾಶವೇ ಆಕಾಶವಾಗಿದೆ. ಪಂಚಭೂತಗಳು ದೇಹದೊಳಗೆ ಸಪ್ತ ಧಾತುಗಳಾಗಿ ಪರಿವರ್ತಿತವಾಗುವುದಕ್ಕೆ ಅಗ್ನಿಯು ಕಾರಣವಾಗಿದೆ ಎಂದು ಅಭಿಪ್ರಾಯಪಟ್ಟರು.

ದೇಹದಲ್ಲಿ ಪ್ರಮುಖವಾಗಿ 18 ಅಗ್ನಿಗಳಿದ್ದು, ದೇಹದ ಎಲ್ಲಾ ಕಡೆಗಳಲ್ಲಿ ಅಗ್ನಿ ವ್ಯಾಪಿಸಿದೆ. ರಸ – ರಕ್ತ – ಮಾಂಸ – ಮೇದಸ್ಸು – ಅಸ್ತಿ – ಮಜ್ಜೆ – ಶುಕ್ರ ಎಂಬ ಸಪ್ತಧಾತುಗಳಲ್ಲಿಯೂ ಧಾತ್ವಗ್ನಿಗಳಿದ್ದು ಈ ಅಗ್ನಿಯಿಂದಲೇ ಮುಂದಿನ ಧಾತುಗಳು ಉಂಟಾಗುತ್ತಾ ಸಾಗುತ್ತದೆ. ಇವೆಲ್ಲವೂ ಅಗ್ನಿಯ ಕಾರ್ಯವಾಗಿದೆ.

ಎಲ್ಲಾ ಕಡೆಯಲ್ಲೂ ಸಮಾನತೆ ಎಂಬುದನ್ನು ಹುಡುಕುವುದು ಮೂರ್ಖತನವಾಗುತ್ತದೆ. ಸೃಷ್ಟಿಯೆಂಬುದು ವೈವಿಧ್ಯತೆಯಾಗಿದ್ದು. ಮುಕ್ತಿಯಲ್ಲಿ ಮಾತ್ರ ಏಕತೆಯನ್ನು ಕಾಣಬಹುದು. ಕೈಯಿಗಳು ಇರುವಷ್ಟು ಉದ್ದ ಮೂಗಿಲ್ಲ. ಹಾಗಾಗಿ ಎಲ್ಲೆಡೆ ಸಮಾನತೆಯನ್ನು ಹುಡುಕಲಾಗದು, ದೇಹದಲ್ಲೂ ಎಲ್ಲವೂ ಸಮಾನವಾಗಿರಲು ಸಾಧ್ಯವಿಲ್ಲ. ಆಯಾಯ ಧಾತುಗಳು ಎಷ್ಟಿರಬೇಕೋ ಅಷ್ಟಿರಬೇಕು. ಇದು ಸೃಷ್ಟಿಯ ಅದ್ಭುತ ಎಂದು ಅಭಿಪ್ರಾಯಪಟ್ಟರು.

ಕೊಲ್ಲೂರು ದೇವಾಲಯದ ಪ್ರಧಾನ ಅರ್ಚಕ ವೇ. ಮೂ. ಶ್ರೀಧರ ಅಡಿಗ, ಶಿಕ್ಷಣ ತಜ್ಞ ಎಮ್. ಆರ್. ಹೆಗಡೆ ಉಡುಪಿ ಉಪಸ್ಥಿತರಿದ್ದು ಶ್ರೀಗಳ ಆಶೀರ್ವಾದ ಪಡೆದರು. ಹರ್ಷ ಮಾಂಕನಮೂಲೆ ಕುಟುಂಬದವರು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ಜಿ.ವಿ ಹೆಗಡೆ ಗೋಕರ್ಣ ದಂಪತಿಗಳು ದಿನಪ್ರಧಾನರಾಗಿ ಉಪಸ್ಥಿತರಿದ್ದರು.

# ಗಾಲೆ ಟೆಸ್ಟ್‌ನಲ್ಲಿ ಭಾರತ ಮೇಲುಗೈ: ಲಂಕಾಗೆ 372 ರನ್ ಗುರಿ



● ವಿಕ್ರಮ ವಾಹಿನಿ । ಗಾಲೆ

ಭಾರತ ಹಾಗೂ ಶ್ರೀಲಂಕಾ ನಡುವಿನ ಮೊದಲ ಟೆಸ್ಟ್ ಪಂದ್ಯ ರೋಚಕ ಘಟ್ಟ ತಲುಪಿದ್ದು, ಭಾರತ ಶ್ರೀಲಂಕಾಗೆ 372 ರನ್‌ಗಳ ಕಠಿಣ ಗೆಲುವಿನ ಗುರಿ ನೀಡಿದೆ. ನಾಲ್ಕನೇ ದಿನದಾಟದ ಅಂತ್ಯಕ್ಕೆ ಶ್ರೀಲಂಕಾ 4 ವಿಕೆಟ್‌ಗೆ 84 ರನ್ ಗಳಿಸಿದ್ದು, ಗೆಲುವಿಗೆ ಇನ್ನೂ 288 ರನ್‌ಗಳ ಅಗತ್ಯವಿದೆ.

ಮೊದಲ ಇನ್ನಿಂಗ್ಸ್‌ನಲ್ಲಿ ಭಾರತ 178 ರನ್‌ಗಳ ಮುನ್ನಡೆ ಸಾಧಿಸಿತ್ತು. ಬಳಿಕ ಎರಡನೇ ಇನ್ನಿಂಗ್ಸ್‌ನಲ್ಲಿ 193 ರನ್‌ಗಳಿಗೆ ಆಲೌಟ್ ಆಯಿತು. ರಿಷಭ್ ಪಂತ್ 66, ದೇವದತ್ ಪಡಿಕ್ಕಲ್ 44 ಹಾಗೂ ಕೆ.ಎಲ್. ರಾಹುಲ್ 35 ರನ್ ಗಳಿಸಿ ತಂಡದ ಮುನ್ನಡೆ ಹೆಚ್ಚಿಸಲು ನೆರವಾದರು.

372 ರನ್ ಗುರಿ ಬೆನ್ನಟ್ಟಿದ ಶ್ರೀಲಂಕಾ ಆರಂಭದಲ್ಲೇ ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ದಿನದ ಅಂತ್ಯಕ್ಕೆ ಸೋನಲ್ ದಿನುಷಾ 25 ಹಾಗೂ ಧನಂಜಯ ಡಿ ಸಿಲ್ವಾ 31 ರನ್‌ಗಳೊಂದಿಗೆ ಕ್ರೀಸ್‌ನಲ್ಲಿದ್ದಾರೆ. ಭಾರತಕ್ಕೆ ಗೆಲುವಿಗೆ ಇನ್ನೂ ಆರು ವಿಕೆಟ್‌ಗಳ ಅಗತ್ಯವಿದೆ.

ಗಾಲೆ ಮೈದಾನದಲ್ಲಿ ಇದುವರೆಗಿನ ಅತ್ಯಧಿಕ ಯಶಸ್ವಿ ರನ್ ಚೇಸ್ 342 ರನ್ ಆಗಿದ್ದು, 2022ರಲ್ಲಿ ಪಾಕಿಸ್ತಾನ ಈ ಗುರಿಯನ್ನು ಬೆನ್ನಟ್ಟಿತ್ತು. ಹೀಗಾಗಿ ಶ್ರೀಲಂಕಾ 372 ರನ್ ಗುರಿ ಸಾಧಿಸಿದರೆ ಗಾಲೆಯಲ್ಲಿ ಹೊಸ ದಾಖಲೆ ನಿರ್ಮಾಣವಾಗಲಿದೆ. ಸದ್ಯದ ಸ್ಥಿತಿಯಲ್ಲಿ ಭಾರತ ಗೆಲುವಿನತ್ತ ಬಲವಾದ ಹೆಜ್ಜೆ ಇಟ್ಟಿದೆ.

ಶ್ರೀಲಂಕಾ ತಂಡದ ಆರಂಭಿಕ ಬ್ಯಾಟರ್‌ಗಳು ಭಾರತೀಯ ಬೌಲರ್‌ಗಳ ದಾಳಿಯನ್ನು ಎದುರಿಸಲು ಪರದಾಡಿದರು. ಭಾರತದ ಸ್ಪಿನ್ನರ್‌ಗಳು ಪಿಚ್‌ನಲ್ಲಿನ ತಿರುವಿನ ಲಾಭ ಪಡೆದು ಆತಿಥೇಯ ತಂಡದ ಮೇಲೆ ಒತ್ತಡ ಹೆಚ್ಚಿಸಿದರು. ನಾಲ್ಕನೇ ದಿನದ ಕೊನೆಯ ಹಂತದಲ್ಲಿ ವಿಕೆಟ್‌ಗಳು ಉರುಳಿದ್ದರಿಂದ ಶ್ರೀಲಂಕಾದ ಗೆಲುವಿನ ಸಾಧ್ಯತೆ ಮತ್ತಷ್ಟು ಕಠಿಣವಾಗಿದೆ.

ಭಾರತದ ಪರ ಎರಡನೇ ಇನ್ನಿಂಗ್ಸ್‌ನಲ್ಲಿ ರಿಷಭ್ ಪಂತ್ ಆಕ್ರಮಣಕಾರಿ ಬ್ಯಾಟಿಂಗ್ ನಡೆಸಿ ತಂಡದ ಮೊತ್ತ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು. ದೇವದತ್ ಪಡಿಕ್ಕಲ್ ಹಾಗೂ ಕೆ.ಎಲ್. ರಾಹುಲ್ ಕೂಡ ಉಪಯುಕ್ತ ರನ್‌ಗಳಿಸಿ ಶ್ರೀಲಂಕಾ ಮುಂದೆ ದೊಡ್ಡ ಗುರಿ ನಿಲ್ಲಿಸಲು ನೆರವಾದರು.

ಕೊನೆಯ ದಿನ ಶ್ರೀಲಂಕಾ ಗೆಲುವಿಗೆ 288 ರನ್‌ಗಳ ಅಗತ್ಯವಿದ್ದು, ಭಾರತಕ್ಕೆ ಉಳಿದ ಆರು ವಿಕೆಟ್‌ಗಳನ್ನು ಪಡೆಯಬೇಕಿದೆ. ಗಾಲೆ ಪಿಚ್‌ನಲ್ಲಿ ಸ್ಪಿನ್ನರ್‌ಗಳಿಗೆ ನೆರವು ಸಿಗುವ ಸಾಧ್ಯತೆ ಇರುವುದರಿಂದ ಅಂತಿಮ ದಿನದಾಟದಲ್ಲಿ ರೋಚಕ ಪೈಪೋಟಿ ನಿರೀಕ್ಷಿಸಲಾಗಿದೆ.

# 'ಸರ್ಕಾರದ ಯೋಜನೆಗಳ ಸಂಪೂರ್ಣ ಮಾಹಿತಿ ಮಾಧ್ಯಮದವರಿಗೆ ತಲುಪಲಿ'

● ವಿಕ್ರಮ ವಾಹಿನಿ । ಕಾರವಾರ

ಸರ್ಕಾರದ ಜನಪರ ಯೋಜನೆಗಳ ಸಂಪೂರ್ಣ ಹಾಗೂ ನಿಖರ ಮಾಹಿತಿ ಸಾರ್ವಜನಿಕರಿಗೆ, ಅದರಲ್ಲೂ ಕಟ್ಟಕಡೆಯ ಫಲಾನುಭವಿಗಳಿಗೆ ತಲುಪಿಸುವಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಪಿಐಬಿ ಹೆಚ್ಚುವರಿ ಮಹಾನಿರ್ದೇಶಕ ಎಸ್.ಜಿ. ರವೀಂದ್ರ ಹೇಳಿದರು.

ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ), ಉತ್ತರ ಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ವಾರ್ತಾಲಾಪ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಪಿಎಂ ಕಿಸಾನ್ ಸಮ್ಮಾನ್ ನಿಧಿ, ಫಸಲ್ ಬಿಮಾ ಯೋಜನೆ, ಧನ-ಧಾನ್ಯ ಕೃಷಿ ಯೋಜನೆ, ನಮೋ ಡ್ರೋನ್ ದೀದಿ, ಇ-ನಾಮ್, ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆ, ಸ್ಟಾರ್ಟ್‌ಅಪ್ ಹಾಗೂ ಎಸ್‌ಟಿಇಎಂ ಸೇರಿದಂತೆ ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳ ಅನುಷ್ಠಾನ ಮತ್ತು ಪ್ರಗತಿ ಕುರಿತು ಅವರು ಮಾಹಿತಿ ನೀಡಿದರು. ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಮಾಧ್ಯಮಗಳು ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಉತ್ತರ ಕನ್ನಡ ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯ, ವಾರ್ತಾಲಾಪ ಕಾರ್ಯಾಗಾರವು




ಮಾಧ್ಯಮ ಪ್ರತಿನಿಧಿಗಳಿಗೆ ಯೋಜನೆಗಳ ಕುರಿತು ಸಂಪೂರ್ಣ ಮಾಹಿತಿ ಪಡೆಯಲು ಹಾಗೂ ಸಂದೇಹಗಳನ್ನು ನಿವಾರಿಸಿಕೊಳ್ಳಲು ಉತ್ತಮ ವೇದಿಕೆಯಾಗಿದೆ ಎಂದರು. ಯೋಜನೆಗಳ ನಿಖರ ಮಾಹಿತಿ ಪಡೆದು ಪರಿಣಾಮಕಾರಿ ವರದಿ ಮಾಡಲು ಇದು ಸಹಕಾರಿಯಾಗಲಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ ಸಿಇಒ ದಿಲೀಷ್ ಶಶಿ ಮಾತನಾಡಿ, ಮಾಧ್ಯಮಗಳಲ್ಲಿ ಪ್ರಕಟವಾಗುವ ಜನಸಮಸ್ಯೆಗಳನ್ನು ಆಡಳಿತವು ಗಮನಿಸಿ ಸೂಕ್ತ ಕ್ರಮ ಕೈಗೊಳ್ಳುತ್ತದೆ. ಜಿಲ್ಲಾಡಳಿತ ಮತ್ತು ಮಾಧ್ಯಮಗಳ ನಡುವೆ ನಿರಂತರ ಸಂವಹನ ಅಗತ್ಯ ಎಂದು ಹೇಳಿದರು.

ಎಸ್ಪಿ ದೀಪನ್ ಎಂ.ಎನ್. ಮಾತನಾಡಿ, ಸುಳ್ಳು ಸುದ್ದಿ ಹಾಗೂ ವದಂತಿಗಳ ಹರಡುವಿಕೆ ತಡೆಯುವುದು ಇಂದಿನ ಪ್ರಮುಖ ಸವಾಲಾಗಿದೆ. ಸೈಬರ್ ಅಪರಾಧ, ಮಾದಕವಸ್ತು ನಿಯಂತ್ರಣ ಹಾಗೂ ಹೊಸ ಬಿಎನ್‌ಎಸ್ ಕಾಯ್ದೆಗಳ ಕುರಿತು ಮಾಧ್ಯಮಗಳು ಅರಿವು ಹೊಂದಿರಬೇಕು ಎಂದರು.

ಕಾರ್ಯಾಗಾರದಲ್ಲಿ ಅರಣ್ಯ ಸಂರಕ್ಷಣೆ, ಬುಡಕಟ್ಟು ಸಮುದಾಯಗಳ ಹಕ್ಕುಗಳು, ಮಾನವ-ವನ್ಯಜೀವಿ ಸಂಘರ್ಷ, ನಶಾಮುಕ್ತ ಭಾರತ ಅಭಿಯಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಮೀನುಗಾರಿಕೆ, ಆರ್ಥಿಕ ಸೇರ್ಪಡೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಅಧಿಕಾರಿಗಳು ಮಾಹಿತಿ ನೀಡಿದರು.

ಕಾರ್ಯಕ್ರಮದ ಅಂಗವಾಗಿ ನಶಾಮುಕ್ತ ಭಾರತ ಅಭಿಯಾನದ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು. ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳು ಭಾಗವಹಿಸಿದ್ದರು.

# ಇ.ಡಿ. ದಾಳಿ ಒಳ್ಳೆಯ ಬೆಳವಣಿಗೆ: ಅಶ್ವತ್ಥನಾರಾಯಣ್

● ವಿಕ್ರಮ ವಾಹಿನಿ । ಬೆಂಗಳೂರು

ಕೆಪಿಎಸ್‌ಸಿಯಲ್ಲಿ ಭ್ರಷ್ಟಾಚಾರ, ಅಧಿಕಾರ ದುರುಪಯೋಗ, ಮನ ಬಂದಂತೆ ನೇಮಕಾತಿ ನಡೆಯುತ್ತಿತ್ತು. ಹಣ ಪಡೆದು ಭ್ರಷ್ಟಾಚಾರ ಮಾಡಿ ನೇಮಕಾತಿ ಆಗುತ್ತಿತ್ತು. ಈ ಸಂಬಂಧ ಇ.ಡಿ. ದಾಳಿ ಆದುದು ಒಳ್ಳೆಯ ಬೆಳವಣಿಗೆ ಎಂದು ಎಂದು ಮಾಜಿ ಉಪ ಮುಖ್ಯಮಂತ್ರಿ ಮತ್ತು ಶಾಸಕ ಡಾ. ಸಿ.ಎನ್ .ಅಶ್ವತ್ಥನಾರಾಯಣ್ ಅವರು ತಿಳಿಸಿದ್ದಾರೆ.

ಮಾಧ್ಯಮಗಳ ಪ್ರಶ್ನೆಗೆ ಇಂದು ಉತ್ತರಿಸಿದ ಅವರು, ಭ್ರಷ್ಟಾಚಾರ ನಿರ್ಮೂಲನೆ ನಡೆದು ಸ್ವಜನ ಪಕ್ಷಪಾತದಿಂದ ದೂರವಿದ್ದು ಪಾರದರ್ಶಕ ನೇಮಕಾತಿ ನಡೆಯಬೇಕು ಎಂದು ತಿಳಿಸಿದರು. ಮೆರಿಟ್ ಆಧರಿತ ನೇಮಕಾತಿ ಆಗಬೇಕು ಎಂದು ಆಶಿಸಿದರು.

ಇ.ಡಿ. ತನಿಖೆಯಂಥ ಸ್ವಚ್ಛಗೊಳಿಸುವ ಕಾರ್ಯ ಸತತವಾಗಿ ನಡೆಯಲಿ. ಹಿನ್ನೆಲೆ, ಮುನ್ನೆಲೆಯಲ್ಲಿ ಇರುವವರ ಹಾಗೂ ಹಸ್ತಕ್ಷೇಪ ಮಾಡಿದವರ ಮೇಲೆ ಸಂಪೂರ್ಣ ನಿರ್ದಾಕ್ಷಿಣ್ಯವಾಗಿ ಕ್ರಮ ವಹಿಸಿ ಅವರನ್ನು ಬಂಧಿಸಿ ಶಿಕ್ಷೆ ಕೊಡಬೇಕಿದೆ ಎಂದು ನುಡಿದರು.

ಹಣ ದುರುಪಯೋಗವನ್ನು ಹಿಂದಿನ ಸಿಎಂ ಒಪ್ಪಿಕೊಂಡಿದ್ದರು..

ನಾಗೇಂದ್ರ ಅವರ ರಾಜೀನಾಮೆ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ರಾಜಕೀಯವಾಗಿ ಕಾಂಗ್ರೆಸ್ ಪಕ್ಷ



ಎಲ್ಲವನ್ನೂ ಬಿಟ್ಟು ನಿಂತಂತಿದೆ; ಏನು ಮಾಡಿದರೂ ಜಯಿಸುತ್ತೇವೆ; ಏನು ಮಾಡಿದರೂ ನಡೆಯುತ್ತದೆ ಎಂಬ ಸ್ಥಿತಿ ಅವರದು. ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಹಣ ದುರುಪಯೋಗ ಆದುದನ್ನು ಒಪ್ಪಿಕೊಂಡಿದ್ದರು. ವಾಲ್ಮೀಕಿ ನಿಗಮದ ವಾಲ್ಮೀಕಿ ಜನಾಂಗದ ಜನರಿಗೆ ಅನ್ಯಾಯ ಆಗಿದೆ ಎಂದು ಒಪ್ಪಿಕೊಂಡಿದ್ದರು ಎಂದು ಗಮನ ಸೆಳೆದರು. ತನಿಖೆ ನಡೆಯುತ್ತಿರುವಾಗಲೇ ಮತ್ತೊಮ್ಮೆ ಸಚಿವರನ್ನಾಗಿ ಮಾಡಿದ್ದಾರೆ ಎಂದು ಟೀಕಿಸಿದರು.

ಕಾಂಗ್ರೆಸ್ ಸರಕಾರಕ್ಕೆ ಯಾವ ನೈತಿಕತೆ ಇದೆ? ಅವರಿಗೆ ಕಾನೂನಿನ ಬಗ್ಗೆ ಗೌರವ ಇದೆಯೇ ಎಂದರು. ನಾವು ಪ್ರತಿಪಕ್ಷವಾಗಿ ಇದನ್ನು ಬಯಲಿಗೆ ತರುತ್ತಿದ್ದೇವೆ ಎಂದು ಹೇಳಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 142,